ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 161 ಸಂಚಿಕೆ– 161 | PAGE-8 ಪುಟ–8 | ಬುಧವಾರ 06.08.2025 | RS.2/- ಬೆಲೆ 2/–




## ಚಿಟಗುಪ್ಪಾ ತಾಲ್ಲೂಕು ಆಡಳಿತ ವಿರುದ್ಧ ರೈತರ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪಾ. ಇಲ್ಲಿನ ತಾಲ್ಲೂಕು ಆಡಳಿತ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಚಿಟಗುಪ್ಪಾ ತಾಲ್ಲೂಕಿನ ಬೆಮಳಖೇಡಾ ಗ್ರಾಮದ ರೈತ ತಮ್ಮ ಜಮಿನಿನ ಸರ್ವೆ ಸಂಖ್ಯೆ 440 ಇದರ ಪಹಣಿ ತಿದ್ದು ಪಡಿಗೆ ಅರ್ಜಿ 19 ಡಿಸೆಂಬರ್ 2024 ರಂದು ನೀಡಿದ್ದಾರೆ. ಇವರ ಅರ್ಜಿ ವಿಲೆವಾರಿ ಇಲ್ಲಿಯವರೆಗೆ ಮಾಡದೇ ವಿನಾಕಾರಣ ಸತಾಯಿಸಲಾಗುತ್ತಿದೆ ಎನ್ನಲಾಗಿದೆ.

ಈ ಸಂಬಂದ ರೈತ ಚಿಟಗುಪ್ಪಾ ತಹಸೀಲ್ ಕಛೇರಿ ಗೆ ತೆರಳಿದೆ ಅರಣ್ಯ ಇಲಾಖೆಯವರಿಗೆ ಕಡತ ಕಳುಹಿಸಲಾಗಿದೆ ಎನ್ನುತ್ತಾರೆ. ಅರಣ್ಯ ಇಲಾಖೆಯವರಿಗೆ ವಿಚಾರಿಸಿದರೆ ನಮಗೆ ಕಡತ ಬಂದಿಲ್ಲ ನಮಗ್ಯಾಕೆ ಬರುತ್ತದೆ ಎನ್ನುವುದರ ಮೂಲಕ ರೈತನ ಜೀವನ ಜೊತೆ ಚಲ್ಲಾಟ ಆಡುತ್ತಿದ್ದಾರೆ. ಈ ಸಂಬಂಧ

(2ನೇ ಪುಟ ನೋಡಿ)

# ಹೈಕೋರ್ಟ್ ತರಾಟೆ

## ಸಾರಿಗೆ ನೌಕರರ ಮುಷ್ಕರ ವಾಪಸ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.5: ರಾಜ್ಯಾದ್ಯಂತ ಸರ್ಕಾರಿ ಸಾರಿಗೆ ನಿಗಮಗಳ ನೌಕರರ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ತಡೆಯಾಜ್ಞೆ ನೀಡಿದ್ದ ಮಧ್ಯಂತರ ಆದೇಶವನ್ನು ವಿಸ್ತರಿಸಿರುವ ಕರ್ನಾಟಕ ಹೈಕೋರ್ಟ್, ನ್ಯಾಯಾಲಯದ ಆದೇಶ ಉಲ್ಲಂಘಿಸಿ ಮುಷ್ಕರ ಮುಂದುವರಿಸಿದರೆ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುವುದಾಗಿ ಮಂಗಳವಾರ ಎಚ್ಚರಿಸಿದೆ.

ಸಾರಿಗೆ ನೌಕರರ ಮುಷ್ಕರ ಪ್ರಶ್ನಿಸಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಮುಖ್ಯ ನಾಯ್ಯಮೂರ್ತಿ ವಿಭು ಬಕ್ರು, ನ್ಯಾಯಮೂರ್ತಿ ಸಿ.ಎಂ.ಜೋಶಿ ಅವರ ವಿಭಾಗೀಯ ಪೀಠ, ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ(ಜೆಎಸಿ) ಯನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತು.

ಹೈಕೋರ್ಟ್ ಮುಷ್ಕರ ನಡೆಸಬಾರದೆಂದು ಆದೇಶ ನೀಡಿದ್ದರೂ, ನೀವು ಅದನ್ನು ಪಾಲಿಸಿಲ್ಲ. ಎಸ್ಮಾ ಜಾರಿಯಾಗಿದ್ದರೂ ಮುಷ್ಕರ ನಡೆಸುವುದು ಕಾನೂನು ಬಾಹಿರ. ಎಸ್ಮಾ ಕಾಯಿದೆಯಡಿ ಸಂಘಟನೆಯ ಪದಾಧಿಕಾರಿಗಳನ್ನು ಬಂಧಿಸಬಹುದು. ನಾಳೆ ಮುಷ್ಕರ ನಿಂತಿರುವ ಬಗ್ಗೆ ಮಾಹಿತಿ ನೀಡಬೇಕೆಂದು ಹೈಕೋರ್ಟ್, ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಪರ ವಕೀಲರಿಗೆ ಸೂಚಿಸಿದೆ.

ಪ್ರಸ್ತುತ ನೀವು ನಡೆಸುತ್ತಿರುವ ಮುಷ್ಕರ ಕಾನೂನುಬಾಹಿರ. ನಿಮಗೆ ಸಮಸ್ಯೆಗಳಿದ್ದರೆ, ನೀವು ಸರ್ಕಾರದೊಂದಿಗೆ ಮಾತುಕತೆ ನಡೆಸಬಹುದು. ನೀವು ಸಾರ್ವಜನಿಕರಿಗೆ ತೊಂದರೆ ಕೊಡಲು ಸಾಧ್ಯವಿಲ್ಲ. ಆದರೆ ಒಕ್ಕೂಟಗಳು ಮಾಡುತ್ತಿರುವುದು ಅದನ್ನೇ. ಸಾರ್ವಜನಿಕರಿಗೆ ಈ ರೀತಿಯಲ್ಲಿ ಅನಾನುಕೂಲತೆಯನ್ನುಂಟುಮಾಡುವುದು ಸರಿಯಲ್ಲ ಎಂದು ಹೈಕೋರ್ಟ್ ಹೇಳಿದೆ.

ಸರ್ಕಾರದ ಪರ ವಾದ ಮಂಡಿಸಿದ ಎಜಿ ಶಶಿಕಿರಣ್ ಶೆಟ್ಟಿ ಅವರು, ಈ "ಮುಷ್ಕರದಿಂದ ಜನಸಾಮಾನ್ಯರಿಗೆ ತೊಂದರೆಯಾಗಿದೆ ಎಂದು ಪೀಠಕ್ಕೆ ತಿಳಿಸಿದರು.

ಜನರಿಗೆ ನಿಮ್ಮ ಮುಷ್ಕರದಿಂದ ಸಮಸ್ಯೆ ಆಗಬಾರದು. ಎಸ್ಮಾ ಜಾ–ರಿಯಾದರೂ ಮುಷ್ಕರ ನಡೆಸುವುದು ಕಾನೂನುಬಾಹಿರ ಎಂದು ಹೇಳಿ ನಾಲ್ಕೂ ಸಾರಿಗೆ ನಿಗಮಗಳ ನೌಕರರ ಸಂಘಕ್ಕೆ ಹೈಕೋರ್ಟ್ ನೋಟಿಸ್ ನೀಡಿದೆ. ಮುಷ್ಕರಕ್ಕೆ ನೀಡಿದ್ದ ತಡೆಯಾಜ್ಞೆಯನ್ನು ಎರಡು ದಿನ ವಿಸ್ತರಣೆ ಮಾಡಿ ಆಗಸ್ಟ್ 7ಕ್ಕೆ ವಿಚಾರಣೆಯನ್ನು ಮುಂದೂಡಿತು.

ಹೈಕೋರ್ಟ್ ಎಚ್ಚರಿಕೆ ಬೆನ್ನಲ್ಲೇ ಸುದ್ದಿಗೋಷ್ಠಿ ನಡೆಸಿದ ಜೆಎಸಿ ಅಧ್ಯಕ್ಷ ಎಚ್.ವಿ.ಅನಂತಸುಬ್ಬರಾವ್ ಅವರು, ಸಾರಿಗೆ ನೌಕರರ ಅನಿರ್ಧಿಷ್ಟಾವಧಿ ಮುಷ್ಕರವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಎಲ್ಲಾ ಸಾರಿಗೆ ನೌಕರರು ಕರ್ತವ್ಯಕ್ಕೆ ಹಾಜರಾಗಿ. ಈ ಕ್ಷಣದಿಂದಲೇ ನೌಕರರು ಕರ್ತವ್ಯಕ್ಕೆ ಹಾಜರಾಗಬೇಕು ಎಂದು ಕರೆ ನೀಡಿದರು.

### ಮುಷ್ಕರದಿಂದ ಯಾವುದೇ ಅಹಿತಕರ ಘಟನೆ ನಡೆದಿಲ್ಲ:ಪರಂ

ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರು ಇಂದು ರಾಜ್ಯಾದ್ಯಂತ ನಡೆಸುತ್ತಿರುವ ಮುಷ್ಕರದಿಂದ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಅಗತ್ಯ ಸುರಕ್ಷತಾ ಕ್ರಮ ಕೈಗೊಂಡಿದ್ದು, ಮುಷ್ಕರದ

(2ನೇ ಪುಟ ನೋಡಿ)

## ಕ್ಷೇತ್ರದ ಜನರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ: ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಅ.5: ಕ್ಷೇತ್ರದ ಜನತೆಗೆ ಯಾವುದೇ ರೀತಿಯ ತೊಂದರೆಗಳು ಆಗದಂತೆ ನೋಡಿಕೊಳ್ಳಬೇಕು ಎಂದು ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ರವರು ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ. ಪ್ರತಿ ನಿತ್ಯ ವಿವಿಧ ಸಮಸ್ಯೆಗಳನ್ನು ಹಿಡಿದುಕೊಂಡು ನೂರಾರು ಜನರು ನಮ್ಮ ಮನೆಗೆ ಅಗಮಿಸಿ ಸಮಸ್ಯೆಗಳನ್ನು ನಿವಾರಿಸುವಂತೆ ಮನವಿ ಮಾಡುತ್ತಿದ್ದಾರೆ. ಹಾಗಾಗಿ ಅಧಿಕಾರಿಗಳು ಯಾವುದೇ ಕಾರಣಕ್ಕು ಮೈ ಮರೆಯದೇ ಜನರ ನೆರವಿಗೆ ಬರಬೇಕು ಎಂದು ಕಿವಿ ಮಾತು ಹೇಳಿದರು ಕೃಷಿಕರ, ರೈತರ, ಕೂಲಿಕಾರ್ಮಿಕರ, ನಿರ್ಗತಿಕರ ಸಮಸ್ಯೆಗಳ ನಿವಾರಣೆಗೆ ಅದ್ಯತೆ ನೀಡಬೇಕು ಎಂದರು. ಹುಮನಾಬಾದ್ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುವಂತೆ ರಾಜ್ಯದ ಮುಖ್ಯಮಂತ್ರಿಗಳಿಗೆ ಉಪ ಮುಖ್ಯ ಮಂತ್ರಿಗಳಿಗೆ

ಭೇಟಿ ಮಾಡಿ ಮನವಿ ಮಾಡಲಾಗಿದೆ ಎಂದರು. ಅಧಿಕಾರ

ಬರುತ್ತೆ ಹೊಗುತ್ತೆ ಅಧಿಕಾರದ ಹಿಂದೆ ಬಿದ್ದ ವ್ಯಕ್ತಿ ನಾನಲ್ಲ. ಕ್ಷೇತ್ರದ ಜನರು ಸದಾ ನೆಮ್ಮದಿಯಿಂದ ಇದ್ದರೆ ಸಾಕು ಎಂದರು. ರಾಜ್ಯದಲ್ಲಿ ನಮ್ಮದೇ ಸರ್ಕಾರ ಇದೆ ಯಾವೊಬ್ಬ ಕಾರ್ಯಕರ್ತರು ಎದೆಗುಂದದೆ ತಮ್ಮ ತಮ್ಮ ಗ್ರಾಮಗಳ ಜನರ ಸಮಸ್ಯೆಗಳ ನಿವಾರಣೆಗೆ ಸ್ಪಂದಿಸಬೇಕು ಎಂದು ಕಾರ್ಯಕರ್ತರಿಗೆ ಧೈರ್ಯ ತುಂಬಿದರು.

## ಹಟ್ಟಿ ಚಿನ್ನದ ಗಣಿ ಕಂಪನಿ ಕಾರ್ಯಕ್ರಮಕ್ಕೆ ಸಿಎಂ ಆಗಮನ ಐತಿಹಾಸಿಕ: ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 05 : ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ ಸೇರಿದಂತೆ ಸಂಪುಟದ ಸಚಿವರು, ಶಾಸಕರು ಸೇರಿದಂತೆ ಅನೇಕ ಗಣ್ಯಮಹನಿಯರು ಭಾಗಿಯಾಗಲಿರುವ, ಆಗಸ್ಟ್ 6ರಂದು ಮಧ್ಯಾಹ್ನ 12 ಗಂಟೆಗೆ ಹಟ್ಟಿ ಪಟ್ಟಣದ ಕ್ರೀಡಾಂಗಣದಲ್ಲಿ ನಡೆಯಲಿರುವ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಹಟ್ಟಿ ಗಣಿ ಕಂಪನಿಯ ಸಿಬ್ಬಂದಿ ಹಾಗೂ ಕಾರ್ಮಿಕರ ವಸತಿ ಸಮುಚ್ಚಯ ನಿರ್ಮಾಣದ ಶಂಕುಸ್ಥಾಪನೆ ಸಮಾರಂಭಕ್ಕೆ ಎಲ್ಲಾ ರೀತಿಯ ಅಗತ್ಯ ಸಿದ್ದತೆಯಾಗಿದೆ ಎಂದು ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ ಅವರು ಹೇಳಿದರು.

ಹಟ್ಟಿ ಚಿನ್ನದ ಗಣಿ ಕಂಪನಿಯ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 5ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

1980ರಲ್ಲಿ, ಅಂದಿನ ಮುಖ್ಯಮಂತ್ರಿಗಳಾಗಿದ್ದ ಆರ್ ಗುಂಡೂರಾವ್ ಅವರು ಹಟ್ಟಿ ಚಿನ್ನದ ಗಣಿ ಕಂಪನಿ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಅದಾದ ಬಳಿಕ 42 ವರ್ಷದ ನಂತರ ಮಾನ್ಯ ಸಿದ್ದರಾಮಯ್ಯನವರು ಹಟ್ಟಿ ಚಿನ್ನದ ಗಣಿ ಕಂಪನಿಯ ಕಾರ್ಯಕ್ರಮಕ್ಕೆ ಪ್ರಪ್ರಥಮ ಬಾರಿಗೆ ಆಗಮಿಸಿ ಇತಿಹಾಸ ನಿರ್ಮಿಸಲಿದ್ದಾರೆ ಎಂದು ತಿಳಿಸಿದರು.

ಹಟ್ಟಿ ಚಿನ್ನದ ಗಣಿ ಕಂಪನಿ ಆವರಣದಲ್ಲಿ ಅಂದಾಜು 998 ಕೋಟಿ ರೂ ಮೊತ್ತದಲ್ಲಿ ವಸತಿ ಸಮುಚ್ಚಯ, ಶಾಲೆ, ಆಸ್ಪತ್ರೆ ಸೇರಿದಂತೆ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಮಾನ್ಯ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳ ಜೊತೆಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

(2ನೇ ಪುಟ ನೋಡಿ)

## ಕೆ-ರೈಡ್ ವ್ಯವಸ್ಥಾಪಕ ನಿರ್ದೇಶಕರಾಗಿ ಗೋವಿಂದ ರೆಡ್ಡಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.5:

ಐಎಎಸ್ ಅಧಿಕಾರಿ ಗೋವಿಂದ ರೆಡ್ಡಿ ಅವರನ್ನು ಕೆ–ರೈಡ್ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲ

(2ನೇ ಪುಟ ನೋಡಿ)

## ನಿಜವಾದ ಭಾರತೀಯ ಯಾರೆಂಬ ನಿರ್ಧಾರ ಸುಪ್ರೀಂಕೋರ್ಟ್ ನ್ಯಾಯಾಧೀಶರ ವ್ಯಾಪ್ತಿಗೆ ಬರಲ್ಲ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.5: ನಿಜವಾದ ಭಾರತೀಯ ಯಾರೆಂದು ನಿರ್ಧರಿಸೋದು ಸುಪ್ರೀಂಕೋರ್ಟ್ ನ್ಯಾಯಾಧೀಶರ ವ್ಯಾಪ್ತಿಗೆ ಬರಲ್ಲ ಎಂದು ಕಾಂಗ್ರೆಸ್ ನಾಯಕಿ, ಸಂಸದೆ ಪ್ರಿಯಾಂಕಾ ಗಾಂಧಿ ಅವರು ರಾಹುಲ್ ಗಾಂಧಿ ಬೆಂಬಲಕ್ಕೆ ನಿಂತಿದ್ದಾರೆ. ಸಂಸತ್ ಆವರಣದಲ್ಲಿ ಮಾತನಾಡಿ, ಸೇನೆಯ ಬಗ್ಗೆ ರಾಹುಲ್ ಗಾಂಧಿ ನೀಡಿದ್ದ ಹೇಳಿಕೆಗೆ ಸುಪ್ರೀಂ ತೀವ್ರ ಆಕ್ರೋಶ ವ್ಯಕ್ತಪಡಿಸಿದ ವಿಚಾರವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ನಿಜವಾದ ಭಾರತೀಯ ಯಾರು ಎಂದು ನಿರ್ಧರಿಸುವುದು ಸುಪ್ರೀಂಕೋರ್ಟ್ ನ್ಯಾಯಾಧೀಶರ ವ್ಯಾಪ್ತಿಗೆ ಬರುವುದಿಲ್ಲ. ನನ್ನ ಸಹೋದರ ರಾಹುಲ್ ಗಾಂಧಿಗೆ ಸೇನೆಯ ಬಗ್ಗೆ ಅತ್ಯುನ್ನತ ಗೌರವವಿದೆ ಮತ್ತು ಅದರ ವಿರುದ್ಧವಾಗಿ ಎಂದಿಗೂ ಆತ ಏನನ್ನೂ ಹೇಳುವುದಿಲ್ಲ ಎಂದು ಹೇಳಿದರು.

ನ್ಯಾಯಾಂಗಕ್ಕೆ ಎಲ್ಲಾ ರೀತಿಯಲ್ಲಿಯೂ ಗೌರವಗಳನ್ನು ನೀಡುತ್ತಾ, ನಿಜವಾದ ಭಾರತೀಯ ಯಾರು

(2ನೇ ಪುಟ ನೋಡಿ)

## ದೇಶದ ಅಭ್ಯುದಯದಲ್ಲಿ ಶಾಸನ ಸಭೆಗಳ ಪಾತ್ರ ಮಹತ್ತರ: ಸಭಾಪತಿ ಬಸವರಾಜ ಹೊರಟ್ಟಿ



ಮಲ್ಲಮ್ಮ ನುಡಿ ವಾರ್ತೆ ಬೋಸ್ಟನ್ (ಅಮೇರಿಕಾ), ಆ 05 :ಜಗತ್ತಿನ ಬಹುದೊಡ್ಡ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಭಾರತದ ಸರ್ವಾಂಗೀಣ ಅಭ್ಯುದಯದಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ತರವಾದುದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಅಮೇರಿಕಾದ ಬೋಸ್ಟನ್ ನಗರದಲ್ಲಿ "ರಾಜ್ಯ ಶಾಸಕರ ರಾಷ್ಟ್ರೀಯ ಸಮಾವೇಶ" ಹಾಗೂ "ರಾಷ್ಟ್ರೀಯ ಶಾಸಕರ ಸಮಾವೇಶ" ಭಾರತ ಸಂಸ್ಥೆಗಳ ಆಶ್ರಯದಲ್ಲಿ ನಡೆಯುತ್ತಿರುವ "ಶಾಸಕಾಂಗ ಶೃಂಗಸಭೆ 2025" ರ ವಿಚಾರ ಗೋಷ್ಠಿಯಲ್ಲಿ ತಮ್ಮ ನಾಲ್ಕು ದಶಕಗಳ ಸಂಸದೀಯ ಅನುಭವಗಳನ್ನು ಬಸವರಾಜ ಹೊರಟ್ಟಿ ಹಂಚಿಕೊಂಡರು.

ದೇಶದ ಉನ್ನತಿಯಲ್ಲಿ ಶಾಸನ

(2ನೇ ಪುಟ ನೋಡಿ)

## ಸಾರಿಗೆ ನೌಕರರ ಮುಷ್ಕರ ಪ್ರಯಾಣಿಕರು ಕಂಗಾಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಅ.5: ಜಿಲ್ಲೆಯಾದ್ಯಂತ ಸಾರಿಗೆ ನೌಕರರು ಬೆಳಿಗ್ಗೆಯಿಂದಲೇ ಪ್ರತಿಭಟನೆ ಆರಂಭಿಸಿದರು ಕೇಂದ್ರ ಬಸ್ ನಿಲ್ದಾಣದಲ್ಲಿ ಬೇರೆಬೇರೆ ಊರುಗಳಿಂದ ಬಂದ ಪ್ರಯಾಣಿಕರು ಬಸ್ಸಿನ ದಾರಿ ಕಾದು ಕಾದು ಕಂಗಾಲಾದರು ಅನೇಕರು ಮುಷ್ಕರ ಮಾಹಿತಿ ಇರಲಾರದೆ ಬಂದಿದ್ದು ಕಂಗಾಲಾಗಿದ್ದೇವೆ ಎಂದು ವರದಿಗಾರರೊಂದಿಗೆ ತಮ್ಮ ಅಳಿಲನ್ನು ತೊಡಿಕೊಂಡರು.

ಶಾಲಾ ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು ಪರದಾಡಿದ ಘಟನೆ ಜರುಗಿತು ಇನ್ನು ಬಸ್ಸಿಲ್ಲದೆ ಸರ್ಕಾರಕ್ಕೆ ಮತ್ತು ಸಾರಿಗೆ ಇಲಾಖೆಗೆ ಇಡಿ ಶಾಪ ಹಾಕಿದರು ಮತ್ತು ಕೊಪ್ಪಳ ವಿ, ವಿ, ಯ ಸ್ನಾತಕೋತ್ತರ ವಿಶ್ವವಿದ್ಯಾಲಯ ತರಗತಿಗಳ ಎರಡನೇ ಸೆಮಿಸ್ಟರ ಪರೀಕ್ಷೆಯನ್ನು ಪ್ರೊಫೆಸರ್ ಬಿಕೆ ರವಿ ಅವರು ಪರೀಕ್ಷೆಗಳನ್ನು ಮುಂದೂಡಿದರು ಹಾಗೂ ಇದನ್ನೇ ಬಂಡವಾಳವನ್ನಾಗಿ ಮಾಡಿಕೊಂಡ ಖಾಸಗಿ ವಾಹನದ ಮಾಲೀಕರು ಪ್ರಯಾಣಿಕರಿಂದ ದುಪ್ಪಟ್ಟು ಹಣ ವಸೂಲಿ ಮಾಡಿದರು ಏನೇ ಇರಲಿ ಪ್ರಯಾಣಿಕರಿಗೆ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಆಸ್ಪತ್ರೆಗಳಿಗೆ ಬ್ಯಾಂಕ್ ಕೆಲಸಗಳಿಗೆ ಇನ್ನೂ ಸಾಕಷ್ಟು ಕೆಲಸಗಳು ನಿಮಿತ್ತ ತಿರುಗಾಡುವ ಜನರು ಬಸ್ ನಿಲ್ದಾಣದಲ್ಲಿ ಇಡೀ ಶಾಪ ಹಾಕುತ್ತಿರುವುದು ಸರ್ವೇಸಾಮಾನ್ಯವಾಗಿತ್ತು.

## ಎಂದಿನಂತೆ ತೆಲಂಗಾಣ, ಮಹಾರಾಷ್ಟ್ರ ಬಸ್‌ಗಳ ಸಂಚಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 05 : ವೇತನ ಪರಿಷ್ಕರಿಸುವುದು ಸೇರಿದಂತೆ ಇತರೆ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಕಲ್ಯಾಣ ಕರ್ನಾಟಕ ಸಾರಿಗೆ ನಿಗಮ ಬೀದರ್ ವಿಭಾಗದ ನೌಕರರು ಕೆಲಸ ಸ್ಥಗಿತಗೊಳಿಸಿ ಮುಷ್ಕರ ನಡೆಸುತ್ತಿರುವುದರಿಂದ ಬಸ್ ಸಂಚಾರ ಸಂಪೂರ್ಣ ಸ್ಥಗಿ–ತಗೊಂಡಿದೆ.

ವಿವಿಧ ಕಡೆ ಪ್ರಯಾಣ ಬೆಳೆಸಲು ಬಸ್ ನಿಲ್ದಾಣಕ್ಕೆ ಬಂದಿದ್ದ ಪ್ರಯಾಣಿಕರಿಗೆ ವಿಷಯ ತಿಳಿದು ಸಮಸ್ಯೆಗೀಡಾದರು.

ದೂರದ ಊರುಗಳಿಗೆ ಪ್ರಯಾಣ ಬೆಳೆಸಬೇಕಾದವರು ಮನೆ ಕಡೆಗೆ ಹಿಂತಿರುಗಿದರೆ, ಜಿಲ್ಲೆಯ ವಿವಿಧ ಭಾಗಗಳ ಪ್ರಯಾಣಿಕರು ಖಾಸಗಿ ವಾಹನಗಳಲ್ಲಿ ತೆರಳಿದರು.

ಕೇಂದ್ರ ಬಸ್ ನಿಲ್ದಾಣದ ಎದುರಿನಲ್ಲಿ ಕ್ರೂಸರ್, ಟಂಟಂ ಸೇರಿದಂತೆ ಇತರೆ ವಾಹನಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ರು, ಪ್ರಯಾಣಿಕರು ಅವುಗಳಲ್ಲಿ ಸಂಚರಿಸುತ್ತಿದ್ದಾರೆ.

ನೆರೆಯ ತೆಲಂಗಾಣ ಮತ್ತು ಮಹಾರಾಷ್ಟ್ರದ ಬಸ್‌ಗಳು ಎಂದಿನಂತೆ ಸಂಚರಿಸುತ್ತಿವೆ.

## ಸಾರಿಗೆ ನೌಕರರ ಮುಷ್ಕರ ಬಸ್ ಸಂಚಾರ ಸ್ಥಗಿತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5–ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಸಾರಿಗೆ ಸಂಸ್ಥೆಯ ನೌಕರರು ಇಂದಿನಿಂದ ಆರಂಭಿಸಿರುವ ಮುಷ್ಕರದಿಂದಾಗಿ ಮಂಗಳವಾರ ಜಿಲ್ಲೆಯಲ್ಲಿ ಬಹುತೇಕ ಬಸ್ ಸಂಚಾರ ಸ್ಥಗಿತಗೊಂಡಿದ್ದು, ಪ್ರಯಾಣಿಕರು, ವಿದ್ಯಾರ್ಥಿಗಳು ಪರದಾಡುವಂತಾಯಿತು.

ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಳು ಇಂದು ಬಿಕೋ ಎನ್ನುತ್ತಿದ್ದವು. ಶಾಲಾ ಮಕ್ಕಳು ಬೆಳಿಗ್ಗೆ ನಗರ ಪ್ರದೇಶಗಳಿಗೆ ಆಗಮಿಸಿದರೂ ಮರಳಿ ಊರಿಗೆ ಹೋಗುವುದಕ್ಕೆ ಪರದಾಟ ನಡೆಸಿದರು. ಗ್ರಾಮೀಣ ಜನರು ಆಸ್ಪತ್ರೆಗಳಿಗೆ ತೆರಳಲು ಸಹ ತೊಂದರೆಯಾಗಿತ್ತು.

ಸೋಮವಾರ ರಾತ್ರಿ ಗ್ರಾಮೀಣ ಪ್ರದೇಶ ಹಾಗೂ ದೊಡ್ಡ ನಗರಗಳಿಗೆ ವಸತಿ ತೆರಳಿದ್ದ ಬಸ್ಸುಗಳು ಬೆಳಿಗ್ಗೆ ಆಯಾ ಡಿಪೋಗಳಿಗೆ ಮರಳಿದವು. ನಂತರ ಸಂಜೆಯತನಕ ಯಾವುದೇ ಕಾರ್ಯಾಚರಣೆಯಿಲ್ಲದೇ ನಿಲ್ದಾಣಗಳಲ್ಲೇ ನಿಲ್ಲುವಂತಾಯಿತು. ಬಾಗಲಕೋಟೆ, ಬಾದಾಮಿ, ಜಮಖಂಡಿ, ಮುಧೋಳಗಳಲ್ಲಿ ಬಂದ್ ಸಂಪೂರ್ಣ ಯಶಸ್ವಿಯಾಗಿತ್ತು. ಕೆಲವೆಡೆ ಶಾಲಾ ಮಕ್ಕಳ ಅನುಕೂಲಕ್ಕಾಗಿ ಮಧ್ಯಾಹ್ನದ ನಂತರ ಬಸ್ ಓಡಿಸಿದ ಮಾಹಿತಿ ಲಭ್ಯವಾಗಿದೆ.

# ಒಂದನೇ ಪುಟದಿಂದ

## ಸಿಎಂ ಆಗಮನ ಐತಿಹಾಸಿಕ: ಶಾಸಕ ಪಾಟೀಲ

ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಇಲಾಖೆಯ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಚಂದ್ರಶೇಖರ್ ಬಿ.ಪಾಟೀಲ್, ಶರಣಗೌಡ ಪಾಟೀಲ್ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಹಟ್ಟಿ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಎಂ.ಡಿ. ಸಮ್ದಾನಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಲಿಂಗಸುಗೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ವೆಂಕಟೇಶ್ ಆರ್.ಗುತ್ತೇದಾರ ಅವರು ಅತಿಥಿಗಳಾಗಿ ಭಾಗಿಯಾಗಲಿದ್ದಾರೆ. ಲಿಂಗಸುಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್ ಅವರು ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.ಆರ್ಥಿಕ ಇಲಾಖೆ, ಸರ್ಕಾರದ ಲೋಕೋಪಯೋಗಿ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಸಹ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಹಟ್ಟಿ, ಲಿಂಗಸೂರ, ಸಿರವಾರ ಸೇರಿದಂತೆ ಸುತ್ತಲಿನ ವಿವಿಧ ಗ್ರಾಮಗಳಿಂದ ಅಂದಾಜು 20,000 ಜನರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಮತ್ತು ಕಾರ್ಮಿಕ ಸಂಘದ ಅಧ್ಯಕ್ಷರು ಹಾಗೂ ಸದಸ್ಯರು, ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಮತ್ತು ಕಾರ್ಮಿಕ ಸಂಘದ ಅಧ್ಯಕ್ಷರು, ಸದಸ್ಯರು ಹಾಗೂ ಹಟ್ಟಿ ಚಿನ್ನದ ಗಣಿ ಕಂಪನಿಯ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಮತ್ತು ಕಾರ್ಮಿಕರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ಹಟ್ಟಿ ಚಿನ್ನದ ಗಣಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕಿ ಆರ್.ಶಿಲ್ಪ, ಕಾರ್ಯನಿರ್ವಾಹಕ ನಿರ್ದೇಶಕರಾದ ಪ್ರಕಾಶ ಇದ್ದರು.

## ಸಾರಿಗೆ ನೌಕರರ ಮುಷ್ಕರ ವಾಪಸ್

ಹೊರತಾಗಿ ಕೆಲವು ಬಸ್ ಗಳು ಓಡಾಡುತ್ತಿವೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಸಾರಿಗೆ ನೌಕರರ ಮುಷ್ಕರ ನಡೆಯುತ್ತಿದೆ. ಆದರೆ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಈಗಾಗಲೇ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದರು.ಸಂಪೂರ್ಣ ಬಂದ್ ಆಗಿದ್ದರೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿತ್ತು. ಸಾರಿಗೆ ನೌಕರರ ಒಂದು ಒಕ್ಕೂಟ ಅಥವಾ ಗುಂಪೊಂದು ಬಸ್ ಗಳ ಕಾರ್ಯಾಚರಣೆ ಮಾಡುತ್ತಿದ್ದು, ಅಂತಹ ಯಾವುದೇ ತೊಂದರೆ ಆಗಿಲ್ಲ ಎಂದರು.ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಎಲ್ಲಾ ಬಿಎಂಟಿಸಿ ಬಸ್ ಗಳು ಸಂಚರಿಸುತ್ತಿವೆ. ಮುಷ್ಕರದ ಹೊರತಾಗಿಯೂ ಶೇ. 40 ರಷ್ಟು ಕೆಎಸ್ ಆರ್ ಟಿಸಿ ಬಸ್ ಗಳು ಓಡಾಡುತ್ತಿವೆ. ಮುಷ್ಕರದ ಸಂಬಂಧ ಅರ್ಜಿಯನ್ನೊಂದರ ವಿಚಾರಣೆ ನಡೆಸಿದ ಹೈಕೋರ್ಟ್, ಮುಷ್ಕರವನ್ನು ಒಂದು ದಿನ ಮುಂದೂಡುವಂತೆ ಹೇಳಿತ್ತು. ಆದಾಗ್ಯೂ ಕೋರ್ಟ್ ಆದೇಶ ಉಲ್ಲಂಘಿಸಿ ಕೆಲ ನೌಕರರು ಮುಷ್ಕರ ನಡೆಸುತ್ತಿದ್ದಾರೆ. ಈಗ ಕೋರ್ಟ್ ಆದೇಶಕ್ಕಾಗಿ ಕಾಯುತ್ತಿದ್ದೇವೆ. ಮುಷ್ಕರದ ಹಿನ್ನೆಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಬಸ್‌ಗಳನ್ನು ವ್ಯವಸ್ಥೆ ಮಾಡಿದ್ದೇವೆ ಎಂದು ರೆಡ್ಡಿ ಹೇಳಿದರು.ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ(ಕೆಎಸ್‌ಆರ್‌ಟಿಸಿ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ(ಬಿಎಂಟಿಸಿ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ(ಕೆಕೆಆರ್‌ಟಿಸಿ) ಮತ್ತು ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆ(ಎನ್‌ಡಬ್ಲ್ಯೂಕೆಆರ್‌ಟಿಸಿ)ಯ ನೌಕರರು ಮಂಗಳವಾರ ಬೆಳಗ್ಗೆಯಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದು, ಹಲವು ಕಡೆ ಸಾರಿಗೆ ಸಂಸ್ಥೆಯ ಬಸ್‌ಗಳು ರಸ್ತೆಗೆ ಇಳಿಯದ ಕಾರಣ ಸಾಮಾನ್ಯ ಜನಜೀವನ ಅಸ್ತವ್ಯಸ್ತವಾಗಿದೆ.ಮುಷ್ಕರದಿಂದಾಗಿ ಕೆಂಪೇಗೌಡ ಬಸ್ ನಿಲ್ದಾಣ(ಮೆಜೆಸ್ಟಿಕ್), ಮೈಸೂರು ರಸ್ತೆಯ ಸ್ಯಾಟಲೈಟ್ ಬಸ್ ನಿಲ್ದಾಣ ಮತ್ತು ಶಾಂತಿನಗರ ಬಸ್ ನಿಲ್ದಾಣದಲ್ಲಿ ನೂರಾರು ಪ್ರಯಾಣಿಕರು ಪರದಾಡುತ್ತಿದ್ದರು.

## ಸಭೆಗಳ ಪಾತ್ರ ಮಹತ್ತರ: ಸಭಾಪತಿ ಬಸವರಾಜ ಹೊರಟ್ಟಿ

ಸಭೆಗಳ ಹಾಗೂ ಜನಪ್ರತಿನಿಧಿಗಳ ಕ್ರೀಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿ ಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು. ಶಾಸನ ಸಭೆಗಳ ಕಾರ್ಯ ಚಟುವಟಿಕೆಗಳು ಸಮಾಜದ ಮೂಲಭೂತ ಅವಶ್ಯಕತೆಗಳ ಮೇಲೆ ಕೇಂದ್ರಿಕೃತವಾಗಿ ದೇಶದಲ್ಲಿರುವ ಬಡತನ, ಜನರ ಸಂಕಷ್ಟ, ಬವಣೆಗಳ ನಿವಾರಣೆ ನಿಟ್ಟಿನಲ್ಲಿ ಚಿಂತನೆ ನಡೆಸುವ "ಚಿಂತಕರ ಚಾವಡಿ"ಗಳಾಗಿ ಪರಿವರ್ತನೆಯಾದಾಗ ಮಾತ್ರ ಪ್ರಜಾಪ್ರಭುತ್ವದ ನೈಜ ಆಶಯಗಳು ಈಡೇರಿಸಲು ಸಾಧ್ಯವಾಗುತ್ತದೆ ಎಂದರು.ಸಾಮಾನ್ಯ ಜನರ ಬದುಕು, ಬವಣೆಗಳ ಬಗೆ ತಿಳಿದುಕೊಳ್ಳಲು ಜನಪ್ರತಿನಿಧಿಗಳು ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಹೊಂದುವುದು ಅವಶ್ಯಕವಾಗಿದೆ. ಇದರಿಂದ ನಿಜರೂಪದಲ್ಲಿ ಸಾರ್ವಜನಿಕರ ಬದುಕು ಹಸನಗೊಳಿಸಲು ಸಾಧ್ಯ ಎಂದರು.ಜಾತಿ, ಧರ್ಮ ಲಿಂಗಗಳ ಬೇಧವಿಲ್ಲದೆ ಜನರ ಮತಗಳಿಂದ ಜನಪ್ರತಿನಿಧಿಯಾಗುವ ಅವಕಾಶ ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ವಿಶ್ವಾಸರ್ಹತೆಯಿಂದ ಔದಾರ್ಯವನ್ನು ಮೆರೆದು ದೇಶದ ಅಭ್ಯುದಯಕ್ಕೆ ಕಟಿಬದ್ದರಾಗಿ ಸಂಸದೀಯ ಮೌಲ್ಯಗಳ ರಕ್ಷಣೆಗೆ ಮುಂದಾಗಬೇಕಿದೆ. ಇಂದಿನ ಆಧುನಿಕ ದಿನಮಾನಗಳಲ್ಲಿ ಅಭಿವೃದ್ಧಿಯೇ ಪ್ರತಿಯೊಬ್ಬರ ಮೂಲ ಮಂತ್ರವಾಗಬೇಕಿದೆ ಎಂದು ಬಸವರಾಜ ಹೊರಟ್ಟಿ, ನಾಡಿನ ಸುಸ್ಥಿರ ಹಾಗೂ ಸಮಗ್ರ ಬೆಳವಣಿಗೆಯಲ್ಲಿ ಶಾಸನ ಸಭೆಗಳು ಹಾಗೂ ಜನಪ್ರತಿನಿಧಿಗಳ ಪಾತ್ರ ಹಿಂದೆಂದಿಗಿಂತಲೂ ಇಂದು ಹೆಚ್ಚಾಗಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ಆಧುನಿಕ ಸಂವಹನ ತಂತ್ರಗಾರಿಕೆಗಳನ್ನು ಅಳವಡಿಸಿಕೊಂಡು ಅಭಿವೃದ್ಧಿ ಬಗೆಗೆ ಬದ್ಧತೆ ಹೊಂದಿ ದೇಶದ ಏಳಿಗೆಗೆ ಶ್ರಮಿಸಲು ಮುಂದಾಗಬೇಕಿದೆ ಎಂದರು.ಶಾಸನ ಸಭೆಗಳು ಆಧುನಿಕ ತಂತ್ರಜ್ಞಾನಕ್ಕೆ ಪೂರಕವಾಗಿ ತಮ್ಮನ್ನು ಸನ್ನದ್ಧಗೊಳಿಸಿಕೊಂಡು ದೇಶದ ಅಗತ್ಯ ಬೇಡಿಕೆಗಳ ಈಡೇರಿಕೆಗೆ ಪಣತೊಡಬೇಕಾದ ಅವಶ್ಯಕತೆ ಇದೆ, ದೇಶದ ಸವಾರ್ಂಗೀಣ ಅಭಿವೃದ್ದಿಗೆ ಪ್ರತಿಯೊಬ್ಬ ಜನಪ್ರತಿನಿಧಿಯು ನಿರ್ಧಿಷ್ಠ ನೀತಿ ಸಂಹಿತೆಗಳನ್ನು ಅಳವಡಿಸಿಕೊಂಡು ಅವುಗಳನ್ನು ಸಮರ್ಪಕವಾಗಿ ಕಾರ್ಯ ರೂಪುಗೊಳಿಸುವಲ್ಲಿ ಸಂಕಲ್ಪ ಬದ್ಧರಾಗುವ ಮೂಲಕ ದೇಶದ ಒಳಿತಿಗೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳುವ ಅಗತ್ಯತೆಯನ್ನು ಬಸವರಾಜ ಹೊರಟ್ಟಿ ಪ್ರತಿಪಾದಿಸಿದರು. ಅಮೇರಿಕಾದ ಬೋಸ್ಟನ್‌ನಲ್ಲಿ ಶಾಸಕಾಂಗ ಶೃಂಗಸಭೆ ನಡೆಸುವಲ್ಲಿ ಬಹುವಾಗಿ ಶ್ರಮಿಸಿರುವ ಡಾ. ರಾಹುಲ್ ಕರಾಡ್ ಹಾಗೂ ತಂಡವನ್ನು ಇದೇ ವೇಳೆ ಸಭಾಪತಿ ಬಸವರಾಜ ಹೊರಟ್ಟಿ ಅಭಿನಂದಿಸಿದರು.ಮೂರು ದಿನಗಳ ಕಾಲ ನಡೆಯುತ್ತಿರುವ ಶೃಂಗ ಸಭೆಯಲ್ಲಿ ಪ್ರಜಾತಂತ್ರ ಗಟ್ಟಿಗೊಳಿಸುವಿಕೆಯಲ್ಲಿ ಶಾಸನ ಸಭೆಗಳ ಪಾತ್ರ, ಶಾಸನ ಸಭೆಗಳ ಪಕ್ಷಾತೀತ ನಿರ್ವಹಣೆ, ಶಾಸನ ಸಭೆಗಳಿಗೆ ಅರ್ಥಿಕ ಸ್ವಾಯತ್ತತೆ ಸೇರಿದಂತೆ ಹತ್ತು ಹಲವು ವಿಷಯಗಳ ಕುರಿತು ಶೃಂಗ ಸಭೆಯಲ್ಲಿ ಗೋಷ್ಠಿಗಳು, ವಿಚಾರ ಸಂಕಿರಣ, ಸಂವಾದಗಳು ಜರುಗಲಿವೆ.ಭಾರತ ದೇಶದ ಸಂಸದರು, ವಿವಿಧ ರಾಜ್ಯಗಳ ವಿಧಾನ ಸಭೆ ಹಾಗೂ ವಿಧಾನ ಪರಿಷತ್ತಿನ ಸದಸ್ಯರು, ಸಚಿವರುಗಳು, ರಾಜಕೀಯ ತಜ್ಞರು, ನೀತಿ ನಿರೂಪಕರು, ರಾಜಕೀಯ ಮುತ್ಸದ್ದಿಗಳು ಸೇರಿದಂತೆ ಸುಮಾರು 15,000 ಕ್ಕೂ ಹೆಚ್ಚು ಗಣ್ಯರು ಪಾಲ್ಗೊಂಡಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ನೇತೃತ್ವದ ತಂಡ ಶೃಂಗ ಸಭೆಯ ಅಂಗವಾಗಿ ಅಮೇರಿಕಾದ ಮ್ಯಾಸಚೂಸೆಟ್ಸ್ ಸ್ಟೇಟ್ ಹೌಸ್ ಹಾಗೂ ಅಂತರಾಷ್ಟ್ರೀಯ ಖ್ಯಾತಿಯ ಹಾರ್ವರ್ಡ್ ವಿಶ್ವವಿದ್ಯಾಲಯ ಭೇಟಿ ನೀಡಿ ಅಮೇರಿಕಾದಲ್ಲಿರುವ ಭಾರತೀಯ ಮೂಲದ ಶೈಕ್ಷಣಿಕ ತಜ್ಞರೊಂದಿಗೆ ಸಂವಾದ ನಡೆಸಿದರು.

## ವಿರುದ್ಧ ರೈತರ ಆಕ್ರೋಶ

ಜಿಲ್ಲಾಧಿಕಾರಿಗಳು ಈ ವಿಷಯವನ್ನು ಪರಿಗಣಿಸಿ ತಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕು ನೊಂದ ರೈತನ ನೆರವಿಗೆ ಬರಬೇಕು ಎಂಬ ಮನವಿ ರೈತರದಾಗಿದೆ.

## ಗೋವಿಂದ ರೆಡ್ಡಿ ನೇಮಕ

ಸಾರಿಗೆ ಇಲಾಖೆಯಲ್ಲಿ ಪ್ರಸ್ತುತ ಜಂಟಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ 2013 ರ ಬ್ಯಾಚ್‌ನ ಐಎಎಸ್ ಅಧಿಕಾರಿ ಗೋವಿಂದ್‌ರೆಡ್ಡಿ ಅವರು, ಕೆ–ರೈಡ್ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಳ್ಳುತ್ತಾರೆ ಎಂದು ಸೋಮವಾರ ಹೊರಡಿಸಲಾದ ಅಧಿಕೃತ ಆದೇಶದಲ್ಲಿ ತಿಳಿಸಲಾಗಿದೆ. ರೈಲ್ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಂಪನಿ(ಕರ್ನಾಟಕ) ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕಿಯಾಗಿದ್ದ ಮಂಜುಳಾ ಎನ್ ಅವರನ್ನು ವರ್ಗಾವಣೆ ಮಾಡಿ, ಅವರ ಸ್ಥಾನಕ್ಕೆ ಗೋವಿಂದ ರೆಡ್ಡಿ ಅವರನ್ನು ನೇಮಕ ಮಾಡಲಾಗಿದೆ.ಕೆ–ರೈಡ್‌ನ ಪ್ರಮುಖ ಬೆಂಗಳೂರು ಉಪನಗರ ರೈಲ್ವೆ ಯೋಜನೆ(ಬಿಎಸ್‌ಆರ್‌ಪಿ) ಕಾಮಗಾರಿ ಗುತ್ತಿಗೆಯನ್ನು ಎಲ್ ಆಯಿಂಡ್ ಟಿ ಕಂಪನಿ ರದ್ದುಪಡಿಸಿದ ಬೆನ್ನಲ್ಲೇ ಈ ನೇಮಕಾತಿ ನಡೆದಿದೆ.

## ನ್ಯಾಯಾಧೀಶರ ವ್ಯಾಪ್ತಿಗೆ ಬರಲ್ಲ

ಮತ್ತು ಯಾರಲ್ಲ ಎಂಬುದನ್ನು ನಿರ್ಧರಿಸುವುದು ಅವರ ಕೆಲಸವಲ್ಲ.ನ್ಯಾಯಾಧೀಶರು ಅದನ್ನು ನಿರ್ಧರಿಸುವುದಿಲ್ಲ. ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕನಾಗಿ, ಸರ್ಕಾರಕ್ಕೆ ಪ್ರಶ್ನೆ ಕೇಳುವುದು ರಾಹುಲ್ ಗಾಂಧಿಯವರ ಕರ್ತವ್ಯವಾಗಿದೆ. ರಾಹುಲ್ ಗಾಂಧಿ ಯಾವಾಗಲೂ ಅದನ್ನೇ ಮಾಡಿದ್ದಾರೆ. ಆದರೆ ಈಗ ಸೇನೆ ಬಗ್ಗೆ ಮಾತನಾಡಿರುವುದು ಸರ್ಕಾರಕ್ಕೆ ಇಷ್ಟವಿಲ್ಲ. ಜೊತೆಗೆ ಈ ಪ್ರಶ್ನೆಗೆ ಉತ್ತರ ನೀಡೋದು ಅವರಿಗೆ ಕಷ್ಟವಾಗಿದೆ ಎಂದು ತಿಳಿಸಿದರು.


ಕರ್ನಾಟಕ ಸರ್ಕಾರ

**ಜಿಲ್ಲಾ ಪಂಚಾಯತ ಬಾಗಲಕೋಟೆ**

**ಕಾರ್ಯಪಾಲಕ ಅಭಿಯಂತರರ ಕಚೇರಿ,**

**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ.**

Fax : 08354– 235043 Email : bgkeezpe@yahoo.com Phone: 08354-235042

ಸಂ:ಕಾನಿಇಂ/ಪಂರಾಇಂವಿ/ಬಿಜಿಕೆ/ಪಿಬಿ–2/ಟೆಂಡರ್/2025–26/1848 ದಿನಾಂಕ:05.08.2025.

**ಅಲ್ಪಾವಧಿ ಇ–ಪ್ರೋಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ ಏಕ–ಲಕೋಟೆ**

**ಕೆ.ಡಬ್ಲ್ಯೂ– 1 & 2 ಬಿಡ್ ಡಾಕ್ಯೂಮೆಂಟ್**

ಕರ್ನಾಟಕ ಸರಕಾರದ ಮಾನ್ಯ ರಾಜ್ಯಪಾಲರ ಪರವಾಗಿ ಅಧಿಕೃತ ಅರ್ಹ ಗುತ್ತಿಗೆದಾರರಿಂದ ವಿವಿಧ ಲೆಕ್ಕ ಶೀರ್ಷಿಕೆಯಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿನ ಈ ಕೆಳಕಂಡ ಕಾಮಗಾರಿಗಳಿಗೆ Standard Tender Document KW-1&2 ರ ನಿಬಂಧನೆಗೊಳಪಟ್ಟಂತೆ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಏಕ–ಲಕೋಟೆ ಪದ್ಧತಿಯನ್ವಯ ಐಟಂವಾರು ಗುತ್ತಿಗೆಯನ್ನು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟರ್ನಕೀ ಆಧಾರದ ಮೇಲೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

2022–23 ನೇ ಸಾಲಿನ ಪ್ರಗತಿ ಕಾಲೋನಿ ಯೋಜನೆಯಡಿ ಆಯ್ಕೆಯಾದ ಬೀಳಗಿ ವಿಧಾನಸಭಾ ಕ್ಷೇತ್ರದ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಅನುದಾನದ ಯೋಜನೆ ಅಡಿಯಲ್ಲಿ ಬೀಳಗಿ ವಿಧಾನಸಭಾ ಕ್ಷೇತ್ರ ಅಡಿಯಲ್ಲಿ ಕಾಮಗಾರಿಗಳ ಮಂಜೂರಾಗಿರುತ್ತವೆ. ಬಾಗಲಕೋಟೆ ಜಿಲ್ಲೆಯ ಬೀಳಗಿ ವಿಧಾನಸಭಾ ಮತಕ್ಷೇತ್ರ ಬಾದಾಮಿ, ಬಾಗಲಕೋಟೆ, ಮತ್ತು ಬೀಳಗಿ ತಾಲೂಕಿನ ಕಾಮಗಾರಿಗಳ ತಾಲೂಕಿನ ವ್ಯಾಪ್ತಿಯಲ್ಲಿ

ಸಾಮಾನ್ಯ ವರ್ಗಕ್ಕೆ ಮೀಸಲಾದ ಕಾಮಗಾರಿಗಳ ಇಂಡೆಂಟ್ ನಂ: **RDPR/2025-26/BD/WORK_INDENT17539, RDPR/2025-26/RD/WORK_INDENT17544, RDPR/2025-26/RD/WORK_INDENT17548, RDPR/2025-26/RD/WORK_INDENT17552, RDPR/2025-26/RD/WORK INDENT16876.**

ಪ್ರವರ್ಗ–2ಎ ವರ್ಗಕ್ಕೆ ಮೀಸಲಾದ ಕಾಮಗಾರಿಗಳ ಇಂಡೆಂಟ್ ನಂ: **RDPR/2025-26/RD/WORK_INDENT17550, RDPR/2025-26/RD/WORK_INDENT17551, RDPR/2025-26/BD/WORK_INDENT16728, RDPR/2025-26/RD/WORK INDENT16875.**

ಇದ್ದು, ಕಾಮಗಾರಿ ವಿವರ, ಗುತ್ತಿಗೆದಾರರ ಅರ್ಹತೆ ವಿವರ, ಟೆಂಡರ್‌ಗಿಟ್ಟ ಮೊತ್ತ (ರೂ.10.00 ದಿಂದ 30.00 ಲಕ್ಷಗಳ ಮಿತಿಗೊಳಪಟ್ಟು), ಟೆಂಡರ್ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ ಮೊತ್ತ ಎಲ್ಲ ವಿವರಗಳು ಇ–ಪೋರ್ಟಲ್‌ನಲ್ಲಿ ಇದ್ದಂತೆ.

ಇ–ಪ್ರೋಕ್ಯೂರ್‌ಮೆಂಟ್ ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶೆಡ್ಯೂಲ್–ಬಿಯನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ: **16.08.2025 ರ ಸಾಯಂಕಾಲ 5.30** ಗಂಟೆವರೆಗೆ.

ಇ–ಪ್ರೋಕ್ಯೂರ್‌ಮೆಂಟ್‌ನಲ್ಲಿ ತಾಂತ್ರಿಕ & ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ: **18.08.2025 ರಂದು ಮುಂಜಾನೆ 11.00** ಗಂಟೆಯ ನಂತರ.

**ಸೂಚನೆ:** ಹೆಚ್ಚಿನ ವಿವರಗಳಿಗಾಗಿ ಈ ಕೆಳಗೆ ಸಹಿ ಮಾಡಿದವರ ಕಚೇರಿಗೆ ಅಥವಾ ವೆಬ್‌ಸೈಟ್ **https://kppp.karnataka.gov.in/** ಮುಖಾಂತರ ಸಂಪರ್ಕಿಸಬಹುದಾಗಿದೆ.

ಸಹಿ/– ಕಾರ್ಯನಿರ್ವಾಹಕ ಇಂಜಿನಿಯರರು,
ಪಂಚಾಯತ ರಾಜ್ ಇಂಜಿನಿಯರಿಂಗ್
ವಿಭಾಗ, ಬಾಗಲಕೋಟೆ.

ವಾ.ಸಾ.ಇ/ಬಾಗಲಕೋಟ/203/ದೇಶಪಾಂಡೆಪಬ್ಲಿಸಿಟಿ/2025–26


## ರೈತರ ಬೆರಳ ತುದಿಗೆ ರೆಕಾರ್ಡ್ ರೂಂ ತಲುಪಿಸುವುದೇ "ಭೂ ಸುರಕ್ಷಾ" ಅಭಿಯಾನದ ಮೂಲ ಧ್ಯೇಯ: ಸಚಿವ ಕೃಷ್ಣ ಬೈರೇಗೌಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಆ.05:ಸರ್ಕಾರಿ ಕಚೇರಿಗಳಿಗೆ ಅನಗತ್ಯ ಓಡಾಟ ಸೇರಿದಂತೆ ರೈತರನ್ನು ಶೋಷಿಸುವ ಎಲ್ಲಾ ವಿಚಾರಗಳಿಗೂ ಶಾಶ್ವತ ಪರಿಹಾರ ನೀಡುವುದು ಹಾಗೂ ಬೆರಳ ತುದಿಗೆ ರೆಕಾರ್ಡ್ ರೂಂ ತಲುಪಿಸುವುದೇ 'ಭೂ ಸುರಕ್ಷಾ' ಅಭಿಯಾನದ ಮೂಲ ಧ್ಯೇಯ ಎಂದು ಕಂದಾಯ ಸಚಿವರಾದ ಕೃಷ್ಣಬೈರೇಗೌಡ ಅವರು ತಿಳಿಸಿದರು.



ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಡಳಿತ ಕಚೇರಿಯಲ್ಲಿರುವ ರೆಕಾರ್ಡ್ ರೂಂ ದಾಖಲೆಗಳನ್ನು "ಭೂ ಸುರಕ್ಷಾ" ಯೋಜನೆ ಅಡಿಯಲ್ಲಿ ಸ್ಕ್ಯಾನ್ ಮಾಡಿ ಡಿಜಿಟಲೀಕರಿಸುವ ಅಭಿಯಾನಕ್ಕೆ ಇಂದು ಚಾಲನೆ ನೀಡಿ ಮಾತನಾಡಿದರು.

ಭೂ ಮಂಜೂರಾತಿಗೆ ಸಂಬಂಧಿಸಿದ ಮೂಲ ದಾಖಲೆಗಳನ್ನು ಬಚ್ಚಿಡುವ ಹಾಗೂ ತಿದ್ದುವ ಮೂಲಕ ಬಡ ರೈತರನ್ನು ಶೋಷಿಸುವ ಕೆಲಸ ದಶಕಗಳಿಂದಲೂ ನಡೆ–ಯುತ್ತಿದೆ. ಸರ್ಕಾರಿ ಕಚೇರಿ ಹಾಗೂ ಕೋರ್ಟು ಕೇಸು ಅಂತ ಅಲೆಯುವುದೇ ನೈಜ ರೈತರಿಗೆ ತಲೆನೋವಿನ ಕೆಲಸವಾಗಿದೆ. ಮತ್ತೊಂದೆಡೆ ಮಧ್ಯವರ್ತಿಗಳೂ ಸಹ ರೈತರನ್ನು ಇನ್ನಿಲ್ಲದಂತೆ ಶೋಷಿಸುತ್ತಿದ್ದಾರೆ. ಈ ಎಲ್ಲಾ ಶೋಷಣೆಗಳಿಂದ ಅನ್ನದಾತರಿಗೆ ನೆಮ್ಮದಿ ನೀಡಬೇಕು. ರೆಕಾರ್ಡ್ ರೂಂ ಅನ್ನು ಜನರ ಬೆರಳ ತುದಿಗೆ ತರಬೇಕು. ಜನರಿಗೆ ಸಿಗಬೇಕಾದ ಸೌಲಭ್ಯ ಸರಳ ಸುಳಲಿತವಾಗಿ ತೊಂದರೆ ಇಲ್ಲದಂತೆ ಲಭ್ಯವಾಗುವಂತಿರಬೇಕು ಎಂಬುದೇ ನಮ್ಮ ಉದ್ದೇಶ. ಹೀಗಾಗಿಯೇ "ಭೂ ಸುರಕ್ಷಾ" ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯದ ಎಲ್ಲಾ ತಹಶೀಲ್ದಾರ್ ಕಚೇರಿಗಳಲ್ಲಿ ಭೂ ದಾಖಲೆಗೆ ಸಂಬಂಧಿಸಿ 100 ಕೋಟಿಗೂ ಅಧಿಕ ಭೂ ದಾಖಲೆಗಳಿವೆ ಎಂದು ಅಂದಾಜಿಸಲಾಗಿದೆ. ಈ ಪೈಕಿ 35.36 ಕೋಟಿ ಪುಟಗಳನ್ನು ಸ್ಕ್ಯಾನ್ ಮಾಡಲಾಗಿದೆ. ಇನ್ನೂ 35 ಕೋಟಿ ಪುಟಗಳು ಸ್ಕ್ಯಾನ್ ಬಾಕಿ ಇದೆ. ಈ ಕೆಲಸ ತಹಶೀಲ್ದಾರ್ ಕಚೇರಿಗಷ್ಟೇ ಸೀಮಿತವಾಗದೆ ಉಪ ವಿಭಾಗಾಧಿಕಾರಿ–ಜಿಲ್ಲಾಧಿಕಾರಿ ಕಚೇರಿಯಲ್ಲಿರುವ ದಾಖಲೆಗಳನ್ನೂ ಸ್ಕ್ಯಾನ್ ಮಾಡಲು ನಿರ್ಧರಿಸಲಾಗಿದೆ. ಇಂದು ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿರುವ ಮೂಲ ದಾಖಲೆಗಳನ್ನು ಸ್ಕ್ಯಾನ್ ಮಾಡುವ ಮೂಲಕ ಈ ಕೆಲಸಕ್ಕೂ ಅಧಿಕೃತವಾಗಿ ಚಾಲನೆ ನೀಡಲಾಗಿದೆ ಎಂದರು.

ವರ್ಷಾಂತ್ಯದೊಳಗೆ ಸ್ಕ್ಯಾನ್ ಪೂರ್ಣ ರಾಜ್ಯದ ಎಲ್ಲಾ ತಹಶೀಲ್ದಾರ್ ಕಚೇರಿಗಳಲ್ಲಿ ಪ್ರತಿದಿನ ಸರಾಸರಿಯಾಗಿ 10 ಸಾವಿರ ಪುಟಗಳನ್ನು ಸ್ಕ್ಯಾನ್ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ಕೆಲಸ ಮತ್ತಷ್ಟು ವೇಗ ಪಡೆಯಲಿದ್ದು, ಮುಂದಿನ ಡಿಸೆಂಬರ್ ಒಳಗೆ ತಹಶೀಲ್ದಾರ್ ಕಚೇರಿಯ ಎಲ್ಲಾ ಮೂಲ ದಾಖಲೆಗಳನ್ನು ಸ್ಕ್ಯಾನ್ ಮಾಡಲಾಗುವುದು. 2026 ಮಾರ್ಚ್ ವೇಳೆಗೆ ಉಪ ವಿಭಾಗಾಧಿಕಾರಿ ಕಚೇರಿ ರೆಕಾರ್ಡ್ ರೂಂಗಳಲ್ಲಿರುವ ದಾಖಲೆಗಳ ಸ್ಕ್ಯಾನ್ ಮುಗಿಸಲಾಗುವುದು ಎಂದು ತಿಳಿಸಿದರು. ಕಚೇರಿಗೆ ಅಲೆಯದೆ ಮನೆಯಿಂದಲೇ ದಾಖಲೆ ಪಡೆಯಿರಿ:ಸ್ಕ್ಯಾನ್ ಮಾಡಿ ಡಿಜಿಟಲೀಕರಿಸಿದ ದಾಖಲೆಗಳನ್ನು ರೈತರು ಸರ್ಕಾರಿ ಕಚೇರಿಗಳಿಗೆ ಅಲೆಯದೆ ಮನೆಯಿಂದಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಪಡೆಯಬಹುದು. ರೈತರಿಗೆ ಮೊಬೈಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಗೊತ್ತಿಲ್ಲದಿದ್ದರೂ ಅವರು ಇನ್ಮುಂದೆ ತಹಶೀಲ್ದಾರ್ ಕಚೇರಿಗೆ ಅಲೆಯಬೇಕಿಲ್ಲ. ಪಕ್ಕದ ನಾಡ ಕಚೇರಿಗೆ ಬೇಕಿದ್ದರೂ ಹೋಗಿ ಅಲ್ಲಿನ ಅಧಿಕಾರಿಗಳ ಸಹಾಯದಿಂದ ಅರ್ಜಿ ಸಲ್ಲಿಸಬಹುದು. ಸ್ಥಳೀಯವಾಗಿ ಜನರಿಗೆ ಸಹಾಯವಾಗಬೇಕು ಎಂಬ ಕಾರಣಕ್ಕೆ ನಾಡ ಕಚೇರಿಯಲ್ಲಿ ಅರ್ಜಿ ಸಲ್ಲಿಸಲು ಇಂದಿನಿಂದ ಅವಕಾಶ ನೀಡಲಾಗಿದೆ. ಅಲ್ಲದೆ, ಈವರೆಗೆ ರಾಜ್ಯಾದ್ಯಂತ 4 ಲಕ್ಷ ದಾಖಲೆಗಳನ್ನು ಹೀಗೆ ಡಿಜಿಟಲ್ ರೂಪದಲ್ಲಿ ಜನರಿಗೆ ನೀಡಿದ್ದೇವೆ. ಜನ ಯಾವ ದಾಖಲೆ ಅರ್ಜಿ ಸಲ್ಲಿಸುತ್ತಾರೆ ಆ ದಾಖಲೆಯನ್ನೇ ಮೊದಲು ಸ್ಕ್ಯಾನ್ ಮಾಡುತ್ತೇವೆ ಎಂದು ಅವರು ತಿಳಿಸಿದರು.

ಬೆಂಗಳೂರು ಸುತ್ತಮುತ್ತ ಅನೇಕ ದಾಖಲೆಗಳಲ್ಲಿ ಬೋಗಸ್ ಎಂಟ್ರಿ ಮಾಡಲಾಗಿದೆ. ಈ ಕೃತ್ಯದಲ್ಲಿ ಕೆಲವು ಅಧಿಕಾರಿಗಳ ಕೈವಾಡವೂ ಇದ್ದು, ಸರ್ಕಾರಕ್ಕೆ ಸಾವಿರಾರು ಕೋಟಿ ನಷ್ಟ ಉಂಟಾಗಿದೆ. ಅಲ್ಲದೆ, ಇಂತಹ ನಕಲಿ ದಾಖಲೆಗಳ ಪ್ರಕರಣದಲ್ಲಿ ನ್ಯಾಯಾಲಯದಲ್ಲಿ ಸರ್ಕಾರಕ್ಕೂ ಸತತ ಸೋಲಾಗುತ್ತಿದೆ ಎಂದು ಸಚಿವರು ಬೇಸರ ವ್ಯಕ್ತಪಡಿಸಿದರು.

ಈ ಹಿಂದೆ ಕೆಲವು ಅಧಿಕಾರಿಗಳ ಕುಕೃತ್ಯದಿಂದ ಸಾರ್ವಜನಿಕ ಆಸ್ತಿ ವ್ಯವಸ್ಥಿತವಾಗಿ ಭೂ ದೋಚುವವರ ಪಾಲಾಗಿದೆ. ಇನ್ಮುಂದೆ ಇಂತಹ ಅನಾಹುತ ಆಗದಂತೆ ತಡೆಯಬೇಕು. ಈ ದಂಧೆಗೆ ಭೂ ಸುರಕ್ಷಾ ಯೋಜನೆಯ ಮೂಲಕ ಕಡಿವಾಣ ಹಾಕುತ್ತಿದ್ದೇವೆ. ಹಿಂದೆ ಆಗಿರುವ ನಕಲಿ ವ್ಯವಹಾರಗಳಿಗೆ ಸೋತು ನಾವು ಕೈಕಟ್ಟಿ ಕೂರಲು ಸಾಧ್ಯವಿಲ್ಲ. ದಾಖಲೆಗಳು ನಕಲಿ ಅಂತ ಗೊತ್ತಾದ್ರೆ ಫೋರೆನ್ಸಿಕ್ ಡಿಪಾರ್ಟಮೆಂಟ್‌ಗೆ ನೀಡಿ ಅದನ್ನು ತನಿಖೆ ಮಾಡಿ ಸತ್ಯ–ಸುಳ್ಳನ್ನು ಸಾಬೀತು ಮಾಡಬೇಕು ಎಂದು ಅಧಿಕಾರಿಗಳಿಗೆ ಹೇಳಲಾಗಿದೆ. ಎಫ್‌ಎಸ್‌ಎಲ್ ತಂಡ ಅಧ್ಯಯನ ನಡೆಸುವುದಕ್ಕೆ ಸಹಾಯವಾಗಲು ಪ್ರಾಯೋಗಿಕ ಕೊಠಡಿಗೆ ಅಗತ್ಯ ಹಣ ಸಹಾಯ ನೀಡಲೂ ಸಹ ನಾವು ಸಿದ್ದರಿದ್ದೇವೆ. ಸೋಲನ್ನು ಒಪ್ಪುವ ಪ್ರಶ್ನೆಯೇ ಇಲ್ಲ. ಬೋಗಸ್ ದಾಖಲೆ ಎಂದು ಗೊತ್ತಾದರೆ ಸುಪ್ರೀಂ ಕೋರ್ಟವರೆಗೆ ಹೋರಾಟ ನಡೆಸುತ್ತೇವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಆಯುಕ್ತರಾದ ಸುನೀಲ್ ಕುಮಾರ್ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಉಪಸ್ಥಿತರಿದ್ದರು.

## ಸುಕ್ಷೇತ್ರ ಕನ್ನಡಗಿಯಲ್ಲಿ ಜಾತ್ರಾ ಮಹೋತ್ಸವ ದರ್ಶನಾಶೀರ್ವಾದ ಪಡೆದ ಅಸಂಖ್ಯಾತ ಭಕ್ತರು

ಕಲಬುರಗಿ:ಅ.5: ಕಾಳಗಿ ತಾಲೂಕಿನ ಬೆಣ್ಣೆತೊರೆ ಜಾಲಾಶಯ ದಡದಲ್ಲಿರುವ ಕನ್ನಡಗಿ ಗ್ರಾಮದಲ್ಲಿ ಶ್ರೀ ಮಲ್ಲಿಕಾರ್ಜುನ ದೇವರ ಜಾತ್ರೆ ಮಹೋತ್ಸವ ನಿಮಿತ್ಯ ಶ್ರಾವಣ 2ನೇ ಸೋಮವಾರ –ಸಂಭ್ರಮದಿಂದ ಪಲ್ಲಕ್ಕಿ ಮಹೋತ್ಸವ ನಡೆಯಿತ್ತು.



ನಸುಕಿನ ಜಾವ 5 ಗಂಟೆಗೆ ಶ್ರೀ ಮಲ್ಲಿಕಾರ್ಜುನ ದೇವರ ಕರ್ತ ಗದ್ದುಗೆಗೆ ವಿಶೇಷ ರುದ್ರಾಭಿಶೇಖ ಮಹಾ ಮಂಗಳಾರತಿ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಗಳು ನಡೆದವು. ಬಳಿಕ ಭಕ್ತರು ಸರಧಿ ಸಾಲಿನಲ್ಲಿ –ನಿಂತು ದೇವರ ದರ್ಶನ ಪಡೆದು ಪುನಿತರಾದರು. ಮಧ್ಯಾನ ಹೇರುರ (ಕೆ) ಗ್ರಾಮದ ಭಕ್ತರು ಭಜನದೊಂದಿಗೆ ದೇವಸ್ತಾನಕ್ಕೆ ಆಗಮಿಸಿದ ಬಳಿಕ ಶ್ರೀ ಮಲ್ಲಿಕಾರ್ಜುನ ದೇವರ ಮೂರ್ತಿಯನ್ನು ಮಾಲಿಬಿರಾದರೆ ಅವರ ಮನೆಯಿಂದ ಅಲಂಕೃತ ಪಲ್ಲಕ್ಕಿಯಲ್ಲಿ.ಪ್ರತಿಷ್ಠಾಪಿಸಲಾಯಿತು. ಸಕಲ ವಾದ ಮೇಳ ಭಜನೆ ಪುರಂತರು ಕುಣಿತದೊಂದಿಗೆ ದೇವಸ್ಥಾನದ ಸೂತ್ತಲೂ ಭವ್ಯ ಮೆರವಣಿಗೆ ಜರುಗಿತು.

ಭಕ್ತರಿಂದ, ಕನ್ನಡಗಿ ಮಲ್ಲಿಕಾರ್ಜುನ ಮಹಾರಾಜಕೀ ಜೈ. ಹರ ಹರ ಮಹಾದೇವ ಜೈ ಸೇರಿ ವಿವಿಧ ಘೋಷಣೆಗಳೂ ಮೊಳಗಿದವು. ದೇವಸ್ತಾನದ ಜಿರ್ಣೋದ್ದಾರ ಚಾರಿಟೆಬಲ ಟ್ರಷ್ಟನ ಅಧ್ಯಕ್ಷರಾದ ಮಲ್ಲಿನಾಥ ವಿ. ಪಾಟೀಲ ಕನ್ನಡಗಿ, ರಾಜಶೇಖರ ಕೆ. ಪಾಟೀಲ, ಚನ್ನಪ್ಪ ಎಸ್. ಮಾಲಿಪಾಟೀಲ, ವಿಜಯಕುಮಾರ ಆರ್. ಪಾಟೀಲ, ವಿನಯಕುಮಾರ ಆರ್. ಹೂಗಾರಿ, ಶಿವಕುಮಾರ ಸಿ. ಪಾಟೀಲ, ಮುರುಗೆಪ್ಪಾ ಜಾಡರ, ಕರಸಿದ್ದಪ್ಪ ಆರ್. ಪಾಟೀಲ, ರೇವಣಸಿದ್ದಪ್ಪ ಬಿ. ಪಾಟೀಲ, ಅಣ್ಣಾರಾವ ಎಮ್. ಬಿರಾದಾರ, ರಾಚೋಟೆಪ್ಪ ಸಿದ್ದಣ್ಣ, ಜಗಣ್ಣಾ ಬಿ. ನಿಂಗಶೆಟ್ಟಿ. ಚಂದ್ರಶೇಖರಯ್ಯಾ ನಾಗೂರ, ಕರಸಿದ್ದಪ್ಪಾ ಸಿ. ಪೊಲೀಸ ಪಾಟೀಲ, ಶ್ರೀಕಾಂತ ಎಮ್. ಕನ್ನಡಗಿ, ಮಾಂತು ಎಸ್. ಕನ್ನಡಗಿ, ಸಿದ್ದು ಎಸ್. ಕನ್ನಡಗಿ ಹಾಗೂ ಕಲಬುರಗಿ ಹೇರೂರ (ಕೆ) ನಾಗೂರು, ಶೆಳ್ಳಗಿ, ಸಾತಖೇಡ, ಹರಸೂರ, ಹೆಬ್ಬಾಣ, ತಡಕಲ, ಕಂದಗೂಳ, ಹೂಳಗೇರಾ ರೆವಗ್ಗಿ, ರಟಕಲ ಸೇರಿ ವಿವಿಧ ಸಾವಿರಾರು ಭಕ್ತು ಪಾಲಗೊಂಡಿದ್ದರು, ಡಿ.ವ್ಯಾ. ಎಸ್.ಪಿ. ಶಂಕರಗೌಡ ಪಾಟೀಲ, ಸಿ.ಪಿ.ಐ. ಜಗದೇವಪ್ಪಾ ಪಾಳಾ, ಪಿ.ಎಸ್.ಐ. ತಿಮ್ಮಯ್ಯಾ ಬಿ.ಕೆ, ತಹಸಿಲ್ದಾರ ಪೃಥವಿರಾಜ ಪಾಟೀಲ ನೆತೃತ್ವದಲ್ಲಿ ಸೂಕ್ತ ಬಂದೋಬಸ್ತ ಒದಗಿಸಲಾಯಿತು.

## ಕಲಿಕೆಯೊಂದಿಗೆ ಕೌಶಲ್ಯಕ್ಕೆ ಆದ್ಯತೆ:ವಸಂತರಾವ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.5: ಮಕ್ಕಳಲ್ಲಿ ಕುತುಹಲ ವೃದ್ಧಿಸಲು ಕಲಿಕೆಯೊಂದಿಗೆ ಕೌಶಲ್ಯ ಜ್ಞಾನ ನೀಡುವುದು ಅಗತ್ಯ ಎಂದು ಶಾರದಾ ಪಬ್ಲಿಕ್ ಶಾಲೆಯ ಅಧ್ಯಕ್ಷ ವಸಂತರಾವ ಪಾಟೀಲ್ ಅಭಿಪ್ರಾಯಪಟ್ಟರು.




ಪಟ್ಟಣದ ಬೀದರ ರಸ್ತೆಯ ಎಸ್‌ಬಿಐ ಬ್ಯಾಂಕ್ ಹಿಂಬದಿಯಲ್ಲಿರುವ ಶಾರದಾ ಪಬ್ಲಿಕ್ ಪ್ರೌಢಶಾಲೆಯಲ್ಲಿ 1 ರಿಂದ 9 ನೇ ತರಗತಿ ವರೆಗಿನ ಮಕ್ಕಳಿಗಾಗಿ ಹಮ್ಮಿಕೊಂಡ 'ರಾಖಿ ತಯ್ಯಾರಿಕೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಾಡಿನ ಸಾಂಸ್ಕೃತಿಕ ರಾಖಿ ಹಬ್ಬದ ಸಂದರ್ಭದಕ್ಕನುಗುಣವಾಗಿ ವಿದ್ಯಾರ್ಥಿಗಳಲ್ಲಿ ಕಲಿಕಾಸಕ್ತಿ ಹೆಚ್ಚಿಸಬೇಕಾದರೆ ಕೌಶಲ್ಯ ತರಬೇತಿ ನೀಡುವುದು ಇಂದು ಅನಿವರ್ಯ.ಗೃಹೋಪಯೋಗಿ ಕಚ್ಚಾ ಸರಕುಗಳನ್ನು ಬಳಸಿ ಮಕ್ಕಳಿಂದಲೇ ವಿವಿಧ ಮಾದರಿಯಲ್ಲಿ ರಾಖಿ ತಯ್ಯಾರಿಸಲು ಮಾರ್ಗದರ್ಶನ ನೀಡುವುದು ಅಗತ್ಯ.ಮಕ್ಕಳು ಆಸಕ್ತಿಯಿಂದ ವಿವಿಧ ಬಣ್ಣದಲ್ಲಿ ಬಹು ಮಾದರಿಯಲ್ಲಿ ರಾಖಿ ಸಿದ್ಧಪಡಿಸಿದರು.

ಸಿಆರ್‌ಪಿ ಅಂಬ್ರೀಶ ಖಂಡ್ರೆ ಹಸಿರು ಧ್ವಜು ತೋರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ನಿರ್ಣಾಯಕರಾಗಿ ಮುಖ್ಯಗುರು ಕಿರಣಬಾಡಸಂಗಿ,ನಿವೃತ್ತ ಮುಖ್ಯಗುರು ಜೈರಾಜ ದಾಬಶೆಟ್ಟಿ ಭಾಗವಹಿಸಿದ್ದರು.ವಿಜೇತ ಮಕ್ಕಳಿಗೆ ಸೂಕ್ತ ಬಹುಮಾನ ವಿತರಿಸಲಾಯಿತು.ಈಸಂದರ್ಭದಲ್ಲಿ ಆಡಳಿತಾಧಿಕಾರಿ ಮಹಾದೇವ ಪಟ್ನೆ ಇತರರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.

# ವಿಶ್ವ ಸ್ತನ್ಯಪಾನ ಸಪ್ತಾಹ ಆಚರಣೆಯ ಮಹತ್ವ ತಿಳಿಯಿರಿ:ಡಾ.ಶಿವಶಂಕರ ಬಿ.



ಮಲ್ಲಮ್ಮ ನುಡಿ ವಾರ್ತೆ

ಬೀದರ,ಆ.05:ದೇಶಾದ್ಯಂತ ಸ್ತನ್ಯಪಾನದ ಮಹತ್ವವನ್ನು ತಿಳಿಸಲು ಹಾಗೂ ಶಿಶುಗಳ ಮತ್ತುತಾಯಂದಿರಆರೋಗ್ಯ ಸುಧಾರಣೆಗಾಗಿಸ್ತನ್ಯಪಾನವನ್ನು ಮುಂದುವರೆಸಲು,ಉತ್ತೇಜಿಸಲು ಮತ್ತುಬೆಂಬಲಿಸಲು ಆಗಸ್ಟ್.1 ರಿಂದ 7ರವರೆಗೆವಿಶ್ವಸ್ತನ್ಯಪಾನ ಸಪ್ತಾಹ ಆಚರಿಸಲಾಗುತ್ತಿದೆ ಎಂದು ಬೀದರ ಆರ್.ಸಿ.ಹೆಚ್ ಅಧಿಕಾರಿ ಡಾ.ಶಿವಶಂಕರ ಬಿ. ಅವರು ತಿಳಿಸಿದರು.

ಅವರು ಮಂಗಳವಾರ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರನೂರು ಹಾಸಿಗೆ ಆಸ್ಪತ್ರೆ ಬೀದರನಲ್ಲಿಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಯಿಯಹಾಲುನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರಭವಿಷ್ಯಕ್ಕಾಗಿಹೂಡಿಕೆ ಮಾಡಿದಂತೆ ಎಂಬ ಈವರ್ಷದ ಘೋಷವಾಕ್ಯದೊಂದಿಗೆ ವಿಶ್ವ ಸ್ತನ್ಯಪಾನ ಸಪ್ತಾಹ" ಎಂಬ ಈ ವರ್ಷದಘೋಷವಾಕ್ಯದೊಂದಿಗೆ ಎಲ್ಲೆಡೆಜಾಗತಿಕಅಭಿಯಾನವಾಗಿ ಆಚರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಬೀದರ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರನೂರು ಹಾಸಿಗೆ ಆಸ್ಪತ್ರೆಯ ಸ್ತ್ರೀರೋಗ ತಜ್ಞರಾದಡಾ.ಸರೋಜಪಾಟೀಲ ಮಾತನಾಡಿ, ಜಿಲ್ಲೆಯ ಎಲ್ಲಾ ಆರೋಗ್ಯ ಸಂಸ್ಥೆಯ ಅಂ-ದರೆ ಸಾರ್ವಜನಿಕ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಎಸ್.ಎನ್.ಸಿ.ಯು, ಎಸ್.ಬಿ.ಎಸ್.ಯು,ಎನ್.ಆರ್.ಸಿ, ಪಿ.ಎನ್.ಸಿ.ಯು,ಮಕ್ಕಳವಾರ್ಡ್ ಕಾರ್ಯತಂತ್ರದ ಸ್ಥಳಗಳಲ್ಲಿ ವಿಶೇಷವಾಗಿ ಸ್ತನ್ಯಪಾನಕ್ಕಾಗಿ ಒಂದು ಕೊಠಡಿ ಮೀಸಲಿದೆ ಎಂದರು.

ಬೀದರ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರನೂರು ಹಾಸಿಗೆ ಆಸ್ಪತ್ರೆಯ ಮಕ್ಕಳ ತಜ್ಞರಾದ ಡಾ.ವರ್ಷಾ ತೊಂಡಾರೆ ಅವರು ಮಾತನಾಡಿ, ಮಗು ಜನಿಸಿದ ಒಂದು ಗಂಟೆಯೊಳಗೆ ಸ್ತನ್ಯಪಾನ ಮಾಡಿಸುವುದು ಕೊಲೊಸ್ಟ್ರೋಮ್ ಸೇವನೆಯ ಪ್ರಾಮುಖ್ಯತೆ ಹಾಗೂ ಮೊದಲ ಆರು ತಿಂಗಳ ವರೆಗೆ ಕಡ್ಡಾಯ ಸ್ತನ್ಯಪಾನ ಮಾಡುವುದರಿಂದ ಆರಂಭಿಕ ಬಾಲ್ಯದ ಬೆಳವಣಿಗೆ ಹೆಚ್ಚಿಸಲುಮತ್ತುಪೌಷ್ಟಿಕಾಂಶವನ್ನು ಸುಧಾರಿಸಲು ಹಾಗೂ ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡಲು ಸ್ತನ್ಯಪಾನ ಮಾಡಿಸುವುದು ಬಹಳ ಮುಖ್ಯವಾಗಿರುತ್ತದೆ. ಎಲ್ಲರೂ ಎಚ್ಚೆತ್ತುಕೊಂಡು ಎದೆಹಾಲಿನ ಮಹತ್ವದ ಬಗ್ಗೆ ಅರಿತುಕೊಂಡು ಎಲ್ಲಾ ತಾಯಂದಿರು ಹಾಗೂ ಗರ್ಭಿಣಿಯರು ಕನಿಷ್ಟ ಎರಡು ವರ್ಷದವರೆಗೆ ಸ್ತನ್ಯಪಾನ ಮಾಡಿಸುವಂತೆ ತಿಳಿಸಿದರು.

ಜಿಲ್ಲಾಕಾರ್ಯಕ್ರಮಸಂಯೋಜ-ಕ ಶಿವಶಂಕರ ಬೇಮಳಗಿ ಮಾತನಾಡಿ, ಸಪ್ತಾಹದ ಬಗ್ಗೆ ಎಲ್ಲಾ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಆರೋಗ್ಯ ಸಂಸ್ಥೆಗಳ ಉಪಕೇಂದ್ರಗಳ ಗುಂಪು ಸಭೆಗಳಲ್ಲಿ, ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಪೌಷ್ಠಿಕ ಸಮಿತಿ ಸಭೆಯಲ್ಲಿ ಸಭೆಗಳಲ್ಲಿ ಸ್ತನ್ಯಪಾನದ ಮಹತ್ವದ ಬಗ್ಗೆ ತಾಯಂದಿರು ಹಾಗೂ ಗರ್ಭಿಣಿಯರು ಮಾಹಿತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಾರ್ವಜನಿಕರಲ್ಲಿ ವಿನಂತಿಸಿದರು ಹಾಗೂ ಎಲ್ಲಾ ಗರ್ಭಿಣಿ ಮತ್ತು ಬಾಣಂತಿಯರಿಗೆ ಎದೆಹಾಲಿನ ಮಹತ್ವ ಕುರಿತು ಅರಿವು ಮೂಡಿಸಲಾಗುವುದು ಎಂಥು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಡಾ. ಗೌಸ್ ಪಾಶಾ ಮಕ್ಕಳ ತಜ್ಞರು, ಡಾ. ಪ್ರೀತಿ ಬಿರಾದರ ಸ್ತ್ರೀ-ರೋಗ ತಜ್ಞರು,. ಭಾಗ್ಯಲಕ್ಷ್ಮಿ ?? ಪ್ರ.ಡಿ.ಎನ್.ಓ., ಸಂಗೀತಾ ಡಿ.ಸಿ.ಎಂ, ರವಿ. ಡಿ.ಡಿ.ಎಂ, ಅನಿತಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೀದರ್‌ನಲ್ಲಿ ಮೂರು ತಾಸು ಬಿರುಸಿನ ಮಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 05 : ನಗರ ಹಾಗೂ ತಾಲ್ಲೂಕಿನಾದ್ಯಂತ ಭಾನುವಾರ ಮಧ್ಯಾಹ್ನ ಸುಮಾರು ಮೂರು ತಾಸು ಬಿರುಸಿನ ಮಳೆ ಸುರಿಯಿತು.

ಬೆಳಿಗ್ಗೆಯಿಂದ ಕಾರ್ಮೋಡ ಕವಿದಿತ್ತು. ಗುಡುಗು ಸಹಿತ ಬಿರುಸಿನ ಮಳೆಯಿಂದ ನಗರದ ಹಾರೂರಗೇರಿ ಕಮಾನ್, ಬೊಮ್ಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತದ ರೈಲ್ವೆ ಅಂಡರ್‌ಪಾಸ್, ರಾಮ್ ಚೌಕ್, ಮೈಲೂರ್ ಕ್ರಾಸ್, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಅಪಾರ ಪ್ರಮಾಣದ ನೀರು ಸಂಗ್ರಹಗೊಂಡಿತು. ಇದರಿಂದ ವಾಹನ ಸವಾರರು, ಪಾದಚಾರಿಗಳು ಪರದಾಟ ನಡೆಸಿದರು.

ಭಾನುವಾರ ರಜಾ ದಿನವಾಗಿದ್ದರಿಂದ ಬೆಳಿಗ್ಗೆ ಹೆಚ್ಚಿಗೆ ಜನರ ಓಡಾಟವಿರಲಿಲ್ಲ. ಆದರೆ, ಮಧ್ಯಾಹ್ನ ಉದ್ಯಾನ, ದೇವಸ್ಥಾನ ಸೇರಿದಂತೆ ಇತರೆ ಕಡೆಗಳಿಗೆ ಕುಟುಂಬ ಸದಸ್ಯರೊಂದಿಗೆ ತೆರಳಿದ್ದರು. ಆದರೆ,ಜೋರು ಮಳೆಗೆ ಎಲ್ಲವೂ ಅಸ್ತವ್ಯಸ್ತಗೊಂಡಿತು. ಅನೇಕರು ಮಳೆಯಲ್ಲೇ ನೆನೆದುಕೊಂಡು ಮನೆಗೆ ವಾಪಸಾದರು.

ತಾಲ್ಲೂಕಿನ ಅಮಲಾಪೂರ, ಚಿಟ್ಟಾ, ಘೋಡಂಪಳ್ಳಿ, ಯಾಕತಪೂರ,ಯದಲಾಪೂರ, ಗೋರನಳ್ಳಿ,ಗುನ್ನಳ್ಳಿ,ಶಹಾಪುರ, ಮಲ್ಕಾಪೂರ ಸೇರಿದಂತೆ ಹಲವೆಡೆ ಮಳೆಯಾಗಿರುವುದು ವರದಿಯಾಗಿದೆ.

# ದೇವರಿಗೂ ಕನ್ನಡ ಕಲಿಸಿದವರು ಬಸವಾದಿ ಶರಣರು: ಸುರೇಶ ಚನಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಅ.05:ಸಂಸ್ಕೃತದ ಹಾವಳಿ ಇರುವ ಅಂದಿನ ಕಾಲದಲ್ಲಿ ತಮ್ಮ ವಚನಗಳ ಮೂಲಕ ದೇವರಿಗೂ ಕನ್ನಡ ಭಾಷೆಯನ್ನು ಕಲಿಸಿದವರೇ ಬಸವಾದಿ ಶರಣರು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ತಿಳಿಸಿದರು.

ವಿಶ್ವಧರ್ಮ ಪ್ರವಚನ ಸಮಿತಿ,ಬಸವೇಶ್ವರ ಮಂದಿರ ಗಾಂಧಿನಗರ ಹಾಗೂ ರಾಷ್ಟ್ರೀಯ ಬಸವ ದಳ ಇವರ ಸಂಯುಕ್ತಾಶ್ರಯದಲ್ಲಿ ಗಾಂಧಿನಗರದ ಬಸವೇಶ್ವರ ಮಂದಿರದ ಸಭಾಂಗಣದಲ್ಲಿ ಪೂಜ್ಯಶ್ರೀಡಾ.ಚನ್ನಬಸವಾನಂದ ಸ್ವಾಮೀಜಿಯವರಿಂದ ನಡೆಯುತ್ತಿರುವ ವಿಶ್ವಧರ್ಮ ಪ್ರವಚನಸಮಾರಂಭದಲ್ಲಿಷಟಸ್ಥಲ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಬಹುಶಃ ಬಸವಣ್ಣನವರನ್ನು ಯಾರೇ ಮರೆತರೂ ಕೂಡಾ ಸ್ತ್ರೀಯರು ಮತ್ತು ದಲಿತ ಬಾಂಧವರು ಯಾವತ್ತೂ ಮರೆಯಬಾರದು. ದಲಿತರ ಓಣಿಗೆ ಹೋಗಿ ಅವರಿಗೆ ಲಿಂಗದೀಕ್ಷೆ ನೀಡಿ ಸರ್ವ ಸಮುದಾಯದವರನ್ನು ತನ್ನಹೃದಯದಲ್ಲಿಟ್ಟುಕೊಂಡು ಪೂಜಿಸಿದವರು ಬಸವಣ್ಣನವರು. ಸ್ತ್ರೀಯರಿಗೂ ಧಾರ್ಮಿಕ ಹಕ್ಕುಗಳನ್ನು ಸಿಗಬೇಕೆಂದು ಮನೆತೊರೆದ ಪ್ರಪಂಚದ ಏಕೈಕ ಪ್ರವಾದಿ ಬಸವಣ್ಣನವರಾಗಿದ್ದಾರೆ ಎಂದರು.

ಮುಂದುವರೆದು ಮಾತನಾಡಿದ ಚನಶೆಟ್ಟಿಯವರು ಮಂದಿರಗಳನ್ನು ನಿರ್ಮಾಣ ಮಾಡಿದವರಿಗೇ ನಿರ್ಮಾಣದ ನಂತರ ಒಳಗೆ ಪ್ರವೇಶವಿರಲಿಲ್ಲ.ಗ್ರಾಮದೊಳಗೂ ಅವರಿಗೆ ಪ್ರವೇಶ ನಿರಾಕರಣೆ ಮಾಡಲಾಗುತ್ತಿತ್ತು. ದೇವರ ದರ್ಶನ ಪಡೆಯಲಿಕ್ಕೂ ಅವಕಾಶ ಇರದಂತಹ ಅಂದಿನ ಸಂದರ್ಭದಲ್ಲಿ ಬಸವಣ್ಣನವರು ಸ್ವತಂತ್ರ ಧರ್ಮವೊಂದನ್ನು ಕೊಡುತ್ತಾರೆ. ಅದುವೇ ಲಿಂಗಾಯತ ಧರ್ಮ. ನೇರವಾಗಿ ದೇವರನ್ನು ಪೂಜಿಸುವ ಅವಕಾಶವನ್ನು ಕೊಡುತ್ತಾರೆ ಅದು ಇಷ್ಟಲಿಂಗದ ಮೂಲಕ. ದೇವರು ಮತ್ತು ಅರ್ಚಕರ ನಡುವಿನ ಅಂತರವನ್ನು ಕಡಿಮೆ ಮಾಡಿ. ನೇರವಾಗಿ ಇಷ್ಟಲಿಂಗವನ್ನು ಅಂಗೈಯಲ್ಲಿ ಇಟ್ಟುಕೊಂಡು ಪೂಜಿಸುವ ಅವಕಾಶ ನೀಡಿದ್ದರು. ಅದಕ್ಕಾಗಿ ನಾವು ಬಸವಣ್ಣನವರನ್ನು ಸ್ಮರಿಸಲೇಬೇಕೆಂದು ಸುರೇಶ ಚನಶೆಟ್ಟಿ ತಿಳಿಸಿದರು.

ಇದೇ ವೇಳೆ ದಿವ್ಯ ಸಾನಿಧ್ಯವನ್ನು ಬಸವಗಂಗೋತ್ರಿ ಬೆಂಗಳೂರಿನ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ವಹಿಸಿದ್ದರು. ವೇದಿಕೆ ಮೇಲೆ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ಹಾಗೂ ಬಸವೇಶ್ವರ ಮಂದಿರ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ನಾಗಬೂಷಣ ಕಮತಾಣೆ, ನಿವೃತ್ತ ಡೀನ್ ರವರಾದ ಡಾ.ಸುರೇಶ ಪಾಟೀಲ, ನಿವೃತ್ತ ಜಿ.ಪಂ.ಮುಖ್ಯ ಲೆಕ್ಕಾಧಿಕಾರಿ ಕಾಶಿನಾಥ ಸೂರ್ಯವಂಶಿ, ಬಸವೇಶ್ವರ ಮಂದಿರದ ಉಪಾಧ್ಯಕ್ಷರಾದ ಕಮಲಾಕರ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಪಘಾತ ವಿಮೆ ಕೊಡದ ಎಸ್‌ಬಿಐಗೆ 5.25 ಲಕ್ಷ ದಂಡ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5- ಅಪಘಾತ ವಿಮೆ ಪಾವತಿಸದ ಭಾರತೀಯ ಸ್ಟೇಟ್ ಬ್ಯಾಂಕ್‌ಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ 5.25 ಲಕ್ಷ ರೂ.ಗಳ ದಂಡ ವಿಧಿಸಿ ಆದೇಶ ಹೊರಡಿಸಿದೆ.

ಜಿಲ್ಲೆಯ ಬೀಳಗಿ ತಾಲೂಕಿನ ಜಾನಮಟ್ಟಿ ಗ್ರಾಮದ ಪವಿತ್ರಾ ಹಿರೇಮಠ ಅವರ ಪತಿ ಭಾರತೀಯ ಸೇನಾ ಪಡೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ರುದ್ರಯ್ಯ ಮಲ್ಲಯ್ಯ ಹಿರೇಮಠ ಅವರು 2022 ರ ಡಿಸೆಂಬರ 31 ರಂದು ರಸ್ತೆ ಅಪಘಾತದಲ್ಲಿ ನಿಧನ ಹೊಂದಿದ್ದರು.

ದೂರುದಾರ ಪವಿತ್ರಾ ಹಿರೇಮಠ ತನ್ನ ಪತಿ ಎಸ್‌ಬಿಐ ಪ್ಲಾಟಿನಮ್ ಎಟಿಎಂ ಕಾರ್ಡ ಹೊಂದಿರುವ ಸಂಗತಿ ತಿಳಿದ ಮೇಲೆ ವೈಯಕ್ತಿಕ ಅಪಘಾತ ವಿಮೆ ಕೊಡುವಂತೆ ಡಿಕ್ಲರೇಶನ್ ಫಾರ್ಮನ್ನು ತುಂಬಿಕೊಟ್ಟಿದ್ದರು. ಬ್ಯಾಂಕ್‌ನವರು ಕ್ಲೇಮ್ ಇತ್ಯರ್ಥಪಡಿಸದೇ ನಿರ್ಲಕ್ಷ ವಹಿಸಿದ್ದರು. ಅಲ್ಲದೇ ವಕೀಲರ ಮೂಲಕ ಕಾನೂನು ಬದ್ದ ನೋಟಿಸ್ ನೀಡಿದ್ದರೂ ಸಹ ಬ್ಯಾಂಕ್‌ನವರು ಯಾವುದೇ ಉತ್ತರ ನೀಡಿರಲಿಲ್ಲ.

ಈ ಬಗ್ಗೆ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಪವಿತ್ರಾ ದೂರು ನೀಡಿದ್ದರು. ಈ ಕುರಿತು ಕೂಲಂಕುಷವಾಗಿ ವಿಚಾರಣೆ ನಡೆಸಿದ ಜಿಲ್ಲಾ ಗ್ರಾಹಕರ ಆಯೋಗದ ಅಧ್ಯಕ್ಷ ಪ್ರಭುಲಿಂಗಸ್ವಾಮಿ ಹಿರೇಮಠ ಮತ್ತು ಮಹಿಳಾ ಸದಸ್ಯೆ ಸಿ.ಎಚ್.ಸಮಿಉನ್ನಿಸ್ ಅಬ್ರಾರ್ ಪ್ರಕರಣದಲ್ಲಿ ಎಸ್.ಬಿ.ಐ ಬ್ಯಾಂಕು ಸೇವಾ ನ್ಯೂನ್ಯತೆ ಎಸಗಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿ ಕಂಡುಬಂದಿದೆ ಎಂದು ಹೇಳಿ ಈ ಆದೇಶ ನೀಡಿದೆ.

ಈ ಹಿನ್ನೆಲೆಯಲ್ಲಿ ದೂರುದಾರರಿಗೆ ಆದೇಶವಾದ 45 ದಿನಗಳ ಒಳಗಾಗಿ ಅಫಘಾತ ವಿಮೆ ಹಣ 5 ಲಕ್ಷ ರೂ ಹಾಗೂ ಅದರ ಮೇಲೆ ಶೇ.6ರ ಬಡ್ಡಿಯನ್ನು ಈ ಪ್ರಕರಣ ದಾಖಲಾದ ದಿನಾಂಕದಿಂದ ಪೂರ್ತಿ ಹಣ ಸಂದಾಯ ಮಾಡುವಂತೆ ಆಯೋಗ ಆದೇಶ ಹೊರಡಿಸಿದೆ. ಅಲ್ಲದೇ ದೂರುದಾರರಿಗೆ ಆದ ಅನಾನುಕೂಲ ಮತ್ತು ಮಾನಸಿಕ ಹಿಂಸೆಗಾಗಿ 20 ಸಾವಿರ ರೂ.ಗಳ ಪರಿಹಾರ ಹಾಗೂ ಪ್ರಕರಣದ ಖರ್ಚು 5 ಸಾವಿರ ರೂ.ಗಳನ್ನು ನೀಡುವಂತೆ ತೀರ್ಪಿನಲ್ಲಿ ತಿಳಿಸಿದೆ.

# ಅಮರೇಶ್ವರ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಒಂದು ಕೋಟಿ ಅನುದಾನ: ಸಾಗರ್ ಖಂಡ್ರೆ



ಔರಾದ:ಅ.5:ಪಟ್ಟಣದ ಆರಾಧ್ಯ ದೈವ ಉದ್ಭವಲಿಂಗ ಶ್ರೀ ಅಮರೇಶ್ವರ ಮಂದಿರಕ್ಕೆ ಸೋಮವಾರ ಸಂಸದ ಸಾಗರ್ ಖಂಡ್ರೆ ಭೇಟಿ ನೀಡಿ ವಿಶೇಷ ಪೂಜೆ ನೆರವೇರಿಸಿ ಮಾತನಾಡಿದ ಅವರು ದೇವಸ್ಥಾನದ ಮಾಹಾದ್ವಾರ ಸೇರಿದಂತೆ ದೇವಸ್ಥಾನದ ಅಭಿವೃದ್ಧಿಗೆ ತಮ್ಮ ಅನುದಾನ ಅಡಿಯಲ್ಲಿ ಒಂದು ಕೋಟಿ ರೂಪಾಯಿ ಕೊಡುವುದಾಗಿ ಭರವಸೆಯನ್ನು ನೀಡಿದರು.

ದೇವಸ್ಥಾನದ ಅಭಿವೃದ್ಧಿಗೆ ತನ್ನ ಅನುದಾನದಲ್ಲಿ ಒಂದು ಕೋಟಿಯನ್ನು ನೀಡಿ ಕೆಲಸವನ್ನು ಅತಿ ಶೀಘ್ರದಲ್ಲೆ ಪ್ರಾರಂಭ ಮಾಡಲಾಗುವುದೆಂದು ತಿಳಿಸಿದರು.

ಪತ್ರಕರ್ತರಪ್ರಶ್ನೆಗೆಉತ್ತರಿಸುತ್ತಾ ಅಮರೇಶ್ವರ ಮಾಹಾದ್ವಾರದ ಉದ್ಘಾಟನೆಯನ್ನು ಮೂರು ಸಾರಿ ಆಗಿದ್ದರು, ಇನ್ನು ಪ್ರಾರಂಭವಾಗಿಲ್ಲ,ತಾವು ಯಾವಾಗ ಮಾಡುತ್ತೀರಿ ಎಂದು ಕೇಳಿದರು.

ಸಂಸದರು ಹಿಂದೆ ಉದ್ಘಾಟನೆಯಾಗಿದ್ದನು ಅವಾಗ ನಾನು ಇರಲಿಲ್ಲ ಈಗ ನನ್ನ ಅನುದಾನ ಕೊಡುತ್ತೇನೆ ಕೆಲಸವನ್ನು ಅತಿ ಶೀಘ್ರದಲ್ಲಿ ಪ್ರಾರಂಭ ಮಾಡಲು ತಿಳಿಸುತ್ತೇನೆಂದು ಹೇಳಿದರು. ಔರಾದ ಪಟ್ಟಣದಲ್ಲಿ ದಶಕಗಳಿಂದ ಅಲೆಮಾರಿ ಜನಾಂಗದ ಅಭಿವೃದ್ಧಿಯಾಗದೆ ಇರುವುದು ಇವರಿಗೆ ಸೂರು ಕಲ್ಪಿಸಿ ಕೊಡುವುದಾಗಿ ಸಾಕಷ್ಟು ರಾಜಕಾರಣಿಗಳು ಬಂದು ಹೋದರು ಇವರಿಗೆ ಯಾವುದೇ ತರಹದ ಸರ್ಕಾರದ ಸವಲತ್ತುಗಳು ದೊರಕಿಸಿ ಕೊಡುವಲ್ಲಿ ವಿಫಲವಾಗಿದ್ದಾರೆ ಆದರೆ ನಾನು ತಹಸಿಲ್ದಾರ್ ಅವರ ಮುಖಾಂತರ ಅಲೆಮಾರಿ ಜನಾಂಗದವರಿಗೆ ಈಗಾಗಲೇ ಎರಡು ಎಕರೆ ಜಮೀನನ್ನು ಮೀಸಲಿಟ್ಟು ಇವರಿಗೆ ಕೇಂದ್ರ ಸರಕಾರದ ಉ+3 ಯೋಜನೆ ಅಡಿಯಲ್ಲಿ 2:5ಲಕ್ಷ ಕೇಂದ್ರ ಸರಕಾರ ಹಣ,ಹಾಗೂ 1:5ಲಕ್ಷ ರಾಜ್ಯ ಸರಕಾರದ ಹಣ ಕೂಡಿ ಕೋಂಡು ಅತಿ ಶೀಘ್ರದಲ್ಲಿ ಅಲೆಮಾರಿ ಜನರಿಗೆ ಸೂರು ಕಲ್ಪಿಸಿ ಕೋಡಲಾಗುವುದು ತಿಳಿಸಿದರು.

ತಾಲೂಕಿನ ಡೊಂಗರಗಾವ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರ ಕುಂದು ಕೊರತೆಗಳು ಆಲಿಸಿ ಗ್ರಾಮಸ್ಥರು ಸಂಸದರಾದ ಸಾಗರ್ ಖಂಡ್ರೆ ಅವರಿಗೆ ಸನ್ಮಾನಿಸಿ ತನ್ನ ಸಮಸ್ಯೆಯನ್ನು ಗ್ರಾಮದ ಮುಖಂಡರು ತಿಳಿಸಿದರು ಕೂಡಲೇ ನಮ್ಮ ಗ್ರಾಮಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು, ಹಾಗೂ ನಮ್ಮ ಗ್ರಾಮದಲ್ಲಿ ಜೆ.ಜೆ.ಎಮ್. ಕೆಲಸವನ್ನು ಸರಿಯಾಗಿ ಆಗಿರುವುದಿಲ್ಲ ಕೂಡಲೆ ಸರಿಪಡಿಸಿ ಗ್ರಾಮಸ್ಥರಿಗೆ ನೀರಿನ ವ್ಯವಸ್ಥೆ ಮಾಡಿಬೇಕು ಎಂದು ಗ್ರಾಮಸ್ಥರು ಮಾಹಿತಿಯನ್ನು ನೀಡಿದರು.

ಕೂಡಲೇಗ್ರಾಮಸ್ಥರಸಮಸ್ಯೆಯನ್ನು ಬಗೆಹರಿಸಲಾಗುವುದೆಂದು ಗ್ರಾಮಸ್ಥರಿಗೆ ಭರವಸೆಯನ್ನು ನೀಡಿದರು.

ಈ ಸಂದರ್ಭದಲ್ಲಿ ತಹಸಿಲ್ದಾರ ಮಹೇಶ್ ಪಾಟೀಲ್ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ್ ಘಾಟೆ,ಬಸವರಾಜದೇಸಾಯಿ,ಕುಮಾರ ದೇಸಾಯಿ,ರಾಜಕುಮಾರಡವೆ,ಶರಣಪ್ಪಾ ಪಾಟೀಲ,ಡಾ"ಫಯ್ಯಾಜಾಅಲಿ, ನೇಹರು ಪಾಟೀಲ,ಶಂಕು ನಿಸ್ಪತೆ,ಮಲ್ಲಿಕಾರ್ಜುನ ಪಾಟೀಲ, ಸೋನು ದೇಶಮುಖ ಹಾಗೂ ಪಕ್ಷದ ಮುಖಂಡರು ಇದ್ದರು.

# ಎದೆ ಹಾಲು ಮಕ್ಕಳಿಗೆ ಅತ್ಯುತ್ತಮ ಆಹಾರ:ಡಾ.ಮೋಹನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.5:ಎದೆ ಹಾಲು ಮಕ್ಕಳಿಗೆ ಅತ್ಯುತ್ತಮ ಆಹಾರ, ಹಾಗಾಗಿ ತಾಯಿ ಎದೆ ಹಾಲು ಅಮೃತಕ್ಕೆ ಸಮಾನವಾಗಿರುತ್ತದೆ ಎಂದು ಡಾ.ಮೋಹನ ಸಿ.ಎಸ್‌ವೊ ಅವರು ಹೇಳಿದರು. ತಾಲೂಕಿನ ಸಂಗಮ ಗ್ರಾಮದ ಅಂಗನವಾಡಿ ಕೇಂದ್ರ-1 ನಲ್ಲಿ ಮಂಗಳವಾರ ನಡೆದ ವಿಶ್ವ ಸ್ತನಪಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು. ಎದೆ ಹಾಲು ಉಣಿಸುವುದರಿಂದ ಮಗುವಿನಲ್ಲಿ ರೋಗ ನಿರೋಧಕಶಕ್ತಿ ಬಲಗೊಳ್ಳುತ್ತದೆ ಮತ್ತು ತಾಯಿ ಮಗುವಿನ ಬಾಂಧವ್ಯ ವೃದ್ಧಿಸುತ್ತದೆ,ಎದೆ ಹಾಲನ್ನು ಉಣಿಸುವುದರಿಂದ ಇನ್ನೊಂದು ಮಗುವಿನ ಅಂತರವನ್ನು ಇಡಲು (ಗರ್ಭ ಧರಿಸದಂತೆ) ಸಹಕಾರಿಯಾಗುತ್ತದೆ ಎಂದು ಹೇಳಿದರು. ಮೊದಲ ಮೂರು ದಿನ ಬರುವ ಹಳದಿ ಗಟ್ಟಿ ಹಾಲಿಗೆ ಗಿಬ್ಬ ಹಾಲು ( ಕೊಲೆಸ್ಟ್ರಲ್) ಎನ್ನುವರು, ಇದು ರೋಗ ನಿರೋದಕ ಶಕ್ತಿ ಹೆಚ್ಚಿಸುತ್ತದೆ. ನಿಯಮಿತವಾಗಿ ಮೊದಲ 6 ತಿಂಗಳು ಎದೆ ಹಾಲನ್ನೇ ನೀಡಬೇಕು ನಂತರ ಎಲ್ಲಿಯವರೆಗೆ ಸಾಧ್ಯವೋ ಅಲ್ಲಿಯವರೆಗೆ ಎದೆ ಹಾಲು ನೀಡಬೇಕು ಎಂದು ಕಾರ್ಯಕ್ರಮದ ಉದ್ಘಾಟನೆ ಮಾಡಿ ಫಹೀಮಾ ಪಿ.ಎಚ್.ಸಿ.ವೊ. ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅಂಗನವಾಡಿ ಕಾರ್ಯಕರ್ತೆ ಅಶ್ವಿನಿ ಮಾತನಾಡಿ, ಎಲ್ಲರೂ ತಪ್ಪದೇ ಮಗುವಿಗೆ ಎದೆ ಹಾಲು ಉಣ್ಣಿಸ ಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆ ಸಂಪತ್ತಾ, ಸಹಾಯಕ ಸಿಬ್ಬಂದಿ ಶಾಂತಮ್ಮ, ಅಂಬಿಕಾ ಬಸವರಾಜ, ಜೈಶ್ರೀ ಗೌತಮ, ಸಂಗೀತ ವಿನೋದ, ಶೀತಲ್ ಶ್ರವಣ್, ಜೈ ಶ್ರೀ ಜಗನ್ನಾಥ, ಸುನಿತಾ ಅಮೂಲ, ಮೀನಾಕ್ಷಿ ಪ್ರದೀಪ, ಮಾಯಾ ರಾಹುಲ, ಮೆಪಾಜ ನಬಿಸಾಬ, ಕವಿತಾ ಆದಿತ್ಯ, ಸಂಧ್ಯಾ ಉತ್ತಮ, ಕಮಲಮ್ಮ ರಾಹುಲ ಸೇರಿದಂತೆ ಮಗುವಿನ ತಾಯಿ ಮತ್ತು ಇನ್ನಿತರ ಇದ್ದರು.

# ಬಾಲಕಿಯರ ಬಾಲ ಮಂದಿರಕ್ಕೆ ಅಪರ ಜಿಲ್ಲಾಧಿಕಾರಿ ಶಿವಾನಂದ ಭೇಟಿ; ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 05 –: ನಗರದ ಆಶಾಪುರ ರಸ್ತೆಯಲ್ಲಿರುವ ಬಾಲಕಿಯರ ಬಾಲ ಮಂದಿರಕ್ಕೆ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಅವರು ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.



ಈ ವೇಳೆ ಬಾಲ ಮಂದಿರದ ಅಡುಗೆ ಕೋಣೆಯ ವೀಕ್ಷಣೆ ನಡೆಸಿ, ಪ್ರತಿ ದಿನ ಮಕ್ಕಳಿಗೆ ನೀಡುತ್ತಿರುವ ಆಹಾರದ ಕುರಿತು ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ್ ಅವರಿಂದ ಮಾಹಿತಿ ಪಡೆದರು. ನಂತರ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿ ಮಕ್ಕಳ ಶಿಕ್ಷಣ, ಮೂಲಭೂತ ಸೌಲಭ್ಯಗಳು ಹಾಗೂ ಇತರೆ ವಿಷಯಗಳ ಬಗ್ಗೆ ಚರ್ಚಿಸಿದರು.

ಮಕ್ಕಳು ಇಲ್ಲಿನ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮವಾಗಿ ಅಭ್ಯಾಸ ಮಾಡಿ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಬಾಲ ಮಂದಿರದಲ್ಲಿ ಅನಾಥ ಮಕ್ಕಳು, ಕಾಣೆಯಾದ ಮಕ್ಕಳ, ಬಾಲ ಕಾರ್ಮಿಕ, ಬಾಲ್ಯ ವಿವಾಹ ಹಾಗೂ ಇತರೆ ಸಮಸ್ಯೆಗಳಿಂದ ರಕ್ಷಿಸಲಪಟ್ಟ ಮಕ್ಕಳು ಇದ್ದು, ಮಕ್ಕಳಿಗೆ ದೈನಂದಿನ ಮೆನು ಪ್ರಕಾರ ಆಹಾರ ವಿತರಣೆ ಇತರೆ ಸೌಲತ್ತುಗಳನ್ನು ನೀಡಬೇಕು. ಮಕ್ಕಳಿಗೆ ಸಂಗೀತ ಅಭ್ಯಾಸ, ಒತ್ತಡ ನಿರ್ವಹಣೆ ತರಗತಿಗಳನ್ನು ಆಯೋಜಿಸಬೇಕು ಎಂದರು

ನಂತರ ಬಾಲ ಮಂದಿರದ ಮಗುವಿನ ಜನ್ಮದಿನ ಆಚರಿಸುವ ಮೂಲಕ ಅಪರ ಜಿಲ್ಲಾಧಿಕಾರಿಗಳು ಮಕ್ಕಳ ಖುಷಿಯಲ್ಲಿ ಪಾಲ್ಗೊಂಡರು.

ಮಕ್ಕಳ ಶಿಕ್ಷಣ, ರಕ್ಷಣೆ, ಆರೋಗ್ಯ ಮತ್ತು ಇತರೆ ವಿಷಯಗಳ ಕುರಿತು ಹೆಚ್ಚು ಕಾಳಜಿಯಿಂದ ಕೆಲಸ ಮಾಡಬೇಕೆಂದು ಸಿಬ್ಬಂದಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಬಾಲ ಮಂದಿರದ ಅಧೀಕ್ಷಕರಾದ ಭಾರತಿ ನಾಯಕ್, ರಾಧಾ ಭಾಯಿ, ಕಾನೂನು ಪರಿವೀಕ್ಷಣಾ ಅಧಿಕಾರಿ ಶಿವರಾಜ್ ಪಾಟೀಲ್ ಸೇರಿದಂತೆ ಬಾಲ ಮಂದಿರದ ಸಿಬ್ಬಂದಿ ಹಾಜರಿದ್ದರು.

# ಆರ್ಯ ವೈಶ್ಯ ಅಭಿವೃದ್ಧಿ ನಿಗಮದಿಂದ ಅರಿವು ಶೈಕ್ಷಣಿಕ ಸಾಲಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 05–: ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಿ.ಇ.ಟಿ ಅಥವಾ ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸಗೂ ಪಿ.ಹೆಚ್.ಡಿ ನಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ 1,00,000 ರೂ.ಗಳ ಸಾಲವನ್ನು ಶೇ.2ರ ಬಡ್ಡಿ ದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುವುದು. ವ್ಯಾಸಂಗ ಪೂರ್ಣಗೊಂಡ ನಂತರ 04 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿನವರಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ 6,00,000 ರೂ.ಗಳ ಮಿತಿಯೊಳಗಿರಬೇಕು.

ಅರ್ಹತೆಗಳು: ಸಾಮಾನ್ಯ ವರ್ಗದಲ್ಲಿ ಆರ್ಯವೈಶ್ಯ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–ಜಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು). ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು. ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರು ತಮ್ಮ ಆಧಾರ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಹಾಗೂ ತಮ್ಮ ಬ್ಯಾಂಕ ಖಾತೆಗೆ ಆಧಾರ ಸಂಖ್ಯೆಯನ್ನು ಸೀಡ ಮಾಡಿಸಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33 ಹಾಗೂ ವಿಕಲಚೇತನರಿಗೆ ಶೇ.5 ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಇಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಆಸಕ್ತರು ವೆಬ್‌ಸೈಟ್ ವಿಳಾಸ: ಇಚಿಟಿಜಥಿ.ಇಚಿಡಿಟಚಿಣಚಿಇಚಿ.ರಿತ.ಎಟಿ ನಲ್ಲಿ ಅಕ್ಟೋಬರ್ 31ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ: 9448451111ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ್ಯಾಯಾಂಗ ವ್ಯವಸ್ಥೆ ಎಲ್ಲರಿಗೂ ಒಂದೆ : ನ್ಯಾ, ಮಹಾಂತೇಶ ದರಗದ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನ್ಯಾಯಾಂಗ ವ್ಯವಸ್ಥೆಯಲ್ಲಿ ಬಡವ, ಶ್ರೀಮಂತ ಎನ್ನುವ ಬೇದಭಾವವಿಲ್ಲಾ ಎಲ್ಲರಿಗೂ ಒಂದೆ ಸಮನಾದ ನ್ಯಾಯದಾನ ಮಾಡುವ ವ್ಯವಸ್ಥೆಯಿಂದ ಅನೇಕ ನೊಂದವರಿಗೆ ನ್ಯಾಯ ದೊರೆ–ಯುತ್ತಿದೆ ಅದರಂತೆ ಯುವಕರು ನ್ಯಾಯ ಎತ್ತಿ ಹಿಡಿಯುವ ಕೆಲಸ ಮಾಡಬೇಕು ಎಂದು ಕೊಪ್ಪಳದ ನ್ಯಾಯಾಧೀಶರಾದ ಮಹಾಂತೇಶ ದರಗದ ಹೇಳಿದರು.

ಪಟ್ಟಣದ ಹೊರವಲಯದ ಗದಗರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ವಿದ್ಯಾಲಯದಲ್ಲಿ ಐದು ವರ್ಷದ ಕಾನೂನು ಪದವಿ ತರಗತಿಗಳಿಗೆ ಚಾಲನೇ ನೀಡಿ ಅವರು ಮಾತನಾಡಿದರು.

ನಮ್ಮ ಭಾಗದಲ್ಲಿ ಪಧವಿ ನಂತರ ಕಾನೂನು ಅಭ್ಯಾಸಕ್ಕೆ ಅವಕಾಶವಿತ್ತು ಆದರೆ ಈ ಭಾರಿ ಪಿಯುಸಿ ನಂತರ ನೇರವಾಗಿ ಐದು ವರ್ಷದ ಕಾನೂನು ಪದವಿ ವ್ಯಾಸಂಗಕ್ಕೆ ಅವಕಾಶ ಸಿಕ್ಕಿರುವದು ಈ ಜಿಲ್ಲೆಯ ವಿದ್ಯಾರ್ಥಿಗಳ ಸೌಭಾಗ್ಯವಾಗಿದೆ ಅದರಂತೆ ಎಲ್ಲರೂ ಇದರ ಸದುಪಯೋಗ ಪಡಿಸಿಕೊಂಡು ಉತ್ತಮ ವಿದ್ಯಾಭ್ಯಾಸದೊಂದಿಗೆ ಸಮಾಜಕ್ಕೆ ನ್ಯಾಯ ದೊರಕಿಸಿಕೊಡುವ ನ್ಯಾಯಾದೀಶರಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ನ್ಯಾಯವಾದಿಗಳಾದ ಪೀರಾಹುಸೇನ್, ಹೊಸಳ್ಳಿ, ರಾಘವೇಂದ್ರ ಪಾನಘಂಟಿ, ಪಿನಿಕ್ಸ್ ಬಿ,ಇಡಿ ಕಾಲೇಜ್ ಪ್ರಾಚಾರ್ಯ ರಾಜಶೇಖರ, ಶಿವಪ್ರೀಯಾ ಕಾನೂನು ವಿದ್ಯಾಲಯದ ಪ್ರಾಚಾರ್ಯ ಡಾ, ಬಸವರಾಜ ಹನಸಿ, ಉಪನ್ಯಾಸಕಿ ರಜೀಯಾಬೇಗಂ ಸೇರಿದಂತೆ ಇನ್ನಿತರರು ಹಾಜರಿದ್ದರು.

## ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ವಿತರಣೆ

# ಸರ್ಕಾರದ ಯೋಜನೆಗಳು ಸದ್ಬಳಕೆಯಾಗಲಿ : ಸಚಿವ ದರ್ಶನಾಪುರ




ಶಹಾಪೂರ: ಸಹಕಾರದ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. 2013ರಿಂದಲೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕುರಿಗಾರರಿಗೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಆ ಯೋಜನೆಗಳು ಸದ್ಬಳಕೆಯಾದಾಗ ಮಾತ್ರ ಸರಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಸಚಿವ ಶರಣಬಸಪ್ಪಗೌಡ ದರ್ಶನಪುರ ಹೇಳಿದರು. ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣಿ ಅಭಿವೃದ್ಧಿ ನಿಗಮ ಬೆಂಗಳೂರು, ಪಶು ಪಾಲನ ಮತ್ತು ಪಶು ವೈದ್ಯ ಸೇವಾ ಇಲಾಖೆ ಯಾದಗಿರಿ, ಕರ್ನಾಟಕ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಮಹಾಮಂಡಳಿ ಬೆಂಗಳೂರು ಸಂಯುಕ್ತಾಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ನೀಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅನುಗ್ರಹ ಯೋಜನೆಯನ್ನು ಬಿಜೆಪಿ ಸರಕಾರ ರದ್ದು ಮಾಡಿತ್ತು. ಅದನ್ನು ಮತ್ತೆ ಪುನಃ ಸಿದ್ದರಾಮಯ್ಯನವರು ಜಾರಿಗೆ ತಂದಿದ್ದಾರೆ. ಸಂಚಾರಿ ಕುರಿಗಾರರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂದು ವಸತಿ ಶೈಕ್ಷಣಿಕ ಕೇಂದ್ರಗಳಲ್ಲಿ ಮೀಸಲಾತಿಯನ್ನು ನೇರವಾಗಿ ಒದಗಿಸಿ ಕೊಟ್ಟಿದ್ದಾರೆ ಎಂದರು. ಕುರಿ ಸಾಕಾಣಿಕೆ ಇಂದಿನ ದಿನಗಳಲ್ಲಿ ವಾಣಿಜ್ಯ ಕೇಂದ್ರವಾಗಿ ಮಾರ್ಪಟ್ಟಿದೆ. ಶಹಾಪೂರು ಕುರಿ ಮಾರುಕಟ್ಟೆ ರಾಜ್ಯದಲ್ಲಿಯೆ ಪ್ರಸಿದ್ಧಿ ಪಡೆದಿದೆ ಎಂದರು. ಕುರಿಗಾರರ ಬೇಡಿಕೆಗಳನ್ನು ಸಂಬಂಧಪಟ್ಟ ಸಚಿವರ ಗಮನಕ್ಕೆ ತಂದು ಪರಿಹರಿಸುವುದಾಗಿ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕುರಿ ಮಹಾಮಂಡಳಿ ನಿರ್ದೇಶಕ ಶಾಂತಗೌಡ ನಾಗನಟಗಿ ಮಾತನಾಡಿ, ಸಂಚಾರಿ ಕುರಿಗಾರರಿಗೆ ಸರಕಾರ ಹಲವು ಸೌಲಭ್ಯ ಒದಗಿಸಿ ಕೊಟ್ಟಿದೆ. 2013 ರಿಂದ 18 ರವರೆಗೆ ಕುರಿಗಾರರಿಗೆ ಟೆಂಟ್ ವ್ಯವಸ್ಥೆ ಕೊಡಲಾಗಿತ್ತು ಅದನ್ನು ರದ್ದು ಮಾಡಲಾಗಿದೆ. ಔಷಧಿಗಳು ಬರುತ್ತಿಲ್ಲ. ಇವೆಲ್ಲವುಗಳನ್ನು ಪುನಃ ಪ್ರಾರಂಭಿಸಿ ಜೊತೆಗೆ ಕಲಬುರ್ಗಿ ಮತ್ತು ಯಾದಗಿರಿ ಡಿಸಿಸಿ ಬ್ಯಾಂಕಿನಲ್ಲಿ ಜಿಲ್ಲೆಯಲ್ಲಿರುವ ಕುರಿ ಸಹಕಾರಿ ಸಂಘಗಳಿಗೆ ಜೀರೋ ಬಡ್ಡಿದರದಲ್ಲಿ ಪ್ರತಿ ಸಂಘದ 50 ಜನ ಸದಸ್ಯರಿಗೆ ಸಾಲ ಒದಗಿಸುವಂತೆ ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಆರಂಭದಲ್ಲಿ ಸಸಿಗೆ ನೀರೇರೆಯುವ ಮೂಲಕ ಕಾರ್ಯಕ್ರಮಕ್ಕೆ ಸಚಿವರು ಚಾಲನೆ ನೀಡಿದರು. ಕುರಿಗಾರರಿಗೆ ಸರಕಾರ ಒದಗಿಸಿದ ಸಂಚಾರಿ ಗುರುತಿನ ಚೀಟಿ ನೀಡಲಾಯಿತು. ಅಮೃತ ಸ್ವಾಭಿಮಾನ ಯೋಜನೆಯಡಿ ನೀಡಲಾಗ ಸಾಲದ ಚೆಕ್ ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷ ಮೈರುನಾಬೇಗಂ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಶರಭೈ, ತಹಸಿಲ್ದಾರ್

ಸಿದ್ದಾರೂಢ ಬನ್ನಿಕೊಪ್ಪ, ಜಿಲ್ಲಾ ಪಶು ವೈದ್ಯಕೀಯ ಸಹಾಯಕ ನಿರ್ದೇಶಕರಾದ ಡಾ.ರಾಜು ದೇಶಮುಖ್, ಕುರಿ ಮತ್ತು ಉಣ್ಣೆ ನಿಗಮ ಸಹಾಯಕ ನಿರ್ದೇಶಕರಾದ ಡಾ. ರಾಜಶೇಖರ ಕಾಸಭಾಗ್, ತಾಲೂಕು ಸಹಾಯಕ ನಿರ್ದೇಶಕ ಅಣ್ಣಾರಾವ್ ಪಾಟೀಲ್, ಅಮರೇಶ್ ಕೊಬ್ಬರಿ, ರಾಜು ರಾಥೋಡ್,

ಮುಖಂಡರಾದ ಭೀಮನಗೌಡ ದರಿಯಾಯಾಪುರ, ತಿರುಪತಿಗೌಡ ಬಾಣತಿಹಾಳ, ಮುನಿಯಪ್ಪಗೌಡ ನಾಗನಟಗಿ, ಬಸವರಾಜ ಪೂಜಾರಿ ಯಾಳಗಿ, ಮಾಳಪ್ಪಸುಂಕದ್ ಕೆಂಭಾವಿ, ಬಲಭೀಮ ಮಡ್ನಾಳ, ನಿಂಗಣ್ಣ ರಾಜಾಪುರ, ಬೀರಲಿಂಗ ಪೂಜಾರಿ, ಪರಶುರಾಮ್ ನಡಿಗೆರಿ ಕೆಂಭಾವಿ, ತಿಮ್ಮಣ್ಣ ದೇವಿಕೇರಿ ಕೆಂಭಾವಿ ಹಾಗೂ ಜಿಲ್ಲೆಯ ಅಧ್ಯಕ್ಷರು ಕಾರ್ಯದರ್ಶಿಗಳು ಮತ್ತು ಫಲಾನುಭವಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಫಿಟ್ ಇಂಡಿಯಾ ಅಭಿಯಾನ: ಸೈಕಲ್ ಜಾಥಾಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 05– ರಾಯಚೂರು ಮುಖ್ಯ ಅಂಚೆ ಕಚೇರಿಯಲ್ಲಿ ಫಿಟ್ ಇಂಡಿಂ–ಯಾ ಅಭಿಯಾನದ ಅಂಗವಾಗಿ ಸೈಕಲ್ ಜಾಥಾ ನಡೆಯಿತು. ಸಹಾಯಕ ಅಂಚೆ ಅಧೀಕ್ಷಕ ಆನಂದ್ ವಂದಾಳ್ ಸೈಕಲ್ ಜಾಥಾಗೆ ಚಾಲನೆ ನೀಡಿದರು.

ಮುಖ್ಯ ಅಂಚೆ ಕಚೇರಿಯ ಇ.ಟಿ ಪೋಸ್ಟ್ ಮಾಸ್ಟರ್ ಬಸವರಾಜ್ ಅಧ್ಯಕ್ಷತೆ ವಹಿಸಿದ್ದರು. ಎಪಿಎಂ ಆಂಜನೇಯ ನಾಯಕ್, ಅಂಚೆ ಮೇಲ್ವಿಚಾರಕ ಕುಮಾರ್ ಪವಾರ್, ರಾಜಕುಮಾರ, ಶಿವಪಾದ ಶಿವಂಗಿ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಕೊಲೆ ಆರೋಪಿಗಳಿಗೆ ಜಾಮೀನು ನೀಡದೆ ಕಠಿಣ ಶಿಕ್ಷೆಗೆ ಒಳಪಡಿಸಿ : ಅಲ್ಲಂಪ್ರಭು ಬೆಟದೂರು




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕಳೆದ ಎರಡು ದಿನಗಳ ಹಿಂದೆ ನಗರದಲ್ಲಿ ಪ್ರೇಮ ಪ್ರಕರಣದ ಕಾರಣಕ್ಕೆ ಯುವಕನನ್ನು ಕೊಲೆ ಮಾಡಿರುವ ಘಟನೆ ಅತ್ಯಂತ ಖಂಡನೀಯವಾಗಿದೆ. ಘಟನೆಗೆ ಸಂಬಂಧಿಸಿದಂತೆ ಈಗಾಗಲೆ ಆರೋಪಿಗಳನ್ನು ಬಂಧಿಸಲಾಗಿದ್ದು, ಅವರೆಲ್ಲರಿಗೂ ಬೇಲ್ ನೀಡದೇ ಕಠಿಣ ಶಿಕ್ಷೆಗೆ ಗುರಿಪಡಿಸುವಂತೆ ಪೊಲೀಸ್ ಇಲಾಖೆ ಮುಂದಾಗಬೇಕು ಎಂದು ಅಗ್ರಹಿಸಿರುವ ಪ್ರಗತಿಪರ ಮುಖಂಡರಾದ ಅಲ್ಲಂಪ್ರಭು ಬೆಟದೂರು, ಬಸವರಾಜ ಸುಳೆಭಾವಿ ಒತ್ತಾಯಿಸಿದರಲ್ಲದೇ ಒಂದೇ ದಿನದಲ್ಲಿ ಆರೋಪಿಗಳನ್ನು ಬಂಧಿಸಿರುವ ಎಸ್‌ಪಿ ಅವರು ಆರೋಪಿಯ ಹೇಳಿಕೆಯನ್ನು ಸಮರ್ಥಿಸಿಕೊಂಡಂತೆ ಮಾಧ್ಯಮಗಳ ಮುಂದೆ ನೀಡಿರುವ ಹೇಳಿಕೆಯಿಂದ ಅವರು ಕರ್ತವ್ಯಕ್ಕೆ ಚ್ಯುತಿ ತಂದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು. ಕೊಪ್ಪಳ ನಗರದಲ್ಲಿ ಈ ರೀತಿ ಕೊಲೆ ನಡೆದಿರುವ ಘಟನೆ ಅತ್ಯಂತ ವಿಷಾದನೀಯ ಸಂಗತಿಯಾಗಿದೆ. ಒಂದು ಕೊಮಿನ ಯುವತಿಯನ್ನು ಪ್ರೀತಿಸಿದ ಕಾರಣಕ್ಕೆ ಇನ್ನೊಂದು ಕೊಮಿನ ಯುವಕನನ್ನು ಮಚ್ಚಿನಿಂದ ಕೊಲೆ ಮಾಡುವಂತಹ ದೃಷ್ಕೃತ್ಯಕ್ಕೆ ಯುವಕರು ಕೈ ಹಾಕಿರುವುದು ಖಂಡನೀಯವಾಗಿದೆ. ಪ್ರೀತಿ, ಪ್ರೇಮಕ್ಕೆ ಜಾತಿ, ಧರ್ಮ ಅಡ್ಡಿ ಬರಬಾರದು. ಎರಡು ಕಡೆಯ ಪಾಲಕರು ಇದನ್ನು ಸರಿಪಡಿಸಿ ಅಂತರ್ ಜಾತಿ ವಿವಾಹ ಮಾಡಿ ಸಮಾಜದಲ್ಲಿ ಸಾಮರಸ್ಯ ಮೂಡಿಸಬೇಕಿತ್ತು. ಕೆಲವು ಮುಖಂಡರು ಕೂಡಾ ಇದನ್ನು ಬಗೆಹರಿಸಿ ಸೌಹಾರ್ದ ವಾತಾವರಣ ಮೂಡಿಸಬೇಕಾಗಿತ್ತು. ಆದರೆ ಇದು ಸಾಧ್ಯವಾಗದೇ ಕೊಲೆಯ ಹಂತಕ್ಕೆ ಹೋಗಿರುವುದು ನೋವ್ವಿನ ಸಂಗತಿಯಾಗಿದೆ. ಈ ಘಟನೆಯಲ್ಲಿ ಕೋಮು ಭಾವನೆ ಸೃಷ್ಟಿಸಬಾರದು. ಎಲ್ಲರು ಸಾಮಾರಸ್ಯ ಕಾಪಾಡಬೇಕು. ಎಂದು ಸಾರ್ವಜನಿಕರಿಗೆ ಪ್ರಗತಿಪರ ಮುಖಂಡರು ಮನವಿ ಮಾಡಿದರು.

ಗೋಷ್ಠಿಯಲ್ಲಿ ವಾಲ್ಮೀಕಿ ನಾಯಕ ಸಮಾಜದ ಮುಖಂಡ ರತ್ನಾಕರ, ಕೊಲೆಯಾದ ಯುವಕನ ತಂದೆ ನಿಂಗಜ್ಜ, ಮುಖಂಡ ಬಸವರಾಜ ಶಿಲಂವತರ ಇದ್ದರು.

# ಮುಖ್ಯಗುರುವಾಗಿ ಜಗನ್ನಾಥ ಬಿರಾದಾರ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ): ಪಟ್ಟಣದ ಪ್ರತಿಷ್ಠಿತ ವಿದ್ಯಾಸಂಸ್ಥೆಯಾದ ನಾಲಂದಾ ಪ್ರೌಢ ಶಾಲೆಯಲ್ಲಿ ಇತ್ತಿಚೆಗೆ ತೇರವಾದ ಮುಖ್ಯೋಪಾಧ್ಯಾಯ ಹುದ್ದೆಗೆ ಶ್ರೀ ಜೆ.ಎಸ್. ಬಿರಾದಾರ ರವರನ್ನು ನೇಮಕ ಮಾಡಿ ಎಸ್.ಪಿ.ಕೆ ಸಂಸ್ಥೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಕೆ. ಪುಂಡಲೀಕರಾವ ಆದೇಶಿಸಿದ್ದಾರೆ.



ಅಧಿಕಾರ ಸ್ವೀಕರಿಸಿ ಮಾತನಾಡಿದ ಮುಖ್ಯಗುರು ಜಗನ್ನಾಥ.ಎಸ್. ಬಿರಾದಾರ ಸುಮಾರು 36 ವರ್ಷಗಳ ಕಾಲ ಸಹ ಶಿಕ್ಷಕನಾಗಿ ಕರ್ತವ್ಯ ನಿರ್ವಹಿಸಿದ ನನ್ನನ್ನು ಈ ಜವಾಬ್ದಾರಿಯುತ ಸ್ಥಾನಕ್ಕೆ ಗುರುತಿಸಿದ ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು. ಎಲ್ಲಾ ಗುರುವೃಂದದವರನ್ನು ಪರಸ್ಪರ ಕುಟುಂಬ ಸದಸ್ಯರಂತೆ ವಿಶ್ವಾಸಕ್ಕೆ ತೆಗೆದುಕೊಂಡು ಶ್ರದ್ಧೆ, ನಿಷ್ಠೆ, ಭಕ್ತಿ, ನಿಸ್ವಾರ್ಥತೆ ಮತ್ತು ಪಾರದರ್ಶಕತೆಯೊಂದಿಗೆ ಮುನ್ನಡೆಯುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಸಹಶಿಕ್ಷಕರಾದ ಶ್ರೀ ದಿಲೀಪಕುಮಾರ ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ಅಸ್ಪಾಕಮಿಯ್ಯಾ, ಸಿದ್ಧಾರ್ಥ ಕಾಂಬಳೆ, ದೈಹಿಕ ಶಿಕ್ಷಕ ಸುನೀಲ ವಾಗಮೋಡೆ ಹಾಗೂ ಸಹಶಿಕ್ಷಕಿಯರಾದ ಶ್ರೀಮತಿ ಪ್ರೀಯಾ ಬಿರಾದಾರ, ಜ್ಯೋತಿ ಫೂಳೆ, ಮುಂಡೆ ಜ್ಞಾನೇಶ್ವರಿ ಉಪಸ್ಥಿತರಿದ್ದು, ಮುಖ್ಯಗುರುವಿಗೆ ಶುಭಕೋರಿದರು. ಶಿಕ್ಷಕ ಮಲ್ಲಿಕಾರ್ಜುನ ಕೋಟೆ ನಿರೂಪಿಸಿ, ವಂದಿಸಿದರು. ಮಕ್ಕಳು ಹಾಜರಿದ್ದರು.

# ವಿಶ್ವಸ್ತನಪಾನ ಸಪ್ತಾಹ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ತಾಲ್ಲೂಕಿನ ಉಜಳಂಬ ಗ್ರಾಮದಲ್ಲಿ ಸೋಮವಾರ ವಿಶ್ವಸ್ತನಪಾನ ಸಪ್ತಾಹ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಗ್ರಾಮ ಪಂಚಾಯತ್ ಅಧ್ಯ–ಕ್ಷೆ ಪಾರ್ವತಿ ಪಾರ್ವತಿ ಢೋಲೆ ಉದ್ಘಾಟಿಸಿದರು. ನಂತರ ಮಹಿಳಾ ಮತ್ತು ಮಕ್ಕಳ ಇಲಾಖೆಯ ಹಿರಿಯ ಮೇಲ್ವಿಚಾರಕಿ ದೈವತಾ ಅವರು ಮಾತನಾಡಿ ತಾಯಿ ಎದೆ ಹಾಲು ಮಗುವಿಗೆ ಅಮೃತ ಸಮಾನ ಇರುತ್ತದೆ. ಇದರಲ್ಲಿ ರೋಗನಿರೋಧಕ ಶಕ್ತಿ ಮತ್ತು ಮಗುವಿಗೆ ಅಗತ್ಯ ಇರುವ ಎಲ್ಲಾ ಪೌಷ್ಟಿಕಾಂಶಗಳು ಇರುತ್ತವೆ ಎಂದರು. ಮಗು ಹುಟ್ಟಿದ ಅರ್ಧ ಒಂದು ಗಂಟೆಯೋಳಗಾಗಿ ಮಗುವಿಗೆ ತಪ್ಪದೆ ಎದೆ ಹಾಲು ಉಣಿಸಬೆಕು. ಇದು ಮಗುವಿಗೆ ಚುಚ್ಚಮದ್ದು ಇದ್ದ ಹಾಗೆ ಎಂದರು. ಮಗುವಿಗೆ ಆರು




ತಿಂಗಳ ಪೂರ್ಣ ಆಗುವವರೆಗೆ ಮೇಲಿಂದ ನೀರು ಸಹಿತ ಏನೇನು ಕೋಡಬೇಡಿ ಎಂದು ತಿಳಿಸಿದರು. ತಾಯಿಗೆ ಎದೆ ಹಾಲುಣಿಸುವದರಿಂದ ಎದೆ ಕ್ಯಾನ್ಸರ ಆಗಿರುವದಿಲ್ಲ ಮತ್ತು ಅಂಡಾಣುಗಳ ಉತ್ತಪತ್ತಿ ಕಡಿಮೆ ಆಗಿರುವದರಿಂದ ಇದು ಗರ್ಭ ನೀರೋಧಕ ಆಗಿ ಕೆಲಸಾ ನೀರ್ವಹಿಸುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ನೀಲಾವತಿ, ತಾಹೇರಾ, ಜ್ಯೋತಿ, ಮಹಾದೇವಿ, ನಾಗಮ್ಮ ಮತ್ತು ವಿಜಯಲಕ್ಷ್ಮಿ ಸೇರಿದಂತೆ ಮತ್ತಿತರರು ಇದ್ದರು.

# ಕಾನೂನು ಪದವೀಧರರಿಗೆ ವೃತ್ತ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05–ಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ 2 ವರ್ಷಗಳ ಅವಧಿಯವರೆಗೆ ಶಿಷ್ಯವೇತನ ಸಹಿತ ವೃತ್ತಿ ತರಬೇತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಆನ್‌ಲೈನ್ ವೆಬ್‌ಸೈಟ್ ತಿತಿತಿ. ಣತಿ.ಇಚಿಡಿ.ಟುಥಿ.ಎಟಿ ಗೆ ಭೇಟಿ ನೀಡಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392–242453 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಂಭಾವಿಯ ಶ್ರೀ ಭೋಗೇಶ್ವರ ಆಶೀರ್ವಾದ ಪಡೆದುಕೊಂಡ ಸಚಿವ ಶರಣಬಸಪ್ಪ ದರ್ಶನಾಪುರ.!



ಮಲ್ಲಮ್ಮ ನುಡಿ ವಾರ್ತೆ

ಸುರಪುರ: ತಾಲೂಕಿನ ಕೆಂಭಾವಿ ಪಟ್ಟಣಕ್ಕೆ ಆಗಮಿಸಿದ ರಾಜ್ಯದ ಸಣ್ಣ ಕೈಗಾರಿಕಾ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಸೋಮವಾರ ಕೆಂಭಾವಿ ಪಟ್ಟಣದ ಪ್ರಸಿದ್ಧ ಹಾಗೂ ಐತಿಹಾಸಿಕ ಶ್ರೀ ಭೋಗೇಶ್ವರ ದೇವಸ್ಥಾನಕ್ಕೆ ಧಾರ್ಮಿಕ ಭೇಟಿ ನೀಡಿದರು. ಅವರೊಂದಿಗೆ ಸ್ಥಳೀಯ ಮುಖಂಡರು, ಭಕ್ತರು ಹಾಗೂ ಬೆಂಬಲಿಗರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು. ಸಚಿವರಿಗೆ ಗ್ರಾಮದ ಹಿರಿಯ ಹಾಗೂ ಗೌರವಾನ್ವಿತ ಮುಖಂಡರಾದ ಶ್ರೀ ಸಂಗಣ್ಣ ಸಾಹುಕಾರ್ ತುಂಬಿಗಿ ಮತ್ತು ಶ್ರೀ ರಾಜಶೇಖರ್ ಹಿರೇಮಠ ಅವರು ಆತ್ಮೀಯ ಸ್ವಾಗತ ನೀಡಿ, ದೇವಸ್ಥಾನದ ಮಹತ್ವ ಹಾಗೂ ಇತಿಹಾಸವನ್ನು ಪರಿಚಯಿಸಿದರು. ಶ್ರೀ ಕೆಂಭಾವಿಯ ಭೋಗೇಶ್ವರ ದೇವಸ್ಥಾನದ ಆಡಳಿತ ಮಂಡಳಿಯಿಂದ ಸಚಿವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಶ್ರೀ ಭೋಗೇಶ್ವರ ದೇವಸ್ಥಾನ ಪ್ರಸಿದ್ಧಿ ಪಡೆದಿರುವ ಈ ದೇವಾಲಯವು, ಸ್ಥಳೀಯ ಜನರ ಭಕ್ತಿಯ ಕೇಂದ್ರವಾಗಿದ್ದು, ಪ್ರತಿದಿನ ನೂರಾರು ಭಕ್ತರು ಭೇಟಿ ನೀಡುತ್ತಾರೆ. ದೇವಾಲಯದ ಆವರಣದಲ್ಲಿ ನಡೆದ ವಿಶೇಷ ಪೂಜೆ ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಿ ಶ್ರೀ ಭೋಗೇಶ್ವರನ ದರ್ಶನ ಪಡೆದರು. ಅರ್ಚಕರಿಂದ ಆಶೀರ್ವಾದ ಪಡೆದ ನಂತರ, ಅವರು ದೇವಸ್ಥಾನದ ವಿಕಾಸ ಹಾಗೂ ಸುಧಾರಣೆಗಾಗಿ ಅಭಿವೃದ್ಧಿ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು. ಸಂಗಣ್ಣ ಸಾಹುಕಾರ್ ತುಂಬಿಗಿ ಅವರು ಮಾತನಾಡುತ್ತಾ, "ದೇವಾಲಯದ ಜೀರ್ಣೋದ್ಧಾರ ಮತ್ತು ಪ್ರವಾಸೋದ್ಯಮದ ಕೇಂದ್ರವಾಗಿ ಅಭಿವೃದ್ಧಿ ಪಡಿಸುವಂತೆ ಸರ್ಕಾರ ಗಮನ ಹರಿಸಬೇಕು," ಎಂದು ಮನವಿ ಮಾಡಿದರು. "ರಾಜಶೇಖರ್ ಹಿರೇಮಠ" ಅವರು ದೇವಾಲಯದ ಸುತ್ತಮುತ್ತಲಿನ ಮೂಲ ಸೌಕರ್ಯಗಳ ಅಭಿವೃದ್ಧಿಯ ಅವಶ್ಯಕತೆಯ ಕುರಿತು ಸಚಿವರ ಗಮನ ಸೆಳೆದರು.

ಕಾರ್ಯಕ್ರಮದ ಭಾಗವಾಗಿ ಸಚಿವರು ಸ್ಥಳೀಯ ಸಾರ್ವಜನಿಕರ ಜೊತೆಗೆ ಸಂವಾದ ನಡೆಸಿ, ಶ್ರೀ ಭೋಗೇಶ್ವರ ದೇವಸ್ಥಾನ ಅಭಿವೃದ್ಧಿಗೆ ಬೇಕಾದ ಸೌಲಭ್ಯಗಳ ಬಗ್ಗೆ ಚರ್ಚೆ ನಡೆಸಿದರು. ಇವರ ಭೇಟಿಯಿಂದ ಕೆಂಭಾವಿ ಪಟ್ಟಣದ ಗ್ರಾಮಸ್ಥರಲ್ಲಿ ಶ್ರೀ ಭೋಗೇಶ್ವರ ದೇವಸ್ಥಾನ ಅಭಿವೃದ್ಧಿ ಆಗುತ್ತೆ ಎಂದು ನಿರೀಕ್ಷೆಯ ಭರವಸೆ ಮೂಡಿದೆ.!

# ಆಗಸ್ಟ್ 7ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಆಗಸ್ಟ್ 7ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಖಾಸಗಿ ಸಂಸ್ಥೆಗಳು ಆಗಮಿಸಿ, ತಮ್ಮಲ್ಲಿರುವ ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

8ನೇ ತರಗತಿ ಮೇಲ್ಪಟ್ಟು ಅಭ್ಯರ್ಥಿಗಳಿಗೆ ನೇರ ಸಂದರ್ಶನ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಬಿ.ಇ–ಇಲೆಕ್ಟ್ರಾನಿಕ್ಸ್&ಕಮ್ಯೂನಿಕೇಶನ್ ಮತ್ತು ಬಿ.ಇ.–ಇಲೆಕ್ಟ್ರಿಕಲ್ & ಇಲೆಕ್ಟ್ರಾನಿಕ್ಸ್ ಅಭ್ಯರ್ಥಿಗಳು ಟೀಚಿಂಗ್ ಫೀಲ್ಡ್‌ನಲ್ಲಿ ಕೆಲಸ ಮಾಡಲು ಇಚ್ಛಿಸುವವರು ಈ ನೇರ ಸಂದರ್ಶನ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಲಿಚ್ಛೀಸುವ 18 ರಿಂದ 30 ವರ್ಷ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿ ಪಟ್ಟಣದ ವಿವಿಧ ರಸ್ತೆ, ವೃತ್ತಗಳ ಮರುನಾಮಕರಣ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05–ಕಂಪ್ಲಿ ಪುರಸಭೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಬಡಾವಣೆ(ನಗರ)ಗಳ ಮುಖ್ಯ ರಸ್ತೆಗಳಲ್ಲಿನ ವೃತ್ತಗಳನ್ನು ಹೊಸದಾಗಿ ನಾಮಕರಣ ಮಾಡಲು ಪಟ್ಟಣದ ವಿವಿಧ ಸಮಾಜದವರು ಮನವಿ ಸಲ್ಲಿಸಿದ್ದು, ನಾಮಕರಣ ಕುರಿತು ಯಾರಿಂದಲಾದರೂ ಆಕ್ಷೇಪಣೆಗಳಿದ್ದಲ್ಲಿ ಲಿಖಿತ ಮತ್ತು ಸಮಂಜಸ ದಾಖಲೆಗಳೊಂದಿಗೆ ಪ್ರಕಟಣೆಗೊಂಡ 30 ದಿನದೊಳಗಾಗಿ ಕಂಪ್ಲಿ ಪುರಸಭೆ ಕಚೇರಿಗೆ ಸಲ್ಲಿಸಬಹುದು.

ಕಂಪ್ಲಿ ಪಟ್ಟಣದ ನಟರಾಜ ಕಲಾ ಮಂದಿರದ ಮುಂಭಾಗದಲ್ಲಿರುವ ಇರುವ ವೃತ್ತವನ್ನು 'ದೇವರ ದಾಸಿಮಯ್ಯ ವೃತ್ತ' ಎಂದು ನಾಮಕರಣ, ವಾರ್ಡ್ ನಂ.17 ರ ನಟರಾಜ ಕಲಾ ಮಂದಿರದ ಮುಂಭಾಗದಲ್ಲಿ ಇರುವ ಕಮಾನಿಗೆ 'ಶ್ರೀ ಚೌಡೇಶ್ವರ ಮಹಾದ್ವಾರ' ಎಂದು ನಾಮಕರಣ, ಪಟ್ಟಣದ ವಿನಾಯಕ ನಗರದ 05 ನೇ ಅಡ್ಡರಸ್ತೆಯ ಚತುರ್ಮುಖ ರಸ್ತೆಗೆ 'ಶ್ರೀ ಮಹಾಯೋಗಿ ವೇಮನ ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ' ವೃತ್ತ ಎಂದು ನಾಮಕರಣ, ಪಟ್ಟಣದ 05 ನೇ ವಾರ್ಡ್ನ 'ಬೀರಲಿಂಗೇಶ್ವರ ನಗರ' ಎಂದು ಸರ್ಕಾರದ ಸುತ್ತೋಲೆಗಳು ಮತ್ತು ಮಾರ್ಗಸೂಚಿ ಪ್ರಕಾರ ನಾಮಕರಣ ಮಾಡಲು ಉದ್ದೇಶಿಸಲಾಗಿದ್ದು, ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು.

ಅವಧಿ ಮೀರಿ ಬಂದ ಮನವಿ ಅಥವಾ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.09 ರಂದು ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಕಾಯಕಯೋಗಿ ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ಆ.09 ರಂದು ಬೆಳಿಗ್ಗೆ 11.30 ಗಂ–ಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಸಿಂಧನೂರಿನ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಉಪನ್ಯಾಸಕ ಡಾ.ಗಂಗಾಧರ ಎಲ್ ಅವರು ಜಯಂತಿ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಸಂಗನಕಲ್ಲಿನ ಯೋಗೇಶ್ ಬಣಗಾರ ಅವರಿಂದ ವಚನ ಸಂಗೀತ ಇರಲಿದೆ.

ಮೆರವಣಿಗೆ: ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 09.30 ಗಂಟೆಗೆ ನಗರದ ಕೊರವರ ಸಮುದಾಯ ಭವನ ಆವರಣದಿಂದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಕೊರವರ ಬೀದಿ–ಸುಂಕ್ಲಮ್ಮ ದೇವಸ್ಥಾನ–ಕೌಲ್ ಬಜಾರ್ ಮುಖ್ಯರಸ್ತೆ–ವಾಲ್ಮೀಕಿ ಭವನ–ಡಾ.ಬಾಬುಜಗಜೀವನರಾಂ ಭವನದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ದವರೆಗೆ ನಡೆಯಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ತಾಯಿಯ ಎದೆಹಾಲು ಮಗುವಿನ ಮೊದಲ ಲಸಿಕೆ: ಶಿವಾನಂದ ಪೂಜಾರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಯಿ ಎದೆಹಾಲು ಮಗುವಿನ ಸರ್ವತೋಮಕ ಬೆಳವಣಿಗೆಗಾಗಿ ಮುಖ್ಯವಾಗಿದ್ದು, ತಾಯಿ ಎದೆಹಾಲು ಮಗುವಿಗೆ ನೀಡುವ ಮೊದಲ ಲಸಿಕೆಯಾಗಿದೆ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಪೂಜಾರ ಹೇಳಿದರು.

ಅವರು ಶನಿವಾರ ಗಂಗಾವತಿ ನಗರ ಪ್ರದೇಶದ ಕಿಲ್ಲಾ ಏರಿಯಾದ 1ನೇ ಅಂಗನವಾಡಿ ಕೇಂದ್ರದಲ್ಲಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಇಸ್ಲಾಂಪುರ–ಗಂಗಾವತಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷ ಆಗಸ್ಟ್ ಮೊದಲನೇ ವಾರ (1–7ನೇ ದಿನ)ದಲ್ಲಿ "ವಿಶ್ವ ಸ್ತನ್ಯಪಾನ ಸಪ್ತಾಹ" ಜಾಗೃತಿ ಕಾರ್ಯಕ್ರಮ ಆಚರಿಸಲಾಗುತ್ತದೆ. ಇದರ ಉದ್ದೇಶ ತಾಯಿಯ ಎದೆಹಾಲು ಶಿಶುವಿಗೆ ನೀಡುವ ವಿಧಾನಗಳ ಬಗ್ಗೆ ಗರ್ಭಿಣಿ, ಬಾಣಂತಿಯರಿಗೆ ಹಾಗೂ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. "ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಹೆರಿಗೆಯಾದ ಅರ್ಧ ಗಂಟೆಯಲ್ಲಿ ತಾಯಿಯ ಎದೆಹಾಲು ನೀಡಬೇಕು, ಹೆರಿಗೆಯಾದ ಮೂರು ದಿನದಲ್ಲಿ ಬರುವ ಹಳದಿ ಹಾಲಿನಲ್ಲಿ "ಕೊಲಸ್ಟ್ರಾಂ" ಎಂಬ ರೋಗನಿರೋಧಕ ಶಕ್ತಿ ಹೆಚ್ಚಿರುತ್ತದೆ. ಆರು ತಿಂಗಳವರೆಗೆ ಕೇವಲ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು, ಬೇರೇನೂ ನೀಡಬಾರದು ಎಂದರು.

ತಾಯಿ ಎದೆಹಾಲು ನೀಡುವುದುರಿಂದ ಮಗುವಿನ ಸರ್ವತೋಮಕ ಬೆಳವಣಿಗೆ ಹೊಂದಲು ಸಾಧ್ಯವಾಗುತ್ತದೆ. ಅದು ಮಗುವಿಗೆ ನೀಡುವ ಮೊದಲ ಲಸಿಕೆಯಾಗಿದೆ. ಎದೆಹಾಲು ಕುಡಿಸುವುದರಿಂದ ತಾಯಿ ಮತ್ತು ಮಗುವಿಗೆ ಬಹಳಷ್ಟು ಉಪಯುಕ್ತವಾಗುತ್ತದೆ. ತಾಯಿ ಮತ್ತು ಮಗುವಿನ ಬಾಂದವ್ಯ ಹೆಚ್ಚಾಗುತ್ತದೆ. ತಾಯಿಯ ಎದೆಹಾಲು ನೀಡುವುದರಿಂದ ಎದೆ ಕ್ಯಾನ್ಸರ್ ಬರುವುದಿಲ್ಲ. ಗರ್ಭದಾರಣೆ ಮುಂದೂಡುತ್ತದೆ. ಮಗುವಿಗೆ ಸರಳವಾಗಿ ಜೀರ್ಣವಾಗುತ್ತದೆ. ಎದೆಹಾಲು ಕಾಯಿಸುವ ಅಗತ್ಯವಿಲ್ಲ, ಮಗುವಿಗೆ ಬೇಕೆಂದಾಗ ಸಿಗುತ್ತದೆ. ಮಗುವಿಗೆ ಯಾವುದೇ ಕಾರಣಕ್ಕೂ ಬಾಟಲಿ ಹಾಲನ್ನು ನೀಡಬಾರದು. ಒಂದು ವೇಳೆ ಬಾಟಲಿ ಹಾಲನ್ನು ನೀಡಿದರೆ ಮಗುವಿಗೆ ಅತಿಸಾರ ಭೇದಿ ಉಂಟಾಗುವ ಸಾಧ್ಯತೆ ಇರುತ್ತದೆ. ಪ್ರತಿ ತಾಯಿಯು ತನ್ನ ಮಗುವಿಗೆ ದಿನಕ್ಕೆ 10 ರಿಂದ 12 ಬಾರಿ ಎದೆಹಾಲು ನೀಡಬೇಕು. ತಾಯಿಯ ಎದೆಹಾಲು ನೀಡುವುದರಿಂದ ಯಾವುದೇ ರೀತಿಯ ಅಪೌಷ್ಠಿಕತೆ, ನಿಮೋನಿಯಾ ಹಾಗೂ ಇತರೆ ಖಾಯಿಲೆಗಳು ಹರಡದಂತೆ ರಕ್ಷಣೆ ನೀಡುತ್ತದೆ. ಮಗುವಿನ ತೂಕವೂ ಹೆಚ್ಚಾಗುತ್ತದೆ. ಇದರಿಂದ ಅಪೌಷ್ಠಿಕ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.



ಗಂಗಾವತಿ ಆರೋಗ್ಯ ನಿರೀಕ್ಷಣಾಧಿಕಾರಿ ಹನುಮೇಶ ಅವರು ಕ್ಷಯರೋಗ ನಿರ್ಮೂಲನೆ, ಕುಷ್ಠರೋಗ ನಿರ್ಮೂಲನೆ, ಸೋಂಕಿತ ಸೊಳ್ಳೆಗಳಿಂದ ಹರಡುವ ಸಾಂಕ್ರಾಮಿ ಕ ರೋಗಗಳ ನಿಯಂತ್ರಣ ಹಾಗೂ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು, ವಿವರವಾಗಿ ಮಾತನಾಡಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸಾವಿತ್ರಿ ಅವರು ಕುಟುಂಬ ಕಲ್ಯಾಣ ಕಾರ್ಯಕ್ರಮ, ಬಾಲ್ಯವಿವಾಹ ನಿಷೇಧ, ಸಾವತ್ರಿಕ ಲಸಿಕಾ ಕಾರ್ಯಕ್ರಮ, ಆರ್.ಸಿ.ಹೆಚ್ ಕಾರ್ಯಕ್ರಮಗಳ ಬಗ್ಗೆ ಫ್ಲಿಫ್‌ಚಾರ್ಟ ಪುಸ್ತಕ ಬಳಸಿ, ಮಾಹಿತಿ ನೀಡಿದರು. ಕೊನೆಯಲ್ಲಿ ಸ್ತನ್ಯಪಾನ ಸಪ್ತಾಹ ಕುರಿತು ಪ್ರತಿಜ್ಞಾವಿಧಿ ಭೋದಿಸಲಾಯಿತು.

ಕಾರ್ಯಕ್ರಮದಲ್ಲಿ ಆಶಾ ಮತ್ತು ಅಂಗನವಾಡಿ ಕಾರ್ಯಕತೆ–ಯರಾದ ಪುಷ್ಪಾ, ಅಶ್ವಿನಿ, ಅನ್ನಪೂರ್ಣ, ಸ್ತ್ರಿಶಕ್ತಿ ಸಂಘದ ಪದಾಧಿಕಾರಿಗಳಾದ ಶ್ರೀದೇವಿ, ಶರಣಮ್ಮ ಸೇರಿದಂತೆ ಗರ್ಭಿಣಿಯರು, ಭಾಣಂತಿಯರು, ಕಿಶೋರಿಯರು ಹಾಗೂ ಆಸ್ಪತ್ರೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇಂದ್ರಾನಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಕಾನೂನುಗಳ ಜಾಗೃತಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಇಂದ್ರಾನಗರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಹಕ್ಕುಗಳ & ಮಕ್ಕಳ ಪರವಾದ ಕಾನೂನುಗಳ ಕುರಿತು ಸೋಮವಾರದಂದು ಜಾಗೃತಿ ಮೂಡಿಸಲಾಯಿತು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಇಂದರಗಿ ಗ್ರಾಮ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ "ಕಾಯಂ ಜನತಾ ನ್ಯಾಯಾಲಯ ಕಾರ್ಯವಿಧಾನ ಪರಿಚಯ, ನಾಲ್ಸಾ ಜಾಗೃತಿ ಯೋಜನೆ–2025 ಹಾಗೂ ಮಕ್ಕಳ ಹಕ್ಕುಗಳು ಬಾಲ್ಯ ವಿವಾಹ ನಿಷೇಧ ಕಾಯ್ದೆ ಪೋಕ್ಸೋ ಕಾಯ್ದೆ"ಗಳ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ್ ಅವರು ಗಿಡ–ಕ್ಕೆ ನೀರೆಯುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಬಾಲ್ಯ ವಿವಾಹ ನಿಷೇಧ ಕಾಯ್ದೆ 2006 ಮತ್ತು ಅದರ ಅಡಿಯಲ್ಲಿ ಇರುವ ಶಿಕ್ಷೆಗಳ ಕುರಿತು ಮತ್ತು ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳು, ಕಾನೂನಿನ ಸೂಕ್ಷ್ಮತೆಗಳು ಮತ್ತು ಮಕ್ಕಳ ಬೆಳವಣಿಗೆಗಳ ಸೂಕ್ಷ್ಮತೆಗಳ ಕುರಿತು ಹಾಗೂ ಪೋಕ್ಸೋ ಕಾಯ್ದೆಯ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತ ಸ್ವಾಮಿ ಪೂಜಾರ ಅವರು, ಮಕ್ಕಳ ಹಕ್ಕುಗಳಾದ ಬದುಕುವ ರಕ್ಷಣೆಯ ವಿಕಾಸ ಹೊಂದುವ ಮತ್ತು ಭಾಗವಹಿಸುವ ಹಕ್ಕುಗಳ ಕುರಿತು ಮಾಹಿತಿಯನ್ನು ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಶಿವಲೀಲಾ ವನ್ನೂರು ಅವರು, ಪೋಕ್ಸೋ ಕಾಯ್ದೆ ಅಡಿಯಲ್ಲಿನ ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶದ ಕುರಿತು ಮಾಹಿತಿ ನೀಡಿದರು.

ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಶ್ರೀರಾಮಪ್ಪ ಅವರು, ಅಗ್ನಿ ಅವಘಡದ ಸಂದರ್ಭದಲ್ಲಿ ಯಾವ ರೀತಿ ಅಗ್ನಿಯನ್ನು ನಂದಿಸುವುದು ಎಂಬುದರ ಕುರಿತು ಪ್ರಾಯೋಗಿಕವಾಗಿ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ್ ನರೇಗಾ ಯೋಜನೆಯ ಸಹಾಯಕ ನಿರ್ದೇಶಕ ಮಹೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ವರದವ್ವ ನಿಂಗಪ್ಪ ಎಮ್ಮಿ, ಉಪಾಧ್ಯಕ್ಷರಾದ ಅಮರೇಶ್, ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಬಸವರಾಜ್ ಹಿರೇಗೌಡ್ರು, ಮುನಿರಾಬಾದ್ ಪೊಲೀಸ್ ಠಾಣೆಯ ಅಮರೇಶ, ಅಂಗನವಾಡಿ ಮೇಲ್ವಿಚಾರಕಿ ಉಷಾ ಸಿಂಗ್ ಸೇರಿದಂತೆ ಇಂದ್ರಗಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರು ಗ್ರಾಮದ ಗುರುಹಿರಿಯರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಪ್ರಸ್ತಾವನೆಯನ್ನು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಾಗರಾಜ್ ಎಸ್. ಎಚ್ ಅವರು ನೆರವೇರಿಸಿದರು. ಮಕ್ಕಳ ರಕ್ಷಣಾ ಘಟಕದ ಪ್ರತಿಭಾ ಕಾಶಿಮಠ ಅವರು ಕಾರ್ಯಕ್ರಮ ನಿರೂಪಿಸಿದರು. ಮಕ್ಕಳ ಸಹಾಯವಾಣಿಯ ಶರಣಪ್ಪ ಸಿಂಗನಾಳ್ ಅವರು ಕೊನೆಯಲ್ಲಿ ವಂದಿಸಿದರು.

# ಅಕ್ರಮ ಅಕ್ಕಿ ಸಾಗಾಟಕ್ಕೆ ಕರವೇ ಕಿಡಿ, ಅಕ್ರಮವನ್ನು ತಡೆಗಟ್ಟಿ : ಬಿ.ಗಿರೀಶಾನಂದ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಸರ್ಕಾರದ ಅನ್ನಭಾಗ್ಯ ಯೋಜನೆಯ ಪಡಿತರ ಅಕ್ಕಿಯನ್ನು ಅನಧಿಕೃತವಾಗಿ ಸಂಗ್ರಹಿಸಿ ಬೇರೆಡೆಗೆ ಸಾಗಾಟ ಮಾಡುವವರ ಮೇಲೆ ಸೂಕ್ತ ಕಾನೂನು ಕ್ರಮಕೈಗೊಂಡು ಅಕ್ರಮವನ್ನು ತಡೆಗಟ್ಟಬೇಕು ಎಂದು ಒತ್ತಾಯಿಸಿ ಮಂಗಳವಾರದಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರ ಬಿರಾದರ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ಕೊಪ್ಪಳ ಜಿಲ್ಲಾ ಘಟಕದಿಂದ ಮನವಿ ಪತ್ರ ಸಲ್ಲಿಸಲಾಯಿತು.

ಕರವೇ ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ಅವರು ಮನವಿ ಪತ್ರ ಸಲ್ಲಿಸಿ ಮಾತನಾಡಿದರು ಸರ್ಕಾರವು ಬಡವರಿಗೆ ಅನುಕೂಲವಾಗಲಿ ಎಂದು ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಲ್ಲಿ ಪಡಿತರವನ್ನು ವಿತರಿಸುತ್ತಿರುವುದು ಶ್ಲಾಘನೀಯವಾಗಿದೆ. ಆದರೆ ಈ ಯೋಜನೆಯ ಅಕ್ಕಿಯನ್ನು ಬಡವರಿಂದ ಕಸಿದುಕೊಂಡು ಬೇರೆಡೆಗೆ ಸಾಗಾಟ ಮಾಡುವ ಜಾಲವು ಜಿಲ್ಲೆಯಲ್ಲಿ ಸಕ್ರೀಯವಾಗಿದ್ದು, ಕಾಳ ಸಂತೆಯಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದನ್ನೇ ಕೆಲವರು ದಂಧೆಯನ್ನಾಗಿ ಮಾಡಿಕೊಂಡಿರುವುದನ್ನು ಬಲವಾಗಿ ಖಂಡಿಸಿದ ಅವರು ಈ ದಂಧೆ–ಕೋರರು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಅನಧೀಕೃತವಾಗಿ ಅಕ್ಕಿ ಸಂಗ್ರಹಿಸುವ ಏಜೆಂಟರನ್ನು ನೇಮಕಮಾಡಿಕೊಂಡು ಅವರಿಂದ ಸರಬರಾಜು ಆಗಿರುವ ಅಕ್ಕಿಯನ್ನು ಒಂದಡೆ ಸಂಗ್ರಹಿಸಿ ಬೇರೆಡೆಗೆ ಹೆಚ್ಚಿನ ಬೆಲೆಗೆ ಲೋಡ್‌ಗಟ್ಟಲೆ ಕಳುಹಿಸುತ್ತಿದ್ದಾರೆ.



> ಬಡವರ ಹೊಟ್ಟೆಗೆ ಸೇರಬೇಕಾದ ಅನ್ನ ದಂಧೆಕೋರರ ಪಾಲಾಗುತ್ತಿದೆ. ಒಂದು ವಾರಗಳ ಕಾಲಮೀತಿಯಲ್ಲಿ ಈ ಎಲ್ಲಾ ಅಕ್ರಮ ಚಟುವಟಿಕೆಗಳ ಮೇಲೆ ಕ್ರಮ ಕೈಗೊಂಡು ತಪ್ಪಿತಸ್ಥರನ್ನು ಕಾನೂನಿನಡಿಯಲ್ಲಿ ಶಿಕ್ಷೆಗೆ ಒಳಪಡಿಸಬೇಕು. ಇಲ್ಲದಿದ್ದರೆ ಕರವೇಯ ಪ್ರತಿಯೊಂದು ಗ್ರಾಮ ಶಾಖೆಯ ಕಾರ್ಯಕರ್ತರು ಈ ಅಕ್ರಮವನ್ನು ತಡೆಗಟ್ಟಲು ಬೀದಿಗಿಳಿಯಬೇಕಾಗುತ್ತದೆ ಎಂದು ಈ ಮೂಲಕ ಎಚ್ಚರಿಸುತ್ತಿದ್ದೇವೆ.

ಈ ಅಕ್ರಮಕ್ಕೆ ಕೆಲವು ಕಾಣದ ಕೈಗಳ ಅಭಯ ಹಸ್ತ, ಜನಪ್ರತಿನಿಧಿಗಳ ಶ್ರೀರಕ್ಷೆ ಹಾಗೂ ಕೆಲವು ಅಧಿಕಾರಿಗಳ ಬೆಂಬಲವೂ ಇರುವುದು ಜಗಜ್ಜಾಯಿರಾಗಿದೆ. ಜಿಲ್ಲೆಯ ಕೊಪ್ಪಳ, ಗಂಗಾವತಿ, ಕಾರಟಗಿ, ಯಲಬುರ್ಗಾ, ಕುಷ್ಟಗಿ, ಕುಕನೂರು, ಕನಕಗಿರಿ ಹಾಗೂ ತಾವರಗೇರೆ ಪ್ರಮುಖ ಪಡಿತರ ಅಕ್ಕಿ ಸಂಗ್ರಹಣೆ ಮತ್ತು ರಪ್ತು ಕೇಂದ್ರಗಳಾಗಿದ್ದು, ಜಿಲ್ಲಾ ಕೇಂದ್ರ ಕೊಪ್ಪಳದಲ್ಲಿ ಪ್ರತಿನಿತ್ಯ ಕನಿಷ್ಟ 70 ರಿಂದ 80 ಟನ್ ಗೋಡೌನ್ ಒಂದರಲ್ಲಿ ಸಂಗ್ರಹಿಸುವುದು ಹಾಗೂ ಗಂಗಾವತಿ ನಗರದಲ್ಲಿ ಕಿಲ್ಲಾಏರಿಯಾ, ಶರಣಬಸವೇಶ್ವರ ಕ್ಯಾಂಪ್ ಹಾಗೂ ಇನ್ನಿತರ ಪ್ರದೇಶಗಳಿಂದ ಕನಿಷ್ಟ 50 ರಿಂದ 60 ಟನ್ ಅನಧೀಕೃತ ಪಡಿತರ ಅಕ್ಕಿ ರಫ್ತಾಗುತ್ತಿದ್ದು, ಅಂತರಾಜ್ಯಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಪ್ರಭಾವಿ ಜಾಲವು ಸಕ್ರೀಯವಾಗಿದ್ದು, ಈ ಅಕ್ರಮದ ಬಗ್ಗೆ ಕರವೇ ಜಿಲ್ಲಾ ಘಟಕವು ಸಾಕಷ್ಟು ಬಾರಿ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರು ಅಕ್ರಮ ತಡೆಗಟ್ಟಬೇಕಾದ ಜಿಲ್ಲೆಯ ಶಿರಸ್ತೆದಾರರು ಮತ್ತು ಆಹಾರ ನಿರೀಕ್ಷಕರು ಕಂಡು ಕಾಣದಂತೆ ಕುಳಿತಿರುವುದು ಇವರ ಆಡಳಿತಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲೂಕಾಧ್ಯಕ್ಷ ಗವಿಸಿದ್ದಪ್ಪ ಚಕ್ಕಡಿ, ನಗರಘಟಕ ಅಧ್ಯಕ್ಷ ಪ್ರಫುಲ್‌ಕುಮಾರ ಪಾಟೀಲ, ಭಾಗ್ಯನಗರ ಅಧ್ಯಕ್ಷ ವಿರೇಶ ಮುಂಡಾಸದ, ಕರವೇ ಮುಖಂಡರಾದ ಆನಂದ ಗೌಡರ, ಗುರು ಅಂಗಡಿ, ಮಲ್ಲೇಶಪ್ಪ ಕೊಪ್ಪಳ, ರವಿ ದದೇಗಲ್, ಬಸಣ್ಣ ದದೇಗಲ್, ನಿಂಗಪ್ಪ ಕಿಟಗೇರಿ, ಹಾಗೂ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಸಮಾಜದ ಅಭಿವೃದ್ಧಿಯಲ್ಲಿ ಪತ್ರಕರ್ತರ ಪಾತ್ರ ಬಹುಮುಖ್ಯ : ಶಾರದಾ ಘಾನಘಂಟಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾಗ್ಯನಗರದ ವಿದ್ಯಾವಿಕಾಸ ಶಾಲೆಯ ಸಭಾ ಭವನದಲ್ಲಿ ಘಾನಘಂಟಿ ಫೌಂಡೇಶನ್, ವಾಸವಿ ಕ್ಲಬ್ ವತಿಯಿಂದ ಪತ್ರಿಕಾ ದಿನಾಚರಣೆ ಮತ್ತು ಪತ್ರಕರ್ತರಿಗೆ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಹಿರಿಯ ಪತ್ರಕರ್ತರೆಲ್ಲರೂ ಉದ್ಘಾಟಿಸಿದರು. ಇದೇ ವೇಳೆ ಮಾತಾನಾಡಿದ ಪತ್ರಕರ್ತರಾದ ಸಾಧಿಕ್ ಅಲಿ ಅವರು ಪತ್ರಕರ್ತರು ವಿಷಯವನ್ನು ಬರೀ ಸುದ್ದಿಯನ್ನಾಗಿ ನೋಡದೆ ಸಮಾಜದ ಅಭಿವೃದ್ಧಿ ಬಗ್ಗೆಯೂ ಚಿಂತಿಸಬೇಕಾಗುತ್ತದೆ. ಪತ್ರಕರ್ತರು ನಿರ್ಣಾಯಕರಲ್ಲ, ಓದುಗರೇ ನಿರ್ಣಾಯಕರು. ವಿದ್ಯಾರ್ಥಿಗಳು ಕೂಡ ಹೊಸ ವಿಷಯಗಳ ಬಗ್ಗೆ ತಿಳಿದುಕೊಳ್ಳಲು ಪತ್ರಿಕೆಯನ್ನು ಓದುವ ಹವ್ಯಾಸ ರೂಪಿಸಿಕೊಳ್ಳಿ ಎಂದರು.

ಪತ್ರಕರ್ತರಾದ ಸೋಮರಡ್ಡಿ ಅಳವಂಡಿ ಮಾತನಾಡಿ ಸಮಾಜದ ಅಭಿವೃದ್ಧಿಯ ಬಗ್ಗೆ ಮಾಹಿತಿ ಹಂಚಿಕೊಳ್ಳುವ ಪ್ರತಿಯೊಬ್ಬರು ಪತ್ರಕರ್ತರೆ, ಸೋಶಿಯಲ್ ಮೀಡಿಯಾದಲ್ಲಿ ಬೇಗನೆ ಸುದ್ದಿ ವಿನಿಮಯವಾದರೂ ಅದರ ಬಗ್ಗೆ ನಂಬಿಕೆ ಕಡಿಮೆ. ಯಾವಾಗಲೂ ಸತ್ಯ ಮಾತ್ರ ಸುದ್ದಿಯಾಗಬೇಕೆಂದರು.

ಹಿರಿಯ ಪತ್ರಕರ್ತರಾದ ಶರಣಪ್ಪ ಬಾಚಲಾಪುರ, ರವೀಂದ್ರ ಅವರು ಕೂಡ ಅನಿಸಿಕೆ ಹಂಚಿಕೊಂಡರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಘಾನಘಂಟಿ ಫೌಂಡೇಶನ್‌ನ ಅಧ್ಯಕ್ಷರಾದ ಶಾರದಾ ಘಾನಘಂಟಿ ಅವರು ಮಾತನಾಡಿ ಪತ್ರಕರ್ತರು ಸಮಾಜವನ್ನು ತಿದ್ದುವ ಕಾರ್ಯವನ್ನು ಮಾಡುತ್ತಾರೆ. ಪ್ರತಿಭೆಗಳಿಗೆ ವೇದಿಕೆಯನ್ನು ಒದಗಿಸುವುದರ ಜೊತೆಗೆ ಪ್ರೋತ್ಸಾಹ ನೀಡುತ್ತಾರೆ. ಸಮಾಜದ ಅಭಿವೃದ್ಧಿಯಲ್ಲಿ ಪತ್ರಕರ್ತರ ಪಾತ್ರ ಬಹುಮುಖ್ಯವಾಗಿದೆ ಎಂದರು.

ಪತ್ರಿಕಾ ದಿನಾಚರಣೆಯ ನಿಮಿತ್ತವಾಗಿ ಶಾಲಾ ಆವರಣದಲ್ಲಿ ಹಿರಿಯ ಪತ್ರಕರ್ತರೆಲ್ಲಾ ಸೇರಿ ಸಸಿ ನೆಡಲಾಯಿತು. ಪತ್ರಕರ್ತರಾದ ಸಾಧಿಕ್ ಅಲಿ, ಸೋಮರಡ್ಡಿ ಅಳವಂಡಿ, ಜಿ.ಎಸ್.ಗೋನಾಳ, ಶರಣಪ್ಪ ಬಾಚಲಾಪುರ, ರವೀಂದ್ರ ವಿ.ಕೆ, ದತ್ತು ಕಮ್ಮಾರ, ಶ್ರೀಕಾಂತ ಅಕ್ಕಿ, ಅನಿಲ್ ಬಾಚನಹಳ್ಳಿ, ಬಿ.ಎನ್.ಹೊರಪೇಟಿ, ಸಿದ್ದು ಹಿರೇಮಠ, ಎಂ.ಎನ್. ಕುಂದಗೋಳ, ನಾಗರಾಜ ಹಡಗಲಿ, ಸಾವೆದ್ ಹುಸೇನ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವಾದಿರಾಜ್ ದೇಸಾಯಿ, ಪ್ರಿಯದರ್ಶಿನಿ ಮುಂಡರಗಿಮಠ, ಹೇಮಾ ಪಾನಘಂಟಿ, ಗಿರಿಜಾ, ವೈಷ್ಣವಿ, ಸಂದೇಶ್, ಅರ್ಚನಾ ಹಾಗೂ ಫೌಂಡೇಶನ್ ಪದಾಧಿಕಾರಿಗಳು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತಿ ಇದ್ದರು. ಶಿಕ್ಷಕ ಮೋಹನ್ ಅವರು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಅನಾಮಧೇಯ ಮೃತ್ತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05–ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಳ್ಳಾರಿ–ಬೊಮ್ಮನಾಳ್ ರಸ್ತೆಯ ಹೊಲದ ಮಧ್ಯೆಯ ಇಳಿಜಾರು ಪ್ರದೇಶದಲ್ಲಿ ಸುಮಾರು 50 ರಿಂದ 55 ವರ್ಷದ ಅನಾಮಧೇಯ ವ್ಯಕ್ತಿಯು ಆ.04 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ತಿಳಿದಿರುವುದಿಲ್ಲ. ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ: ಎತ್ತರ ಸುಮಾರು 5.4 ಅಡಿ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ತಲೆಯ ಮೇಲ್ಭಾಗದಲ್ಲಿ ಬೋಳು ಇದೆ. ಬಲಗೈಗೆ ವಿವಿಧ ಹರಳುಗಳುಳ್ಳ ರಾಖಿ ಕಬ್ಬಿಣದ ಕಡಗ, ಬಲಗೈ ಬೆರಳುಗಳಿಗೆ ಆಮೆ ಚಿಹ್ನೆಯ ಉಂಗುರ ಹೊಂದಿರುತ್ತಾನೆ.

ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461, ಮೊ.9480803049 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಸನಮುಕ್ತ ದಿನಾಚರಣೆ-ವಿದ್ಯಾರ್ಥಿಗಳಿಗೆ ಕರೆ ದುಶ್ಚಟ ವಿರೋಧಿ ರಾಯಬಾರಿಗಳಾಗಿ: ಗುರುಮಹಾಂತಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ದೈಹಿಕ, ಮಾನಸಿಕ, ಸಾಮಾಜಿಕ, ಆರ್ಥಿಕ ಹಾಗೂನೈತಿಕತೆಯ ಸುಂದರ ಸಮಾಜ ನಿರ್ಮಿಸುವುದಕ್ಕೆ ಪ್ರತಿಯೊಬ್ಬರು ವ್ಯಸನಮುಕ್ತರಾಗಬೇಕು ಎಂದು ಇಲಕಲ್ಲ ವಿಜಯಮಹಾಂತೇಶ್ವರ ಸಂಸ್ಥಾನಮಠದ ಗುರುಮಹಾಂತ ಸ್ವಾಮೀಜಿ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಜ್ಯಮಧ್ಯಪಾನಸಂಯಮಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ, ಶಿಕ್ಷಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಲಿಂ.ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ದೇಹದ ಆರೋಗ್ಯಕ್ಕೆ ಮಾರಕವಾದ ದುಶ್ಚಟಗಳನ್ನು ಪ್ರಚೋದಿಸಲು ಪ್ರಖ್ಯಾತರು, ಸಿರಿವಂತರು ಹಾಗೂ ನಟರನ್ನು ಬಳಸಿಕೊಂಡು ಜಾಹೀರಾತುಗಳನ್ನು ಮಾಡುತ್ತಿದ್ದಾರೆ. ಇದರಿಂದ ಅವರು ಪ್ರಗತಿಯಾಗುತ್ತಾರೆ ಹೊರತು ಸಾಮಾನ್ಯ ಜನರು ರೋಗಗ್ರಸ್ಥರಾಗಿ ಶಾರೀರಿಕವಾಗಿ ಹಾಗೂ ಮಾನಸಿಕವಾಗಿ ದುರ್ಬಲರಾಗುತ್ತಾರೆ. ಇದಕ್ಕೆಲ್ಲ ಕೊನೆ ಹೇಳಬೇಕಾದರೆ ಮುಂದಿನ ಪ್ರಜೆಗಳಾಗುವ ವಿದ್ಯಾರ್ಥಿಗಳು ನಿಮ್ಮ ಕುಟುಂಬದಲ್ಲಿ ಪಾಲಕರು ಹಾಗೂ ಪರಿಸರದಲ್ಲಿ ದುಶ್ಚಟಕ್ಕೆ ಬಲಿಯಾದ ವ್ಯಕ್ತಿಯನ್ನು ತಿದ್ದುವ ಕಾರ್ಯ ಮಾಡಬೇಕು. ನೀವು ದುಶ್ಚಟ ವಿರೋಧಿಯ ರಾಯಬಾರಿಗಳಾಗಿ ಕಾರ್ಯನಿರ್ವಹಿಸಬೇಕು ಎಂದು ಶ್ರೀಗಳು ಹೇಳಿದರು.

ದುಶ್ಚಟಗಳ ದುಷ್ಪರಿಣಾಮ ಜಾಗತಿಕ ಮಟ್ಟದ ಸಮಸ್ಯೆಯಾಗಿದೆ. ಅಮೇರಿಕಾದಲ್ಲಿ ಸಿಗರೇಟ ಸೇವನೆಯಿಂದ ರೋಗಗ್ರಸ್ಥರಾಗಿದ್ದನ್ನು ಜನರೇ ಗಮನಿಸಿ ಸ್ವಮನಸ್ಸಿನಿಂದ ಸಿಗ-ರೇಟ ಸೇದುವದನ್ನು ಬಿಟ್ಟಿದ್ದರಿಂದ ಪ್ರತಿಷ್ಠಿತ 5 ಸಿಗರೇಟ ಕಂಪನಿಗಳು ಮುಚ್ಚಲ್ಪಟ್ಟಿವೆ. ನಮ್ಮ ರಾಜ್ಯದಲ್ಲಿಯು ಕೂಡಾ ಈ ಬದಲಾವಣೆ ಆಗಬೇಕಿದೆ ಎಂದರು. ಪೂಜ್ಯ ಮಹಾಂತ ಶಿವಯೋಗಿಗಳು ಭಕ್ತರು ಆರೋಗ್ಯದಿಂದ ಇರಲಿ ಎಂಬ ಉದ್ದೇಶದಿಂದ ಭಕ್ತರಿಂದ ಯಾವ ಕಾಣಿಕೆಯನ್ನು ಬೇಡದೇ ದುಶ್ಚಟಗಳನ್ನು ನನ್ನ ಜೋಳಿಗೆಗೆ ಹಾಕಿ ಎಂದು ರಾಜ್ಯದಾದ್ಯಂತ ಅಭಿಯಾನ ಮಾಡಿ ಲಕ್ಷಾಂತರ ಕುಟುಂಬಗಳನ್ನು ಉಳಿಸಿದ್ದಾರೆ. ಪೂಜ್ಯರ ಸಾಧನೆ ಕಂಡು ಅವರ ಜನ್ಮ ದಿನದಂದು ಸರಕಾರ ವ್ಯಸನಮುಕ್ತ ದಿನಾಚರಣೆಯನ್ನಾಗಿ ಘೋಷಿಸಿದ್ದು ಸ್ವಾಗತಾರ್ಹ ಎಂದರು.

ಬಾಗಲಕೋಟೆ-ಚಿತ್ರದುರ್ಗದ ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮಿಗಳು ಮಾತನಾಡಿ, ಪ್ರತಿಯೊಬ್ಬರು ಮಹಾತ್ಮರ ವಚನಗಳನ್ನು ಹೇಳುತ್ತಾರೆ ಹೊರತು ಅವುಗಳನ್ನು ಪರಿಪಾಲಿಸುತ್ತಿಲ್ಲ. ಅದೇ ರೀತಿ ದುಶ್ಚಟಕ್ಕೆ ಬಲಿಯಾದವರು ಮತ್ತೊಬ್ಬರನ್ನು ಹೋಲಿಕೆ ಮಾಡುತ್ತಾರೆ ಹೊರತು ತಮ್ಮನ್ನು ತಾವು ವಿಮರ್ಶೆ ಮಾಡಿಕೊಳ್ಳುವದಿಲ್ಲ. ಆದರ್ಶದ ಮಾತುಗಳನ್ನು ಹೇಳಿದರೆ ಸಾಲದು ನಡೆದುಕೊಳ್ಳುವುದು ಮುಖ್ಯವಾಗಿದೆ ಎಂದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಸಿ.ಮಿರ್ಜಿ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣವಂತರಾದರೆ ಸಾಲದು. ದೈಹಿಕವಾಗಿ, ಮಾನಸಿಕವಾಗಿ, ಭಾವನಾತ್ಮಕವಾಗಿ ಹಾಗೂ ನೈತಿಕವಾಗಿ ಸದೃಢರಾದಾಗ ಮಾತ್ರ ಸಮಾಜ ಹಾಗೂ ಕುಟುಂಬಕ್ಕೆ ಉತ್ತಮ ಕೊಡುಗೆ ನೀಡಿದಂತಾಗುತ್ತದೆ. ಪೂಜ್ಯ ಮಹಾಂತ ಶ್ರೀಗಳು ತಮ್ಮ ಜೋಳಿಗೆಯಲ್ಲಿ ದುಶ್ಚಟಗಳನ್ನು ಹಾಕಿ ಎಂದು ರಾಜ್ಯದಾದ್ಯಂತ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಿದ್ದಾರೆ. ವಿದ್ಯಾರ್ಥಿಗಳು ದುಶ್ಚಟಗಳ ದುಷ್ಪರಿಣಾಮಗಳನ್ನು ಅರಿಯಬೇಕು ಎಂದರು.

ಉಪನ್ಯಾಸ ನೀಡಿದ ನಾಗರತ್ನಾ ಭಾವಿಕಟ್ಟಿ, ನಾಡಿದಾದ್ಯಂತ ಪ್ರಸಿದ್ದಿ ಪಡೆದ ಮಠಗಳೆಲ್ಲ ಅನೇಕ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿ ಶಿಕ್ಷಣ ಸಂಸ್ಥೆ, ಅನಾಥಾಲಯ, ಗೋಶಾಲೆ ಮುಂತಾದವುಗಳನ್ನು ಪ್ರಾರಂಭಿಸಿದರೆ, ಚಿತ್ತರಗಿಯ ಪೂಜ್ಯ ಮಹಾಂತ ಶ್ರೀಗಳು ಯಾವುದೇ ಫಲಾಪೇಕ್ಷೆ ಇಲ್ಲದೇ ನಿಮ್ಮಲ್ಲಿರುವ ದುಶ್ಚಟಗಳನ್ನು ಜೋಳಿಗೆಗೆ ಹಾಕಿ ಎಂದು ಅಭಿಯಾನ ಪ್ರಾರಂಭಿಸಿದರು. ಈ ಅಭಿಯಾನ ಹುನಗುಂದ ತಾಲೂಕಿನಲ್ಲಿ ನಡೆದ ಘಟನೆ ಪೂಜ್ಯರ ಮನಸ್ಸಿನ ಮೇಲೆ ಪ್ರಭಾವ ಬೀರಿದ್ದರಿಂದ 1975 ರಲ್ಲಿ ದುಶ್ಚಟ ನಿರ್ಮೂಲನೆಗಾಗಿ ವ್ಯಸನಮುಕ್ತ ಸಮಾಜ ನಿರ್ಮಿಸುವ ಪಣತೊಟ್ಟು ತಮ್ಮ ಈಡೀ ಜೀವನ ಮುಡುಪಾಗಿಟ್ಟಿದ್ದಾರೆ ಎಂದು ಹೇಳಿದರು.

ಲಿಂ. ಡಾ.ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ, ವ್ಯಸನಮುಕ್ತ ದಿನದ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು. ಬಸವಪ್ರಸಾದ ಶ್ರೀಗಳು, ಸಂಗನಬಸವ ಶ್ರೀಗಳು, ಬಸವರಾಜ ಶ್ರೀಗಳು ಸಾನಿಧ್ಯವಹಿಸಿದ್ದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಕುಷ್ಟರೋಗ ನಿರ್ಮೂಲಾಧಿಕಾರಿ ಶಿವನಗೌಡ ಪಾಟೀಲ, ಜಿ.ಪಂ ಯೋಜನಾ ನಿರ್ದೇಶಕ ಎಂ.ಎಸ್.ಕಾಂಬಳೆ, ಡಿವಾಯ್‌ಎಸ್‌ಪಿ ಗಿರೀಶ ಬೋಜನ್ನವರ, ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ, ರಾಜ್ಯ ಮಾವು ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಜಿ.ಎಸ್.ಗೌಡರ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸಂವಿಧಾನದ ಆಶಯ ಅರಿಯಬೇಕು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ಪ್ರತಿಯೊಬ್ಬ ವ್ಯಕ್ತಿಗೂ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ ಒದಗಿಸುವ ಅಮೂಲ್ಯ ಅಂಶಗಳನ್ನು ಒಳಗೊಂಡಿರುವ ನಮ್ಮ ಸಂವಿಧಾನದ ಆಶಯ ಸರ್ವರಿಗೂ ಸಮಬಾಳು, ಸಮಪಾಲು ಎನ್ನುವುದಾಗಿದೆ ಎಂದು ಸತ್ಯಶೋಧಕ ಸಂಘಟನೆಯ ರಾಜ್ಯಾಧ್ಯಕ್ಷ ಪರಶುರಾಮ ಮಹಾರಾಜನವರ ಹೇಳಿದರು.

ತಾಲೂಕಿನ ಬೇವೂರ ಗ್ರಾಮದ ಆದರ್ಶ ಪದವಿಪೂರ್ವ ಕಾಲೇಜಿನಲ್ಲಿ ಮಂಗಳವಾರ ಪಿ.ಎಸ್.ಸಜ್ಜನ ಮಹಾವಿದ್ಯಾಲಯ ಹಾಗೂ ಸತ್ಯಶೋಧಕ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಸಂವಿಧಾನ ಯಾನ' ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮದು ಪ್ರಜಾಪ್ರಭುತ್ವ ರಾಷ್ಟ್ರ. ಉತ್ಕೃಷ್ಟ ಹಾಗೂ ದೊಡ್ಡ ಸಂವಿಧಾನ ಹೊಂದಿರುವ ಭಾರತದಲ್ಲಿ ಹಲವಾರು ಭಾಷೆ, ವೇಷ-ಭೂಷಣ, ಅನೇಕ ಧರ್ಮಗಳ ಮೂಲಕ ನಮ್ಮ ಜನ ಸುವ್ಯವಸ್ಥಿತವಾಗಿ ಬದುಕಲಿಕ್ಕೆ ಮಾಡಿಕೊಂಡಿರುವ ವ್ಯವಸ್ಥೆಯೇ ಸಂವಿಧಾನವಾಗಿದೆ ಎಂದ ಮಹಾರಾಜನವರ, ಪ್ರತಿಯೊಬ್ಬ ವಿದ್ಯಾರ್ಥಿ ಸಂವಿಧಾನದ ಆಶಯಗಳನ್ನು ತಿಳಿದು ನಡೆಯಬೇಕು ಎಂದರು.

ಪ್ರಾಚಾರ್ಯ ವ್ಹಿ ಬಿ ಅರಹುಣಸಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿ ಸಂವಿಧಾನ ಸ್ನೇಹಿಯಾಗಿ ಬಾಳಬೇಕು. ಸಂವಿಧಾನದ ಮಹತ್ವವನ್ನು ಅರಿಯಬೇಕು. ದಿನನಿತ್ಯ ಜೀವನದಲ್ಲಿ ಸಂವಿಧಾನದ ಆಶಯಗಳನ್ನು ಗೌರವಿಸಿ ರೂಢಿಸಿಕೊಂಡಾಗ ಮಾತ್ರ ಭವಿಷ್ಯತ್ತಿನ ಗೌರವಯುತ ಪ್ರಜೆಗಳಾಗಿ ಬಾಳಲು ಸಾಧ್ಯ ಎಂದು ಹೇಳಿದರು.

ಆದರ್ಶ ವಿದ್ಯಾವರ್ಧಕ ಸಂಘದ ಅಧ್ಯಕ್ಷ, ವಕೀಲ ಜಿ.ಜಿ.ಮಾಗನೂರ, ಉಪಾಧ್ಯಕ್ಷ ರತನಕುಮಾರ ವೈಜಾಪೂರ, ಗ್ರಾಪಂ ಸದಸ್ಯ ಶರಣಪ್ಪ ಮಾಗನೂರ, ಭೀಮವಾದ ದಲಿತ ಸಂಘಟನಾ ಸಮಿತಿಯ ರಾಜ್ಯ ಸಂಚಾಲಕ ಗ್ಯಾನಪ್ಪ ಚಲವಾದಿ, ಸತ್ಯಶೋಧನ ಸಂಸ್ಥೆಯ ಸಂಚಾಲಕ ಎ.ಬಿ.ಕಲಾಲ, ಮುಖ್ಯಗುರು ಯೋಗೇಶ ಲಮಾಣಿ, ಉಪನ್ಯಾಸಕರಾದ ಜೆ.ಕೆ.ಮಲ್ಲಾಪೂರ, ಎಸ್.ಎನ್.ಬಾರ್ಕಿ, ಎಸ್.ಬಿ.ಹಂಚನಾಳ, ಆದಪ್ಪ ಗೊಡಚಿಕ್ಕನವರ, ಜಿ.ಎಸ್.ಗೌಡರ, ಡಿ.ವಾಯ್.ಬುಡ್ಡಿಯವರ, ವಸಂತಕುಮಾರ ನಿಲುಗಲ್ಲ ವೇದಿಕೆಯಲ್ಲಿದ್ದರು.

ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕ ಪ್ರಕಾಶ ತಳವಾರ ಸಂವಿಧಾನ ಪೀಠಿಕೆ ಓದಿದರು. ಎಸ್.ಕೆ.ಮಾಡೊಳ್ಳಿ ನಿರೂಪಿಸಿದರು. ಎ.ಜಿ.ಮಾಗನೂರ ವಂದಿಸಿದರು.

# ಶಿಸ್ತು, ಏಕಾಗ್ರತೆಯಿಂದ ಯಶಸ್ಸು ಸಾಧಿಸಲು ಸಾಧ್ಯ-ಡಾ.ಸಂಗಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ಜೀವನದಲ್ಲಿ ಶಿಸ್ತು, ಏಕಾಗ್ರತೆಯನ್ನು ರೂಢಿಸಿಕೊಂಡರೆ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ ಎಂದು ಡಾ.ಗಿರೀಶ ಸಂಗಮ ಹೇಳಿದರು.

ನಗರದ ಬಿವಿವಿ ಸಂಘದ ಬಸವೇಶ್ವರ ಸಂಯುಕ್ತ ಪದವಿ ಪೂರ್ವ ಕಾಲೇಜಿನ 2025-26ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ ಹಾಗೂ ಎನ್.ಎನ್.ಎಸ್.ಚಟುವಟಿಕೆಗಳ ಉದ್ಘಾಟನೆ ಮತ್ತು ಪಿ.ಯು.ಸಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮದಲ್ಲಿ ಸರಸ್ವತಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಕಠಿಣ ಪರಿಶ್ರಮ, ಸತತ ಓದು ಸಾಧನೆಗೆ ಮೂಲವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಕೆ.ಎಚ್.ಹೊಸೂರ ಮಾತನಾಡಿ, ಅಧ್ಯಯನವೇ ಅಸ್ತ್ರ, ಶ್ರಮವೇ ಶಕ್ತಿ ಎಂದರು. 2024-25ನೇ ಸಾಲಿನ ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ ಕಾಲೇಜಿಗೆ ಪ್ರಥಮ ಸ್ಥಾನ ಪಡೆದ ರೇಣುಕಾ ತೆಗ್ಗಿನಮನಿ ಹಾಗೂ ಕಲಾವಿಭಾಗದ ಮಂಜುನಾಥ ತಳವಾರ, ವಿಜ್ಞಾನ ವಿಭಾಗದ ಸೃಷ್ಟಿ ಬಾವಲತ್ತಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವಿ.ಬಿ.ಕೋರೆ, ವಿ.ಬಿ.ಬಳಿಗಾರ, ವಾಯ್.ಎಮ್.ಪಾಟೀಲ ವೇದಿಕೆಯಲ್ಲಿ ಇದ್ದರು. ಸುಧಾ ಮಾಳಗಿಮನಿ ಸ್ವಾಗತಿಸಿದರು. ಚೆನ್ನಮ್ಮ ಹಾಗ ಮಲ್ಲು ನಿರೂಪಿಸಿದರು. ಬಸವರಾಜ ಬಡಿಗೇರ ವಂದಿಸಿದರು.

# ಯುವ ಕವಿಗೋಷ್ಠಿಗೆ ಕವಿತೆಗಳ ಆವ್ಹಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕರ್ನಾಟಕ ಜಾನಪದ ಪರಿಷತ್ತು ಬಾಗಲಕೋಟೆ ಇವರ ಸಹಯೋಗದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಜಿಲ್ಲಾಮಟ್ಟದ ಯುವ ಕವಿಗೋಷ್ಠಿ ಆಯೋಜಿಸಲಾಗಿದೆ.

18ರಿಂದ 40 ವರ್ಷದೊಳಗಿನ ಯುವ ಸಾಹಿತಿಗಳು ತಮ್ಮ 2 ಕವಿತೆಗಳನ್ನು ಆಗಷ್ಟ 13ರೊಳಗಾಗಿ ಆರ್.ಸಿ.ಚಿತ್ತವಾಡಗಿ, ಕೋಶಾಧ್ಯಕ್ಷರು ಕರ್ನಾಟಕ ಜಾನಪದ ಪರಿಷತ್ತು (9900346618) ಇವರನ್ನು ಸಂಪರ್ಕಿಸುವಂತೆ ಕನ್ನಡ ಸಾಹಿತ್ಯ ಪರಿಷತ್ತ ಜಿಲ್ಲಾ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾತಂತ್ರ್ಯೋತ್ಸವ ಜಿಲ್ಲಾ ಪ್ರಶಸ್ತಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ಪ್ರಸಕ್ತ ಸಾಲಿನ ಜಿಲ್ಲಾ ಸ್ವಾತಂತ್ರ್ಯೋತ್ಸವದ ಅಂಗವಾಗಿ ಕ್ರೀಡೆ, ಸಾಹಿತ್ಯ, ವಿಜ್ಞಾನ, ಸಾಮಾಜಿಕ ಕ್ಷೇತ್ರದಲ್ಲಿ ಅನನ್ಯ ಸೇವೆ ಸಲ್ಲಿಸಿರುವ ಸಾಧಕರಿಗೆ ಪ್ರಶಸ್ತಿಗಾಗಿ ಅರ್ಜಿ ಆವ್ಹಾನಿಸಲಾಗಿದೆ.

ಆಸಕ್ತರು ಸ್ವ-ವಿವರದೊಂದಿಗೆ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಕಲಾಭವನ ಸಾಂಸ್ಕೃತಿಕ ಸಮುಚ್ಚಯ, ಸೆಕ್ಟರ ನಂ.19, 6ನೇ ರಸ್ತೆ, ನವನಗರ, ಬಾಗಲಕೋಟೆ ಇವರಿಗೆ ಆಗಸ್ಟ 11 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05-ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 2025-26ನೇ ಸಾಲಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಆಗಸ್ಟ್ 11 ರವರೆಗೆ ವಿಸ್ತರಿಸಲಾಗಿದೆ.

ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯುಪಿಎಸ್‌ಸಿ ನಾಗರೀಕ ಸೇವೆ, ಕೆಎಎಸ್, ಗೆಜೆಟೆಡ್ ಪ್ರೊಬೆಷನರಿ, ಗ್ರೂಪ್-ಸಿ, ಆರ್‌ಆರ್‌ಬಿ ಮತ್ತು ಎಸ್‌ಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಆನ್‌ಲೈನ್ ಪೋರ್ಟಲ್ ಲಿಂಕ್ https://sevasindhu.karnataka.gov.in ಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಹತ್ತಿರದ ಮೌಲಾನ ಅಜಾದ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕಚೇರಿ ಅಥವಾ ದೂ.08392-200125/224 ಗೆ ಸಂಪರ್ಕಿಸಬಹುದು.

ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರಗಳಲ್ಲಿ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿಯೂ ಸಹ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನ ಕೈಮಗ್ಗ ನೇಕಾರನಿಗೆ ರಾಜ್ಯ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ಸಾಧನೆಗೆ ಅಂಗವೈಕಲ್ಯ ಅಡ್ಡಿಯಾಗದು ಎಂಬುದಕ್ಕೆ ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ನಿವಾಸಿ ವಿಕಲಚೇತನ ಲಕ್ಷ್ಮಣ ಕಕ್ಕನ್ನವರ ಸಾಕ್ಷಿಯಾಗಿದ್ದು, ರಾಜ್ಯ ಪ್ರಶಸ್ತಿ ಪಡೆಯುವ ಮೂಲಕ ಸವಾಲಿನ ಜೀವನಕ್ಕೆ ಅರ್ಥ ತಂದುಕೊಂಡಿದ್ದಾನೆ.

> ಪ್ರತಿಭೆಯಿದ್ದರೆ ಸಾಧನೆಗೆ ಯಾವುದು ಅಡ್ಡಿಯಾಗದು ಎಂಬುದಕ್ಕೆ ಸಾಕ್ಷಿಯಾಗಿರುವ ವಿಕಲಚೇತನ ಲಕ್ಷ್ಮಣ ಕಕ್ಕನ್ನವರ ಅವರಿಗೆ ರಾಜ್ಯ ಪ್ರಶಸ್ತಿ ಬಂದಿರುವುದು ಸಂತಸದ ಸಂಗತಿ. ಬದುಕಿನ ಹೋರಾಟದಲ್ಲೂ ತನ್ನ ಸಾಮರ್ಥ್ಯದ ಮೂಲಕ ಸಾಧನೆಗೆ ಪಾತ್ರರಾಗಿರುವ ಲಕ್ಷ್ಮಣ ಇತರರಿಗೆ ಮಾದರಿಯಾಗಿದ್ದಾನೆ. ಇದು ಕಮತಗಿ ಪಟ್ಟಣಕ್ಕೆ ದೊಡ್ಡ ಹೆಮ್ಮೆ ಎನ್ನುತ್ತಾರೆ ಚಾಮುಂಡೇಶ್ವರಿ ರೇಷ್ಮೆ ಕೈಮಗ್ಗ ನೇಕಾರ ಸಹಕಾರ ಸಂಘದ ಕಾರ್ಯದರ್ಶಿ ಪಾಂಡುರಂಗ ಹೋಟಿ.

ನೇಕಾರಿಕೆ ಕುಟುಂಬದಲ್ಲಿ ಜನಿಸಿದ ಲಕ್ಷ್ಮಣ ಸಿದ್ದಪ್ಪ ಕಕ್ಕನ್ನವರ ರಾಜ್ಯ ಸರ್ಕಾರ ಕೈಮಗ್ಗ ದಿನಾಚರಣೆ(ಆಗಷ್ಟ 7)ಯಂದು ಉತ್ತಮ ನೇಕಾರಿಕೆಗೆ ಕೊಡಮಾಡುವ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಾಜ್ಯದ ಐವರು ಕುಶಲ ನೇಕಾರರಿಗೆ ನೀಡಲಾಗುವ ಪ್ರಶಸ್ತಿ ಗೌರವಕ್ಕೆ ಪಾತ್ರರಾಗಿರುವವರಲ್ಲಿ ಲಕ್ಷ್ಮಣ ಒಬ್ಬರಾಗಿದ್ದು, ಹತ್ತಿ ನೇಯ್ಗೆ ವಿಭಾಗದಲ್ಲಿ ಇಳಕಲ್ಲ ಮಾದರಿಯ ಕಾಟನ್(ಹತ್ತಿ)ಮೊಮೆಂಟ್ ಸೀರೆ ನೇಯ್ಗೆಗೆ ಪ್ರಶಸ್ತಿ ಬಂದಿದೆ.

ಲಕ್ಷ್ಮಣ ಕಕ್ಕನ್ನವರ ವಿಕಲಚೇತನನಾಗಿದ್ದರೂ ಕೈಮಗ್ಗ ನೇಕಾರಿಕೆಯಿಂದ ಜೀವನ ನಡೆಸುತ್ತಾ ಬಂದಿದ್ದಾರೆ. ಬಡತನ ಕುಟುಂಬ, ಜೀವನದ ಅನೇಕ ಸವಾಲುಗಳು ಇದ್ದಾಗಲೂ ಅದನ್ನು ಲೆಕ್ಕಿಸದೇ ಒಂಟಿ ಕಾಲಿನಿಂದ ನೇಯುವ ತನ್ನ ಸಾಮರ್ಥ್ಯವನ್ನು ಬಳಸಿಕೊಂಡು ಸೀರೆ ನೇಯುವ ಅಪೂರ್ವ ಕಲೆಯನ್ನು ರೂಢಿಸಿಕೊಂಡಿದ್ದಾರೆ.

ದೇಶಾದ್ಯಂತ ಇಳಕಲ್ ಮಾದರಿಯ ಕಾಟನ್ ಸೀರೆಗಳಿಗೆ ಬಹು ದೊಡ್ಡ ಬೇಡಿಕೆ ಇರುವುದು ಎಲ್ಲರಿಗೂ ತಿಳಿದ ವಿಷಯ. ಈ ಸೀರೆ ನೇಯುವ ಶೈಲಿಯನ್ನು ಬೆಳೆಸಿಕೊಂಡಿರುವ ಕಕ್ಕನ್ನವರು, ಕಮತಗಿಯ ಚಾಮುಂಡೇಶ್ವರ ರೇಷ್ಮೆ ಕೈಮಗ್ಗ ನೇಕಾರ ಸಹಕಾರ ಸಂಘದ ಸದಸ್ಯರಾಗಿ ಸಂಘದ ಕಾರ್ಯದರ್ಶಿ ಪಾಂಡುರಂಗ ಹೋಟಿ ಅವರ ಮಾರ್ಗದರ್ಶನದಲ್ಲಿ ನೇಯ್ಗೆಯಲ್ಲ ವಿನೂತನ ಪ್ರಯೋಗ ಮಾಡುತ್ತಿದ್ದಾರೆ.

ಕಾಯಕದಲ್ಲಿ ಶಿಸ್ತು ಮತ್ತು ನಂಬಿಕೆ ಬೆಳೆಸಿಕೊಂಡಿರುವ ಲಕ್ಷ್ಮಣ, ಇದನ್ನು ತನ್ನ ಬದುಕಿನಲ್ಲೂ ಅಳವಡಿಸಿಕೊಂಡಿದ್ದಾರೆ. ಇವರ ಪತ್ನಿ ಚನ್ನಮ್ಮ ಸಹ ವಿಕಲಚೇತನರಾಗಿದ್ದು, ಪತಿಯ ಕೆಲಸದಲ್ಲಿ ಸಹಭಾಗಿಯಾಗಿ ಸಹಕಾರದೊಂದಿಗೆ ಕಾಯಕ ಮಾಡಿಕೊಂಡು ಬಂದಿದ್ದಾರೆ.

ವಿಕಲಚೇತನನಾಗಿದ್ದರೂ ಸೀರೆ ನೇಯುವ ಕಲೆಯಲ್ಲಿ ನಾವಿನ್ಯತೆ ಬೆಳೆಸಿಕೊಂಡಿರುವ ಲಕ್ಷ್ಮಣ ಅವರಿಗೆ ರಾಜ್ಯ ಪ್ರಶಸ್ತಿ ಲಭಿಸಿರುವುದಕ್ಕೆ ಇಡೀ ಕಮತಗಿ ಪಟ್ಟಣ ಹೆಮ್ಮೆಪಡುತ್ತಿದೆ. ಆಗಷ್ಟ 7 ರಂದು ಬೆಂಗಳೂರಿನ ಕಬ್ಬನ್ ಪಾರ್ಕ ನೌಕರರ ಭವನದಲ್ಲಿ ನಡೆಯುವ ಸಮಾರಂಭದಲ್ಲಿ ಲಕ್ಷ್ಮಣ ಪ್ರಶಸ್ತಿ ಪಡೆಯಲಿದ್ದು, ಪಟ್ಟಣದ ಜನತೆ ಅವರಿಗೆ ಶುಭ ಹಾರೈಸಿದ್ದಾರೆ.



ಸುನೀಲ ಮಾರಬಸರಿ ಕಮತಗಿ

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕ್ರೀಡೆ ಸಹಕಾರಿ :ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.5-ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡಾ ಚಟುವಟಿಕೆಗಳು ಸಹಕಾರಿಯಾಗುತ್ತವೆ ಎಂದು ದೈಹಿಕ ಶಿಕ್ಷಣ ಪರಿವೀಕ್ಷಕ ಆರ್.ಆರ್.ಪಾಟೀಲ ಹೇಳಿದರು.

ತಾಲೂಕಿನ ಕಲಾದಗಿ ಗ್ರಾಮದ ಹಣ್ಣು ಬೆಳೆಗಾರರ ಪ್ರೌಢ ಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ಕಲಾದಗಿ ವಲಯ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ಕ್ರೀಡಾಪಟುಗಳು ಕ್ರೀಡಾ ಮನೋಭಾವನೆಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಸೋಲು-ಗೆಲುವು ಮುಖ್ಯವಲ್ಲ. ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದು ಮಹತ್ವವಾಗಿದೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯ-ಕ್ಷೆ ಖಾತುನಬಿ ರೋಣ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಶಿಕ್ಷಕ ಆರ್.ಪಿ.ಜೋಶಿ ಕ್ರೀಡಾಪಟುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಗ್ರಾಮ ಪಂಚಾಯತಿ ಉಪಾಧ್ಯಕ್ಷ ಫಕೀರಪ್ಪ ಮಾದರ, ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕ ವೈ.ಬಿ.ಸಾಲಿ, ಶಾಲಾ ಮೇಲುಸ್ತುವಾರಿ ಸಮೀತಿ ಅಧ್ಯಕ್ಷ ಸಲೀಂ ಜಮಾದಾರ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಎಲ್.ಹವಾಲ್ದಾರ, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಮಂಜುನಾಥ ಹೆಡಗಿ, ಐ.ಎಮ್.ಮನಿಯಾರ, ಗುರುಲಿಂಗೇಶ್ವರ ಪ್ರೌಢಶಾಲೆಯ ಮುಖ್ಯಶಿಕ್ಷಕ ಎಸ್.ವಿ.ಲಮಾಣಿ, ಹಣ್ಣು ಬೆಳೆಗಾರರ ಶಾಲಾ ಮುಖ್ಯ ಶಿಕ್ಷಕ ಶ್ರೀಕಾಂತ ಕೆರಕಲಮಟ್ಟಿ, ಆರ್.ವಿ.ಜಾಧವ, ಗ್ರಾಪಂ ಸದಸ್ಯ ಬಾಬು ತೇಲಿ, ದೈಹಿಕ ಶಿಕ್ಷಣ ಶಿಕ್ಷಕ ಸಿ.ಕೆ.ಚನ್ನಾಳ, ಶಾಲಾ ಮುಖ್ಯ ಶಿಕ್ಷಕಿ ಆರ್.ಎ.ಪಟೇಲ್ ಹಾಗೂ ಶಿಕ್ಷಕರಾದ ಅಲ್ಲಾಭಕ್ಷ ಹಕ್ಕಿಮ್, ಅಬ್ದುಲ್‌ರೆಹಮಾನ್ ಸೈಯದ್ ಇದ್ದರು. ಶಿಕ್ಷಕ ಆರ್.ಕೆ.ವಾಲಿಕಾರ ಸ್ವಾಗತಿಸಿ, ವಂದಿಸಿದರು. ಕಲಾದಗಿ ವಲಯ ಮಟ್ಟದ ಕ್ರೀಡಾಕೂಟದ ನೇತೃತ್ವವನ್ನು ಸರಕಾರಿ ಬಾಲಕಿಯರ ಉರ್ದು ಹಿರಿಯ ಪ್ರಾಥಮಿಕ ಶಾಲೆ ವಹಿಸಿಕೊಂಡಿತ್ತು.

# ಬೆಳಗಲ್: ಆ.09 ರಂದು ಶ್ರೀ ಆಂಜನೇಯ ಸ್ವಾಮಿ ರಥೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.05-ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿ ಇಲಾಖೆ ವ್ಯಾಪ್ತಿಗೊಳಪಡುವ ಬಳ್ಳಾರಿ ತಾಲ್ಲೂಕಿನ ಬೆಳಗಲ್ ಗ್ರಾಮದ ಶ್ರೀ ಆಂಜನೇಯ ಸ್ವಾಮಿಯ ರಥೋತ್ಸವವು ಶ್ರಾವಣ 3ನೇ ಶನಿವಾರವಾದ ಆಗಸ್ಟ್ 09 ರಂದು ಸಂಜೆ 05.15 ಗಂಟೆಗೆ ನಡೆಯಲಿದೆ.

ಸಾರ್ವಜನಿಕರು, ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿ ಇಲಾಖೆಯ ಸಹಾಯಕ ಆಯುಕ್ತರು ಕೋರಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ




# ಆಶಾಕಿರಣ

## ಬದುಕಿನ ದೃಷ್ಟಿಯ ಮರುಗಳಿಕೆ

- ದೃಷ್ಟಿ ಕಳೆದುಕೊಳ್ಳುವಿಕೆಯ ಪ್ರಮಾಣವನ್ನು ತಗ್ಗಿಸಲು ರಾಜ್ಯಾದ್ಯಂತ ದೊಡ್ಡ ಮಟ್ಟದ ಕಣ್ಣಿನ ತಪಾಸಣೆ ಕಾರ್ಯಕ್ರಮ ಜಾರಿ
- ಮಕ್ಕಳು ಸೇರಿದಂತೆ ಸುಮಾರು 6 ಲಕ್ಷ ಮಂದಿಗೆ ಕನ್ನಡಕಗಳ ಪೂರೈಕೆ
- 44,000+ ಮಂದಿಗೆ ಉಚಿತ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ
- ಮುನ್ನೆಚ್ಚರಿಕೆ ಕ್ರಮಗಳು, ಆರಂಭಿಕ ಹಂತದಲ್ಲೇ ದೋಷ ಪತ್ತೆ ಮತ್ತು ಲಭ್ಯವಿರುವ ಚಿಕಿತ್ಸೆ ಬಗ್ಗೆ ಮಾಹಿತಿ ನೀಡಲು ಹೆಚ್ಚಿನ ಆದ್ಯತೆ
- ಹೆಚ್ಚಿನ ವ್ಯಾಪ್ತಿಯನ್ನು ತಲುಪಲು ಜಿಲ್ಲಾದ್ಯಂತ ಎರಡು ಹಂತದಲ್ಲಿ ಜಾರಿ

ಸ್ಪಷ್ಟ ದೃಷ್ಟಿ

**ಪ್ರಕಾಶಮಾನ ಭವಿಷ್ಯ!**



**ಕರ್ನಾಟಕ ನವ ನಿರ್ಮಾಣಕ್ಕೆ**

## ಗ್ಯಾರಂಟಿ ಸರ್ಕಾರ...

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಗಡಿ ತಾಲ್ಲೂಕುಗಳಿಂದ ಪ್ರಕಟವಾಗುವ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು